23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 321 | ನವದೆಹಲಿ | ಬೆಲೆ ₹ 10 | ಮೇ 27, 2026, ಬುಧವಾರ

## ಒಳಪುಟಗಳಲ್ಲಿ

ಸಾಮಾಜಿಕ ಭದ್ರತಾ ಯೋಜನೆಗಳಿಂದ 95 ಕೋಟಿ ಜನರಿಗೆ ಪ್ರಯೋಜನ: ಪ್ರಧಾನಿ ಮೋದಿ ಪ್ರಶಂಸೆ- ಪು.4

ಬಹು ನಿರೀಕ್ಷಿತ ಹೊಸ ರೈಲ್ವೆ ಯೋಜನೆಗಳಿಗೆ ರಾಜ್ಯ ಸರ್ಕಾರದಿಂದ ರೆಡ್ ಸಿಗ್ನಲ್: ಬಿಜೆಪಿ ತರಾಟೆ- ಪು.5

# ನಾಳೆಯೊಳಗೆ ಸಿದ್ದರಾಮಯ್ಯ ರಾಜೀನಾಮೆ ಸಾಧ್ಯತೆ

## ಕರ್ನಾಟಕದ 25ನೇ ಸಿಎಂ ಡಿ.ಕೆ.ಶಿವಕುಮಾರ್?



■ ಸರಣಿ ಸಭೆಗಳ ನಂತರ ನಾಯಕತ್ವ ಕಗ್ಗಂಟು ಬಗೆಹರಿಸಿದ ಕಾಂಗ್ರೆಸ್ ಹೈಕಮಾಂಡ್

■ ಗುರುವಾರ ಶಾಸಕಾಂಗ ಸಭೆ ಸಾಧ್ಯತೆ

**ನವದೆಹಲಿ, ಮೇ 26:** ಕಾಂಗ್ರೆಸ್‌ನಲ್ಲಿನ ಪವರ್ ಶೇರಿಂಗ್ ಬಿಕ್ಕಟ್ಟು ಮತ್ತಷ್ಟು ಕುತೂಹಲಕಾರಿ ಘಟ್ಟಕ್ಕೆ ತಲುಪಿದೆ. ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡುವ ಸಾಧ್ಯತೆ ಇದೆ.

ಕಾಂಗ್ರೆಸ್ ಕಚೇರಿ ಇಂದಿರಾ ಭವನದಲ್ಲಿ ಹೈಕಮಾಂಡ್ ನಾಯಕರೊಂದಿಗೆ ನಡೆದ ಸರಣಿ ಸಭೆಗಳ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವ ನಿರ್ಧಾರಕ್ಕೆ ಬಂದಿದ್ದಾರೆ ಎನ್ನಲಾಗಿದೆ.

ಗುರುವಾರ ಬೆಳಗ್ಗೆ ಸಿಎಂ ನಿವಾಸದಲ್ಲಿ ಸಚಿವರಿಗೆ ಬ್ರೇಕ್‌ಫಾಸ್ಟ್ ಇರಲಿದೆ. ಬ್ರೇಕ್‌ಫಾಸ್ಟ್ ಬಳಿಕ ಸಿಎಂ ಸಿದ್ದರಾಮಯ್ಯ ಪತ್ರಿಕಾ ಗೋಷ್ಠಿ ನಡೆಸಲಿದ್ದಾರೆ. ನಂತರ ರಾಜಭವನಕ್ಕೆ ತೆರಳಿ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಗುರುವಾರ ರಾಜೀನಾಮೆ ಬಳಿಕ ಸಂಜೆ ಅಥವಾ ಶುಕ್ರವಾರ ಬೆಳಗ್ಗೆ ಶಾಸಕಾಂಗ ಸಭೆ ನಡೆಯುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ. ಸಿಎಂ ಪಟ್ಟ ಒಲಿದು ಬಂದ್ರೆ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಡಿ.ಕೆ.ಶಿವಕುಮಾರ್ ಗುರುವಾರವೇ ರಾಜೀನಾಮೆ ನೀಡುವ ಸಾಧ್ಯತೆ ಇದೆ.

ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ನಿನ್ನೆ ಕಾಂಗ್ರೆಸ್ ಹೈಕಮಾಂಡ್ ಬುಲಾವ್ ನೀಡಿತ್ತು. ಅದರಂತೆ ಕೆಲ ಸಚಿವರೊಂದಿಗೆ ಸಿಎಂ ಹಾಗೂ ಒಬ್ಬರೇ ಡಿಸಿಎಂ ದೆಹಲಿಗೆ ಪ್ರಯಾಣಿಸಿದ್ದರು. ಮಂಗಳವಾರ ಬೆಳಗ್ಗೆಯಿಂದ ಸಾಯಂಕಾಲದವರೆಗೂ ಸಭೆಗಳನ್ನು ನಡೆಸಲಾಯಿತು. ನಾಯಕತ್ವ ಬದಲಾವಣೆ ಬಗ್ಗೆ ಇಂದೇ ನಿರ್ಧಾರ ಆಗುತ್ತದೆಂದು ಭಾವಿಸಲಾಗಿತ್ತು. ಆದರೆ, ಯಾವುದೇ ಗುಟ್ಟು ಬಿಟ್ಟು ಕೊಡದ ಹೈಕಮಾಂಡ್ ನಾಯಕರು ಸಭೆ ಬಳಿಕ ಸುದ್ದಿಗೋಷ್ಠಿ ನಡೆಸಿ, ಯಾವುದೇ ನಾಯಕತ್ವ ಬದಲಾವಣೆ ಇಲ್ಲ. ರಾಜ್ಯಸಭಾ ಚುನಾವಣೆ ಬಗ್ಗೆಯಷ್ಟೇ ಚರ್ಚೆ ನಡೆಸಲಾಗಿದೆ ಎಂದು ನಾಯಕತ್ವ ಬದಲಾವಣೆ ಊಹಾಪೋಹಕ್ಕೆ ತೆರೆ ಎಳೆದಿತ್ತು.

### ಮ್ಯಾರಥಾನ್ ಮೀಟಿಂಗ್

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಮತ್ತು ಕರ್ನಾಟಕದ ಉಸ್ತುವಾರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೇವಾಲಾ ಅವರ ನೇತೃತ್ವದಲ್ಲಿ ಆರು ಗಂಟೆಗಳ ಕಾಲ ಸರಣಿ ಸಭೆಗಳು ನಡೆದವು. ಪಕ್ಷದ ಪ್ರಧಾನ ಕಚೇರಿಯಲ್ಲಿ ಸಿದ್ದರಾಮಯ್ಯ ಮತ್ತು ಶಿವಕುಮಾರ್ ಅವರೊಂದಿಗೆ ಪ್ರತ್ಯೇಕವಾಗಿ ಸಮಾಲೋಚನೆ ನಡೆಸಲಾಯಿತು.



ನವದೆಹಲಿಯ ಇಂದಿರಾ ಭವನದಲ್ಲಿ ಮಂಗಳವಾರ ಸಭೆಗೂ ಮುನ್ನ ಪರಸ್ಪರ ಮಾತನಾಡಿದ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್.

### ರಾಜೀನಾಮೆ ನೀಡದಂತೆ ಸಿಎಂಗೆ ಆಪ್ತರ ಒತ್ತಡ?

ಹೈಕಮಾಂಡ್ ನಿಂದ ಸಂದೇಶ ಬಂದಿರುವ ಹಿನ್ನೆಲೆಯಲ್ಲಿ ಸಿಎಂಗೆ ರಾಜೀನಾಮೆ ನೀಡದಂತೆ ಆಪ್ತರು ಒತ್ತಾಯ ಮಾಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಅಷ್ಟೇ ಅಲ್ಲದೇ ತಾವೇ ರಾಹುಲ್ ಗಾಂಧಿ ಜೊತೆ ಈ ವಿಷಯವಾಗಿ ಮಾತನಾಡುತ್ತೇವೆ ಎಂದು ಸಿದ್ದರಾಮಯ್ಯ ಆಪ್ತರು ಹೇಳಿರುವುದಾಗಿ ತಿಳಿದುಬಂದಿದೆ. ಇದಕ್ಕೆ ಪ್ರತಿಕ್ರಿಯೆ ನೀಡಿರುವ ಸಿಎಂ ಸಿದ್ದರಾಮಯ್ಯ, ನಾನು ರಾಹುಲ್ ಗಾಂಧಿ ಮಾತನ್ನು ನಿರಾಕರಿಸಲು ಸಾಧ್ಯವಿಲ್ಲ. ನೀವು ಬೇಕಾದರೆ ಹೋಗಿ ಮಾತನಾಡಿ ಎಂದು ಹೇಳಿರುವ ಮಾಹಿತಿ ಲಭ್ಯವಾಗಿದೆ.

### ರಾಷ್ಟ್ರ ರಾಜಕಾರಣದ ಆಹ್ವಾನ ನಿರಾಕರಿಸಿದ ಸಿದ್ದು

ಪಕ್ಷ ಹಾಗೂ ರಾಷ್ಟ್ರ ರಾಜಕಾರಣದ ಹಿತದೃಷ್ಟಿಯಿಂದ ರಾಜ್ಯಸಭಾ ಚುನಾವಣೆಗೆ ಸ್ಪರ್ಧಿಸುವಂತೆ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಆಹ್ವಾನ ನೀಡಿದ್ದು, ತಮಗೆ ರಾಷ್ಟ್ರ ರಾಜಕಾರಣದಲ್ಲಿ ಆಸೆಯಿಲ್ಲ ಎಂದು ನಿರಾಕರಿಸಿದ್ದಾರೆ ಎನ್ನಲಾಗಿದೆ. ಹಾಗೂ ತಮಗೆ 2 ದಿನ ಕಾಲಾವಕಾಶಬೇಕು. ಈಗಲೇ ಏನನ್ನೂ ಹೇಳಲು ಸಾಧ್ಯವಿಲ್ಲ. ತಮ್ಮ ಬೆಂಬಲಿಗರ ಜೊತೆ ಚರ್ಚೆ ನಡೆಸಬೇಕಿದೆ ಎಂದು ಹೇಳಿದರು ಎನ್ನಲಾಗಿದೆ.

## ವಿಧಾನ ಪರಿಷತ್‌ನ 7 ಸ್ಥಾನಗಳಿಗೆ ಜೂ.18ರಂದು ಚುನಾವಣೆ

**ಬೆಂಗಳೂರು, ಮೇ 26:** ರಾಜ್ಯಸಭಾ ಚುನಾವಣೆಯ ಘೋಷಣೆ ಬೆನ್ನಲ್ಲೇ ಕರ್ನಾಟಕದ ವಿಧಾನ ಪರಿಷತ್ ಚುನಾವಣೆಗೂ ದಿನಾಂಕ ಪ್ರಕಟಗೊಂಡಿದೆ. ಜೂನ್ 26ರಂದು ತೆರವಾಗಲಿರುವ ಪರಿಷತ್‌ನ 7 ಸ್ಥಾನಗಳಿಗೆ ಜೂನ್ 18ರಂದು ಚುನಾವಣೆ ನಡೆಯಲಿದೆ. ಕಾಂಗ್ರೆಸ್‌ನ 3, ಬಿಜೆಪಿಯ 3 ಮತ್ತು ಜೆಡಿಎಸ್‌ನ ಓರ್ವ ಸದಸ್ಯರ ಅವಧಿ ಜೂನ್‌ನಲ್ಲಿ ಮುಕ್ತಾಯವಾಗಲಿದೆ. ವೇಳಾಪಟ್ಟಿ: ಜೂ.1: ನಾಮಪತ್ರ ಸಲ್ಲಿಕೆಗೆ ಕೊನೇ ದಿನ, ಜೂ.8: ನಾಮಪತ್ರ ಪರಿಶೀಲನೆ, ಜೂ.9: ನಾಮಪತ್ರ ಹಿಂಪಡೆಯಲು ಕೊನೇ ದಿನ, ಜೂ.11: ಮತದಾನ. ಚುನಾವಣೆಗೆ ದಿನಾಂಕ ಘೋಷಣೆ ಬೆನ್ನಲ್ಲೇ ಆಕಾಂಕ್ಷಿಗಳು ಅಲರ್ಟ್ ಆಗಿದ್ದು, ಸ್ಥಾನ ಗಿಟ್ಟಿಸಲು ಕಾರ್ಯತಂತ್ರ ಶುರುಮಾಡಿದ್ದಾರೆ. ಬಿ.ಕೆ. ಹರಿಪ್ರಸಾದ್, ನಾಸೀರ್ ಅಹ್ಮದ್, ತಿಪ್ಪಣ್ಣ, ಪ್ರತಾಪ್‌ಸಿಂಹ ನಾಯಕ್, ಎನ್. ನಾಗರಾಜು (ಎಂಟಿಬಿ), ಸುನಿಲ್ ವಲ್ಯಾಪುರ ಮತ್ತು ಗೋವಿಂದರಾಜು ಅವರ ಅಧಿಕಾರ ಅವಧಿಯು ಜೂನ್‌ನಲ್ಲಿ ಮುಕ್ತಾಯವಾಗಲಿದೆ. ಇನ್ನು ವಿಧಾನ ಸಭೆಯ ಹಾಲಿ ಬಲಾಬಲವನ್ನು ಗಮನಿಸಿದರೆ ತೆರವಾಗಲಿರುವ 7 ಸ್ಥಾನಗಳ ಪೈಕಿ 5 ಸ್ಥಾನಗಳು ಕಾಂಗ್ರೆಸ್ ಮತ್ತು 2 ಸ್ಥಾನಗಳು ಬಿಜೆಪಿ ಪಾಲಾಗುವ ಸಾಧ್ಯತೆ ಇದೆ. ಆ ಮೂಲಕ ಕಾಂಗ್ರೆಸ್ 2 ಸ್ಥಾನಗಳನ್ನು ಹೆಚ್ಚಿಸಿಕೊಂಡರೆ, ವಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ತಲಾ 1 ಸ್ಥಾನಗಳನ್ನು ಕಳೆದುಕೊಳ್ಳುವ ಲೆಕ್ಕಾಚಾರ ಇದೆ.

## ಸಿಎನ್‌ಜಿ ದರ 2 ರೂ. ಏರಿಕೆ: 15 ದಿನದಲ್ಲಿ 4ನೇ ಬಾರಿ ಹೆಚ್ಚಳ

**ನವದೆಹಲಿ, ಮೇ 26:** ನವದೆಹಲಿಯಲ್ಲಿ ಸಂಕುಚಿತ ನೈಸರ್ಗಿಕ ಅನಿಲ (ಸಿಎನ್‌ಜಿ) ದರದಲ್ಲಿ ಪ್ರತಿ ಕಿಲೋಗ್ರಾಂಗೆ 2 ರೂಪಾಯಿ ಹೆಚ್ಚಳ ಮಾಡಲಾಗಿದೆ. ಈ ಪರಿಷ್ಕೃತ ದರದೊಂದಿಗೆ, ರಾಜಧಾನಿಯಲ್ಲಿ ಒಂದು ಕೆ.ಜಿ ಸಿಎನ್‌ಜಿ ಬೆಲೆ ಈಗ 83.09 ರೂಪಾಯಿಗಳಿಗೆ ತಲುಪಿದೆ. ಇದು ವಾಹನ ಸವಾರರಿಗೆ, ಅದರಲ್ಲೂ ವಿಶೇಷವಾಗಿ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ದೊಡ್ಡ ಹೊರೆಯಾಗಿ ಪರಿಣಮಿಸಿದೆ. ಕಳೆದ 15 ದಿನಗಳ ಅಂತರದಲ್ಲಿ ಇದು ನಾಲ್ಕನೇ ಬಾರಿ ಆಗಿರುವ ಸಿಎನ್ಜಿ ಬೆಲೆ ಏರಿಕೆಯಾಗಿದೆ. ಇದಕ್ಕೂ ಕೇವಲ ಮೂರು ದಿನಗಳ ಹಿಂದಷ್ಟೇ ಸಿಎನ್‌ಜಿ ದರದಲ್ಲಿ 1 ರೂಪಾಯಿ ಹೆಚ್ಚಳ ಮಾಡಲಾಗಿತ್ತು. ಸತತವಾಗಿ ಏರಿಕೆಯಾಗುತ್ತಿರುವ ಈ ಬೆಲೆಗಳು ಜನಸಾಮಾನ್ಯರ ದೈನಂದಿನ ಜೀವನದ ಮೇಲೆ, ಮುಖ್ಯವಾಗಿ ಸಾರಿಗೆ ವೆಚ್ಚದ ಮೇಲೆ ತೀವ್ರ ಪರಿಣಾಮ ಬೀರುತ್ತಿವೆ. ಈ ಸತತ ಬೆಲೆ ಹೆಚ್ಚಳವು ವಾಣಿಜ್ಯ ವಾಹನಗಳ ಚಾಲಕರಲ್ಲಿ ಆತಂಕ ಮೂಡಿಸಿದೆ. ದಿನನಿತ್ಯದ ಸಂಪಾದನೆಯಲ್ಲಿ ಬಹುಪಾಲು ಇಂಧನಕ್ಕೇ ಖರ್ಚಾಗುತ್ತಿರುವುದರಿಂದ, ಮುಂದಿನ ದಿನಗಳಲ್ಲಿ ಪ್ರಯಾಣ ದರವನ್ನು ಹೆಚ್ಚಿಸುವುದು ಅನಿವಾರ್ಯವಾಗಬಹುದು ಎಂಬ ಆತಂಕವನ್ನು ಅವರು ವ್ಯಕ್ತಪಡಿಸುತ್ತಿದ್ದಾರೆ. ಜಾಗತಿಕ ವಿದ್ಯಮಾನಗಳ ಪರಿಣಾಮವಾಗಿ ದೇಶೀಯವಾಗಿ ಇಂಧನ ದರಗಳು ಸತತವಾಗಿ ಏರಿಕೆಯಾಗುತ್ತಿರುವುದು ಆರ್ಥಿಕತೆಯ ಮೇಲೆ ಹಾಗೂ ಸಾಮಾನ್ಯ ಜನರ ಕೊಳ್ಳುವ ಶಕ್ತಿಯ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಸಾಧ್ಯತೆಗಳನ್ನು ದಟ್ಟವಾಗಿಸಿದೆ.

## ಇಂಡೋ–ಪೆಸಿಫಿಕ್ ಪ್ರದೇಶದಲ್ಲಿ ಪಾಲುದಾರಿಕೆ ಬಲಪಡಿಸಲು ಬದ್ಧತೆ



**ನವದೆಹಲಿ, ಮೇ 26:** ಪ್ರಧಾನಿ ನರೇಂದ್ರ ಮೋದಿ ಇಂದು ಆಸ್ಟ್ರೇಲಿಯಾದ ವಿದೇಶಾಂಗ ಸಚಿವ ಪೆನ್ನಿವಾಂಗ್ ಮತ್ತು ಜಪಾನ್ ವಿದೇಶಾಂಗ ಸಚಿವ ತೋಶಿಮಿಟ್ಸು ಮೊಟೆಗಿ ಅವರೊಂದಿಗೆ ಪ್ರತ್ಯೇಕ ಸಭೆಗಳನ್ನು ನಡೆಸಿದರು, ಬೆಳೆಯುತ್ತಿರುವ ಭೌಗೋಳಿಕ ರಾಜಕೀಯ ಮತ್ತು ಆರ್ಥಿಕ ಸಹಕಾರದ ಮಧ್ಯೆ ಇಂಡೋ–ಪೆಸಿಫಿಕ್ ಪ್ರದೇಶದಲ್ಲಿ ಕಾರ್ಯತಂತ್ರದ ಪಾಲುದಾರಿಕೆಗಳನ್ನು ಆಳಗೊಳಿಸುವ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದರು. ಪೆನ್ನಿವಾಂಗ್ ಅವರನ್ನು ಭೇಟಿಯಾದ ನಂತರ, ರಕ್ಷಣೆ, ವ್ಯಾಪಾರ, ತಂತ್ರಜ್ಞಾನ ಮತ್ತು ಪೂರೈಕೆ ಸರಪಳಿ ಸ್ಥಿತಿಸ್ಥಾಪಕತ್ವವನ್ನು ಖಚಿತಪಡಿಸಿಕೊಳ್ಳುವುದು ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಭಾರತ–ಆಸ್ಟ್ರೇಲಿಯಾ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ವಿಸ್ತರಿಸುವ ಬಗ್ಗೆ ಇಬ್ಬರು ನಾಯಕರು ಚರ್ಚಿಸಿದರು ಎಂದು ಮೋದಿ ಹೇಳಿದರು. "ಭಾರತ ಮತ್ತು ಆಸ್ಟ್ರೇಲಿಯಾ ಮುಕ್ತ, ಮುಕ್ತ, ಸುರಕ್ಷಿತ ಮತ್ತು ಸಮೃದ್ಧ ಇಂಡೋ–ಪೆಸಿಫಿಕ್ಕಾಗಿ ಕೆಲಸ ಮಾಡುವುದನ್ನು ಮುಂದುವರಿಸುತ್ತವೆ" ಎಂದು ಅವರು ಹೇಳಿದರು. ಮೋದಿ ಅವರು ಜಪಾನಿನ ವಿದೇಶಾಂಗ ಸಚಿವ ತೋಶಿಮಿಟ್ಸು ಮೊಟೆಗಿ ಅವರನ್ನು ಭೇಟಿಯಾದರು ಮತ್ತು ಪ್ರಾದೇಶಿಕ ಸ್ಥಿರತೆಯನ್ನು ಕಾಪಾಡಿಕೊಳ್ಳುವಲ್ಲಿ ನವದೆಹಲಿ ಮತ್ತು ಟೋಕಿಯೊ ನಡುವಿನ ಸಂಬಂಧಗಳ ಶಾಶ್ವತ ಮಹತ್ವವನ್ನು ಒತ್ತಿ ಹೇಳಿದರು. ಭಾರತ ಮತ್ತು ಜಪಾನ್ ಆರ್ಥಿಕ ಸಹಕಾರ, ಮೂಲಸೌಕರ್ಯ ಅಭಿವೃದ್ಧಿ ಮತ್ತು ಭದ್ರತಾ ಸಹಯೋಗದಲ್ಲಿ ದೀರ್ಘಕಾಲದ ಕಾರ್ಯತಂತ್ರದ ಪಾಲುದಾರಿಕೆಯನ್ನು ಹಂಚಿಕೊಂಡಿವೆ. ಮುಂಬೈ–ಅಹಮದಾಬಾದ್ ಹೈಸ್ಪೀಡ್ ರೈಲು ಕಾರಿಡಾರ್ ಸೇರಿದಂತೆ ಭಾರತದಲ್ಲಿನ ಹಲವಾರು ಪ್ರಮುಖ ಮೂಲಸೌಕರ್ಯ ಯೋಜನೆಗಳಲ್ಲಿ ಜಪಾನ್ ಪ್ರಮುಖ ಪಾಲುದಾರನಾಗಿದ್ದು, ಇತ್ತೀಚಿನ ವರ್ಷಗಳಲ್ಲಿ ಉಭಯ ದೇಶಗಳು ರಕ್ಷಣಾ ವಿನಿಮಯ ಮತ್ತು ಕಡಲ ಸಹಕಾರವನ್ನು ವಿಸ್ತರಿಸಿವೆ.

## ಬಿಜೆಪಿಯತ್ತ ಟಿಎಂಸಿ 12 ಸಂಸದರು? ಮಮತಾ ಬ್ಯಾನರ್ಜಿಗೆ ಮತ್ತೊಂದು ಶಾಕ್

**ಕೋಲ್ಕತಾ, ಮೇ 26:** ಬಂಗಾಳ ವಿಧಾನಸಭೆ ಚುನಾವಣೆಯಲ್ಲಿ ಹೀನಾಯವಾಗಿ ಸೋತ ಮಾಜಿ ಸಿಎಂ ಮಮತಾ ಬ್ಯಾನರ್ಜಿಗೆ ಮತ್ತೊಂದು ಭಾರಿ ಆಘಾತ ಎದುರಾಗಿದೆ. ತೃಣಮೂಲ ಕಾಂಗ್ರೆಸ್ ಪಕ್ಷದ ಬರೊಬ್ಬರಿ 12 ಸಂಸದರು ಬಿಜೆಪಿ ಸೇರ್ಪಡೆಯಾಗುತ್ತಿದ್ದಾರೆ ಎನ್ನಲಾಗಿದೆ.

2026ರ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಭಾರಿ ಸೋಲು ಕಂಡ ನಂತರ, ತೃಣಮೂಲ ಕಾಂಗ್ರೆಸ್ ಪಕ್ಷದೊಳಗಿನ ಆಂತರಿಕ ಸಂಕಷ್ಟ ಮತ್ತಷ್ಟು ಗಂಭೀರವಾಗುತ್ತಿದೆ.ರಾಜಕೀಯ ವಲಯಗಳಲ್ಲಿ, ಹಲವಾರು ಟಿಎಂಸಿ ಸಂಸದರು ಬಿಜೆಪಿ ಜೊತೆ ಸಂಪರ್ಕದಲ್ಲಿದ್ದು, ಶೀಘ್ರದಲ್ಲೇ ಬಿಜೆಪಿ ಸೇರ್ಪಡೆಯಾಗಲಿದ್ದಾರೆ ಎಂಬ ಚರ್ಚೆಗಳು ಜೋರಾಗಿವೆ. ವರದಿಗಳ ಪ್ರಕಾರ, ಟಿಎಂಸಿಯ 29 ಲೋಕಸಭಾ ಸಂಸದರ ಪೈಕಿ ಸುಮಾರು 12 ಮಂದಿ ಈಗಾಗಲೇ ಬಿಜೆಪಿ ಸೇರುವ ಅಥವಾ ಬೆಂಬಲಿಸುವ ಯೋಜನೆ ಮಾಡಿಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಇದಲ್ಲದೆ ಇನ್ನೂ ಐದು ಅಥವಾ ಆರು ಸಂಸದರೊಂದಿಗೆ ಕೂಡ ಮಾತುಕತೆ ನಡೆಯುತ್ತಿದೆ ಎಂದು ವರದಿಯಾಗಿದೆ.

ಪಕ್ಷಾಂತರ ವಿರೋಧಿ ಕಾನೂನನ್ನು ತಪ್ಪಿಸಲು ಕನಿಷ್ಠ 19–20 ಸಂಸದರನ್ನು ಒಟ್ಟುಗೂಡಿಸಲು ಕಾರ್ಯತಂತ್ರವನ್ನು ಮಾಡಲಾಗುತ್ತಿದೆ ಎಂದು ಹೇಳಲಾಗುತ್ತಿದೆ. ಈ ಸಂಭವನೀಯ ಪಕ್ಷಾಂತರದ ಬಗ್ಗೆ ತೃಣಮೂಲ ನಾಯಕತ್ವಕ್ಕೂ ತಿಳಿದಿದ್ದು, ಪಕ್ಷವನ್ನು ಒಗ್ಗೂಡಿಸಲು ಪ್ರಯತ್ನಗಳು ಪ್ರಾರಂಭವಾಗಿವೆ ಎಂದು ರಾಜಕೀಯ ಮೂಲಗಳು ಹೇಳುತ್ತಿವೆ.

ಪ್ರಸ್ತುತ ಲೋಕಸಭೆಯಲ್ಲಿ ಬಿಜೆಪಿ 240 ಸಂಸದರಿದ್ದು, ಮಿತ್ರಪಕ್ಷಗಳ ಬೆಂಬಲದೊಂದಿಗೆ ಸರ್ಕಾರ ಸ್ಪರ್ಧಿಸುತ್ತಿದೆ. ಅಂತಹ ಪರಿಸ್ಥಿತಿಯಲ್ಲಿ, ತೃಣಮೂಲ ಸಂಸದರು ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿಯೊಂದಿಗೆ ಬಂದರೆ, ಪಕ್ಷದ ಬಲವು ಮತ್ತಷ್ಟು ಹೆಚ್ಚಾಗುತ್ತದೆ ಮತ್ತು ಮಿತ್ರಪಕ್ಷಗಳ ಮೇಲಿನ ಅವಲಂಬನೆ ಕಡಿಮೆಯಾಗುತ್ತದೆ. ಇದೇ ಕಾರಣಕ್ಕೆ ಬಿಜೆಪಿ ರಾಜ್ಯಸಭೆಯಲ್ಲಿ ತೃಣಮೂಲ ಸಂಸದರ ಮೇಲೆ ಕಣ್ಣಿಟ್ಟಿದ್ದು, ತೃಣಮೂಲ ಮತ್ತು ಸಾಂಸ್ಥಿಕ ಶೈಲಿಯಲ್ಲಿ ಐಪಿಎಸಿ ಪಾತ್ರದ ಬಗ್ಗೆ ಅಸಮಾಧಾನದ ಬಗ್ಗೆಯೂ ಮಾತುಕತೆ ನಡೆಯುತ್ತಿದೆ. ಆದರೆ, ಈ ಬಗ್ಗೆ ಇನ್ನೂ ಯಾವುದೇ ಅಧಿಕೃತ ಮಾಹಿತಿ ಹೊರಬಿದ್ದಿಲ್ಲ.

## ರಾಜ್ಯದ ದ್ವೇಷಭಾಷಣ ಮಸೂದೆಗೆ ಕೇಂದ್ರ ತಡೆ

### ಹೊಸ ಕಾಯ್ದೆ ಅಗತ್ಯವಿಲ್ಲ, ಅಸ್ತಿತ್ವದಲ್ಲಿರುವ ಕಾನೂನುಗಳೇ ಸಮರ್ಥವಾಗಿವೆ: ಗೃಹ ಇಲಾಖೆ ಸ್ಪಷ್ಟನೆ

**ಬೆಂಗಳೂರು, ಮೇ 26:** ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳು (ತಡೆಗಟ್ಟುವಿಕೆ) ಮಸೂದೆ, 2025ಕ್ಕೆ ಸರ್ಕಾರ ಈಗಾಗಲೇ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನಲ್ಲಿ ಅಂಗೀಕರಿಸಿ ಅನುಮೋದನೆಗಾಗಿ ರಾಜ್ಯಪಾಲರಿಗೆ ಕಳುಹಿಸಿದೆ. ರಾಜ್ಯಪಾಲರು ಥಾವರ್‌ಚಂದ್ ಗೆಹ್ಲೋಟ್ ಅವರು ಅನುಮೋದನೆ ನೀಡಲು ನಿರಾಕರಿಸಿದ ನಂತರ, ಸರ್ಕಾರವು ಫೆಬ್ರವರಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಒಪ್ಪಿಗೆಗಾಗಿ ಮಸೂದೆಯನ್ನು ಗೃಹ ಸಚಿವಾಲಯಕ್ಕೆ ಕಳುಹಿಸಿದೆ. ಇದೀಗ ರಾಜ್ಯ ಸರ್ಕಾರದ ಈ ಮಸೂದೆಗೆ ಕೇಂದ್ರ ಸರ್ಕಾರ ಅಡ್ಡಗಾಲು ಹಾಕಿದ್ದು, ಈ ಹಂತದಲ್ಲಿ ಮಸೂದೆ ಅಗತ್ಯವಿಲ್ಲ ಮತ್ತು ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟು ಈ ಸಮಸ್ಯೆಯನ್ನು ಪರಿಹರಿಸಲು ಸಮರ್ಪಕವಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ಹೇಳಿದೆ.

ಈ ಸಂಬಂಧ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿರುವ ಕೇಂದ್ರ ಗೃಹ ಸಚಿವಾಲಯ, ಇಂಥದ್ದೊಂದು ಮಸೂದೆಯ ಅಗತ್ಯ ಇದೆಯೇ ಎಂದು ಪ್ರಶ್ನಿಸಿದೆ. ಬಿಜೆಪಿ ಮತ್ತು ಜೆಡಿಎಸ್‌ನ ತೀವ್ರ ವಿರೋಧದ ಹೊರತಾಗಿಯೂ, ಕಳೆದ ವರ್ಷ ಡಿಸೆಂಬರ್ 19 ರಂದು ಮುಕ್ತಾಯಗೊಂಡ ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ರಾಜ್ಯ ವಿಧಾನಮಂಡಲದ ಎರಡೂ ಸದನಗಳು ಈ ಮಸೂದೆಯನ್ನು ಅಂಗೀಕರಿಸಲಾಗಿದೆ. ಈ ವಿಷಯವನ್ನು ಸಿಎಸ್ ವಿಭಾಗದಲ್ಲಿ ಪರಿಶೀಲಿಸಲಾಗಿದೆ. ಈ ನಿಟ್ಟಿನಲ್ಲಿ, ಪರಿಹರಿಸಬೇಕಾದ ಸಮಸ್ಯೆಗಳು ಈಗಾಗಲೇ ಭಾರತೀಯ ನ್ಯಾಯ ಸಂಹಿತಾ, 2023 ಮತ್ತು ಇತರ ಚಾಲ್ತಿಯಲ್ಲಿರುವ ಕಾನೂನುಗಳ ಅಡಿಯಲ್ಲಿ ಗಣನೀಯವಾಗಿ ಸೇರಿಕೊಂಡಿವೆ. ಹೀಗಿರುವಾಗ ರಾಜ್ಯ ಸರ್ಕಾರವು ಪ್ರತ್ಯೇಕ ಕಾನೂನು ಜಾರಿಗೆ ತರುವುದರಿಂದ ನಕಲು ಮತ್ತು ಏಕರೂಪತೆಯ ಕೊರತೆ ಉಂಟಾಗಬಹುದು" ಎಂದು ಗೃಹ ಸಚಿವಾಲಯ (ಸಿಎಸ್ ವಿಭಾಗ) ಪತ್ರದಲ್ಲಿ ತಿಳಿಸಿದೆ.

ಮೇಲಿನದನ್ನು ಗಮನದಲ್ಲಿಟ್ಟುಕೊಂಡು, ಈ ಹಂತದಲ್ಲಿ ಪ್ರಸ್ತಾವಿತ ಮಸೂದೆಯ ಅಗತ್ಯವಿಲ್ಲದಿರಬಹುದು ಮತ್ತು ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟು ಸಮಸ್ಯೆಗಳನ್ನು ಪರಿಹರಿಸಲು ಸಾಕಾಗುತ್ತದೆ ಎಂದು ಕೇಂದ್ರ ಹೇಳಿದೆ. ಕರ್ನಾಟಕ ಸಂಸದೀಯ ವ್ಯವಹಾರಗಳು ಮತ್ತು ಶಾಸನ ಇಲಾಖೆಯ ಕಾರ್ಯದರ್ಶಿಗೆ ಮೇ 20 ರಂದು ಪತ್ರ ಬರೆದಿರುವ ಕೇಂದ್ರ ಗೃಹ ಸಚಿವಾಲಯದ ಕಾನೂನು ವಿಭಾಗ, ಈ ಮಸೂದೆಯ ಕುರಿತು ಮುಂದಿನ ಕ್ರಮ ಕೈಗೊಳ್ಳಲು ಸ್ಪಷ್ಟೀಕರಣವನ್ನು ನೀಡುವಂತೆ ಸೂಚಿಸಿದೆ.ಈ ಮಸೂದೆಯು 1 ಲಕ್ಷ ರೂಪಾಯಿಗಳವರೆಗೆ ದಂಡ ಮತ್ತು ಏಳು ವರ್ಷಗಳವರೆಗೆ ಜೈಲು ಶಿಕ್ಷೆಯನ್ನು ವಿಧಿಸಲು ಅವಕಾಶ ನೀಡುತ್ತದೆ.

## ಮೇಕೆದಾಟು: ತಮಿಳುನಾಡಿನ ಪರಿಶೀಲನಾ ಅರ್ಜಿ ವಜಾಗೊಳಿಸಿದ ಸುಪ್ರೀಂ ಕೋರ್ಟ್



**ದೆಹಲಿ, ಮೇ 26:** ಮೇಕೆದಾಟು ಯೋಜನೆ ವಿಚಾರವಾಗಿ ತಮಿಳುನಾಡು ಸಲ್ಲಿಸಿದ್ದ ಪರಿಶೀಲನಾ ಅರ್ಜಿಯನ್ನು ಸುಪ್ರೀಂ ಕೋರ್ಟ್ ತ್ರಿಸದಸ್ಯ ಪೀಠ ವಜಾಗೊಳಿಸಿದೆ. ಇದು ಕರ್ನಾಟಕ ಪಾಲಿಗೆ ಶುಭಸುದ್ದಿ. ಕರ್ನಾಟಕ ರಾಜ್ಯದ ಜನರ ಪರವಾಗಿ ನಾವು ಸುಪ್ರೀಂ ಕೋರ್ಟಿಗೆ ಧನ್ಯವಾದ ಅರ್ಪಿಸುತ್ತೇವೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು. ದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಮಂಗಳವಾರ ಪ್ರತಿಕ್ರಿಯೆ ನೀಡಿದರು. "ಸುಪ್ರೀಂ ಕೋರ್ಟ್ ಈ ಹಿಂದಿನ ಆದೇಶದಲ್ಲೇ ನಮಗೆ ಸ್ಪಷ್ಟ ಸೂಚನೆ ನೀಡಿದ್ದು ತಮಿಳುನಾಡಿನ ಪಾಲಿನ 177 ಟಿಎಂಸಿ ನೀರನ್ನು ಹರಿಸಬೇಕು ಎಂದು ಷರತ್ತು ವಿಧಿಸಿದೆ. ಈಗ ಈ ಯೋಜನೆ ಕುರಿತು ತೀರ್ಮಾನ ಮಾಡಬೇಕಿರುವುದು ಕೇಂದ್ರ ಸರ್ಕಾರ. ನಾವು ಪರಿಷ್ಕೃತ ಡಿಪಿಆರ್ ಸಲ್ಲಿಕೆ ಪ್ರಕ್ರಿಯೆಯಲ್ಲಿದ್ದೇವೆ" ಎಂದು ತಿಳಿಸಿದರು.

## ಮೇಕೆದಾಟು ಯೋಜನೆಗೆ ಅನುಮತಿ ಬೇಡ :ವಿಜಯ್

### ಪ್ರಧಾನಿಗೆ ತಮಿಳುನಾಡು ಮುಖ್ಯಮಂತ್ರಿ ಪತ್ರ

**ಚೆನ್ನೈ, ಮೇ 26:** ಮೇಕೆದಾಟು ಯೋಜನೆಗೆ ತಮಿಳುನಾಡಿನ ನೂತನ ಮುಖ್ಯಮಂತ್ರಿ, ನಟ ದಳಪತಿ ವಿಜಯ್ ಮತ್ತೆ ಕಂಟಕವಾಗಲು ಹೊರಟಿದ್ದಾರೆ. ಕಾವೇರಿ ನದಿಗೆ ಅಡ್ಡಲಾಗಿ ಕರ್ನಾಟಕ ಸರ್ಕಾರ ಕೈಗೆತ್ತಿಕೊಳ್ಳಲು ಉದ್ದೇಶಿಸಿರುವ ಮೇಕೆದಾಟು ಯೋಜನೆಗೆ ಯಾವುದೇ ಕಾರಣಕ್ಕೂ ಅನುಮತಿ ನೀಡಬಾರದು ಎಂದು ಒತ್ತಾಯಿಸಿ ಸಿಎಂ ವಿಜಯ್ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ.

ಕರ್ನಾಟಕದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಮೇಕೆದಾಟು ಯೋಜನೆಗೆ ಮರುಜೀವ ನೀಡಲು ಮುಂದಾದ ಬೆನ್ನಲ್ಲೇ, ತಮಿಳುನಾಡು ಸರ್ಕಾರ ಟಕ್ಕರ್ ನೀಡಿದೆ. ಪ್ರಧಾನಿ ಮೋದಿಗೆ ಬರೆದಿರುವ ಪತ್ರದಲ್ಲಿ ಕರ್ನಾಟಕದ ವಿರುದ್ಧ ವಾದ ಮಂಡಿಸಿರುವ ಸಿಎಂ ವಿಜಯ್, "ಮೇಕೆದಾಟು ಅಣೆಕಟ್ಟು ನಿರ್ಮಾಣ ಪ್ರಸ್ತಾವನೆಯು ಸುಪ್ರೀಂಕೋರ್ಟ್‌ನ ಹಿಂದಿನ ತೀರ್ಪಿನ ಸ್ಪಷ್ಟ ಉಲ್ಲಂಘನೆಯಾಗಿದೆ" ಎಂದು ದೂರಿದ್ದಾರೆ. ಅಷ್ಟೇ ಅಲ್ಲದೆ ಯೋಜನೆಗೆ ಸಂಬಂಧಿಸಿದಂತೆ ಕರ್ನಾಟಕದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇತ್ತೀಚೆಗೆ ನೀಡಿದ್ದ ಹೇಳಿಕೆಗಳ ಬಗ್ಗೆಯೂ ಕಳವಳ ವ್ಯಕ್ತಪಡಿಸಿದ್ದಾರೆ.

ಪ್ರಧಾನಿಗೆ ಪತ್ರ ಬರೆಯುವ ಮುನ್ನ, ಸಿಎಂ ವಿಜಯ್ ಅವರು ಚೆನ್ನೈನಲ್ಲಿ ತಮಿಳುನಾಡಿನ ಹಿರಿಯ ಸಚಿವರು ಹಾಗೂ ಕಾನೂನು ತಜ್ಞರೊಂದಿಗೆ ಸೋಮವಾರ ಉನ್ನತ ಮಟ್ಟದ ಸಭೆ ನಡೆಸಿದ್ದರು. ರಾಜ್ಯದ ಹಕ್ಕುಗಳನ್ನು ರಕ್ಷಿಸುವುದು ಮತ್ತು ತಮಿಳುನಾಡು ರೈತರ ಹಿತ ಕಾಯುವುದು ಎಂಬ ನೆಪವೊಡ್ಡಿ ನಡೆದ ಈ ಸಭೆಯಲ್ಲಿ, ಕರ್ನಾಟಕದ ವಿರುದ್ಧ ತಕ್ಷಣವೇ ಕಾನೂನು ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ವಿಜಯ್ ಸೂಚನೆ ನೀಡಿದ್ದಾರೆ ಎನ್ನಲಾಗಿದೆ.



ಈ ಹಿಂದೆ 2018 ಮತ್ತು 2022ರಲ್ಲಿಯೂ ತಮಿಳುನಾಡು ಸರ್ಕಾರ ಮೇಕೆದಾಟು ವಿರುದ್ಧ ಸುಪ್ರೀಂಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿತ್ತು. ಕಾವೇರಿ ಕೇಂದ್ರ ಜಲ ಆಯೋಗದ (ಸಿಡಬ್ಲ್ಯುಸಿ) ತೀರ್ಮಾನದ ಹೊರತಾಗಿ ಯೋಜನೆಗೆ ಅನುಮತಿ ಸಿಗುವುದಿಲ್ಲ ಎಂದು ತಮಿಳುನಾಡು ನಾಯಕರು ವಾದಿಸುತ್ತಿದ್ದಾರೆ. ಮೇಕೆದಾಟು ಯೋಜನೆಯ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧವಾಗಿದ್ದು, ಮುಳುಗಡೆಯಾಗುವ ಅರಣ್ಯ ಭೂಮಿಗೆ ಪರ್ಯಾಯವಾಗಿ ಬೇರೆ ಜಾಗ ಗುರುತಿಸುವ ಕೆಲಸ ನಡೆಯುತ್ತಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಇತ್ತೀಚೆಗೆ ಮಾಧ್ಯಮಗಳಿಗೆ ತಿಳಿಸಿದ್ದರು.

"ಕೇಂದ್ರ ಸರ್ಕಾರದಿಂದ ಒಪ್ಪಿಗೆ ಸಿಕ್ಕ ತಕ್ಷಣವೇ ಮೇಕೆದಾಟು ಯೋಜನೆಗೆ ಭೂಮಿ ಪೂಜೆ ನೆರವೇರಿಸಲಿದ್ದೇವೆ" ಎಂದು ಡಿಕೆಶಿ ಹೇಳಿದ್ದರು. ಕರ್ನಾಟಕದ ಈ ದೃಢ ನಿರ್ಧಾರದಿಂದ ಆತಂಕಗೊಂಡಿರುವ ತಮಿಳುನಾಡು ಸಿಎಂ ವಿಜಯ್, ಕೇಂದ್ರದ ಮೂಲಕ ಯೋಜನೆಗೆ ಬ್ರೇಕ್ ಹಾಕಿಸಲು ಈಗ ಹೊಸ ಆಟ ಆರಂಭಿಸಿದ್ದಾರೆ.

## ನಿತ್ಯ ಪಂಚಾಂಗ 27.05.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ಸರ್ವತ್ರ ಏಕಾದಶಿ,
ಎಚ್.ಡಿ.ಕೋಟೆ ಸಂತೇಸರಗೂರು
ಲಕ್ಷ್ಮೀನರಸಿಂಹ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಅಂಕೇಗೌಡರ ಪುಸ್ತಕಪ್ರೇಮ ಅನನ್ಯ: ಎಚ್.ಡಿ.ಕುಮಾರಸ್ವಾಮಿ

**ನವದೆಹಲಿ, ಮೇ 26:** ಪದ್ಮಶ್ರೀ ಪುರಸ್ಕೃತ ಪಾಂಡವಪುರದ ಪುಸ್ತಕ ಮನೆ ಅಂಕೇಗೌಡರನ್ನು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ತಮ್ಮ ನವದೆಹಲಿಯ ನಿವಾಸಕ್ಕೆ ಕರೆಯಿಸಿ ಸನ್ಮಾನಿಸಿದರು. ಅಂಕೇಗೌಡರನ್ನು ಅಭಿನಂದಿಸಿದ ಸಚಿವರು ಪುಸ್ತಕಮನೆ ಬೆಳೆಸುವ ನಿಟ್ಟಿನಲ್ಲಿ ವಿಚಾರ ವಿನಿಮಯ ಮಾಡಿಕೊಂಡರು. ಅವರು ಅಂಕೇಗೌಡರೊಂದಿಗಿನ ಚಿತ್ರಗಳನ್ನು ಎಕ್ಸ್ ಹಾಗೂ ಫೇಸ್‌ಬುಕ್‌ನಲ್ಲಿ ಹಂಚಿಕೊಂಡಿದ್ದಾರೆ. ಪದ್ಮಶ್ರೀ ಪುರಸ್ಕೃತ

### ದೆಹಲಿ ನಿವಾಸದಲ್ಲಿ ಪದ್ಮಶ್ರೀ ಪುರಸ್ಕೃತರಿಗೆ ಅಭಿನಂದನೆ, ಪುಸ್ತಕಮನೆಗೆ ಎಲ್ಲ ಸಹಕಾರ

ಮಂಡ್ಯ ಜಿಲ್ಲೆಯ ಪಾಂಡವಪುರ ತಾಲೂಕಿನ ಎಂ. ಅಂಕೇಗೌಡರು ಸತ್ಕರಿಸಿ ಗೌರವಿಸುವ ಭಾಗ್ಯ ನನ್ನದಾಯಿತು. ಅಂಕೇಗೌಡರ ಪುಸ್ತಕ ಪ್ರೇಮ ಅನನ್ಯ ಎಂದಿದ್ದಾರೆ. ಮುಂದಿನ ತಲೆಮಾರಿಗೂ ಓದಿನ ಪರಂಪರೆಯನ್ನು ಮುಂದುವರಿಸುವ ಅವರ ಅಚಲತೆ, ಕಾಳಜಿ ನಮಗೆಲ್ಲರಿಗೂ ಪ್ರೇರಣದಾಯಕ. ಕನ್ನಡ ಸಾಹಿತ್ಯ ಮಾತ್ರವಲ್ಲ ಜಗತ್ತಿನ ಅನೇಕ ಭಾಷೆಗಳ ಅನೇಕಾನೇಕ ಶ್ರೇಷ್ಠ ಕೃತಿಗಳು ಇವರ ಸಂಗ್ರಹದಲ್ಲಿವೆ. ಕನ್ನಡನಾಡಿನ ಹೆಮ್ಮೆ ಆಗಿರುವ ಶ್ರೀಯುತರಿಗೆ ಅವರ 'ಪುಸ್ತಕ ಮನೆ'ಯನ್ನು ಉಳಿಸಿ ಮತ್ತು ಬೃಹತ್ ಆಗಿ ಬೆಳೆಸುವ ನಿಟ್ಟಿನಲ್ಲಿ ಸಹಕಾರ ನೀಡುವುದಾಗಿ ಭರವಸೆ ನೀಡಿದ್ದೇನೆ ಎಂದು ತಿಳಿಸಿದ್ದಾರೆ.



# ಬೆಳಗಾವಿಯಲ್ಲೇ ಚಳಿಗಾಲದ ಅಧಿವೇಶನ

**ಗದಗ, ಮೇ 26:** ಬೆಳಗಾವಿಯಲ್ಲೇ ಈ ಬಾರಿಯ ಚಳಿಗಾಲದ ಅಧಿವೇಶನ ನಡೆಸಲಾಗುವುದು, ಅದನ್ನು ಬೇರೆಡೆಗೆ ಸ್ಥಳಾಂತರಿಸುವ ಕುರಿತು ಸರ್ಕಾರ ಯಾವುದೇ ನಿರ್ಧಾರ ಕೈಗೊಂಡಿಲ್ಲ ಎಂದು ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ ಹೇಳಿದರು.

ಗದಗದಲ್ಲಿ ಸುದ್ದಿಗಾರ ರೊಂದಿಗೆ ಸೋಮವಾರ ಮಾತನಾಡಿದ ಅವರು, ಚಳಿಗಾಲದ ಅಧಿವೇಶನದ ಸ್ಥಳ ಬದಲಾವಣೆ ಕುರಿತು ಇನ್ನೂ ಸಚಿವ ಸಂಪುಟದಲ್ಲಿ ಯಾವುದೇ ನಿರ್ಣಯವಾಗಿಲ್ಲ. ಈ ಕುರಿತು ಮೇ 29ರಂದು ಮತ್ತೆ ಸಚಿವ ಸಂಪುಟ ಸಭೆ ನಡೆಯುವ ಸಾಧ್ಯತೆ ಇದ್ದು, ಆ ಸಭೆಯಲ್ಲಿ ಅಂತಿಮ ನಿರ್ಧಾರ ಕೈಗೊಳ್ಳಬಹುದು ಎಂದು ತಿಳಿಸಿದರು. ಅಧಿವೇಶನದ ಸ್ಥಳ ಬದಲಾವಣೆ ಕುರಿತು ಹರಿದಾಡುತ್ತಿರುವ ಊಹಾಪೋಹಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಸರ್ಕಾರದ ಮಟ್ಟದಲ್ಲಿ ಯಾವುದೇ ಅಂತಿಮ ತೀರ್ಮಾನ ಆಗಿಲ್ಲ ಎಂದು ಪುನರುಚ್ಚರಿಸಿದರು.

# ತೈಲ ಬಿಕ್ಕಟ್ಟು ನಿರ್ವಹಣೆಯಲ್ಲಿ ಕೇಂದ್ರ ವಿಫಲ



**ಬೆಂಗಳೂರು, ಮೇ 26:** ಜಾಗತಿಕ ತೈಲ ಬಿಕ್ಕಟ್ಟು ನಿರ್ವಹಣೆಯಲ್ಲಿ ಕೇಂದ್ರದ ವಿಫಲತೆಯು ಸಾಮಾನ್ಯ ಜನರಿಗೆ ಉಚಿತ ಹಾಗೂ ಕೈಗೆಟುಕುವ ಸಾರಿಗೆ ನೀಡುತ್ತಿರುವ ಕರ್ನಾಟಕ ಸೇರಿ ಬಹುತೇಕ ರಾಜ್ಯ ಸರ್ಕಾರಗಳನ್ನು ಆರ್ಥಿಕವಾಗಿ ಕಂಗಾಲು ಮಾಡಿದೆ. ಡೀಸೆಲ್ ಬೆಲೆ ಏರಿಕೆಯಿಂದ ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಗೆ ತಿಂಗಳಿಗೆ ರೂ. 40 ಕೋಟಿ ವರ್ಷಕ್ಕೆ 480 ಕೋಟಿ ರೂ.ಹೆಚ್ಚಿನ ಹೊರೆ ಬೀಳಲಿದೆ ಎಂದು ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ

ದೇಶದ ಇತಿಹಾಸದಲ್ಲೇ ಹಿಂದೆಂದೂ ಕಾಣದ ರೀತಿಯಲ್ಲಿ ಕಳೆದ 10 ದಿನಗಳಲ್ಲಿ ಡೀಸೆಲ್ ಬೆಲೆ 7.81 ರೂ. ಹೆಚ್ಚಾಗಿದೆ. ಇದು ಪ್ರಧಾನಿ ನರೇಂದ್ರ ಮೋದಿಯವರ ಅಂತರರಾಷ್ಟ್ರೀಯ ರಾಜತಾಂತ್ರಿಕತೆಯ ವೈಫಲ್ಯಕ್ಕೆ ಸಾಕ್ಷಿ. ಎಂದು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.ಈ ದರ ಏರಿಕೆ ಕೇವಲ ಬಸ್‌ಗಳಿಗಷ್ಟೇ ಸೀಮಿತವಾಗಿಲ್ಲ. ಇಡೀ ದೇಶದ ಸರಕು ಸಾಗಣೆಯ ಬೆನ್ನೆಲುಬಾಗಿರುವ ಸಾರಿಗೆ ಲಾರಿಗಳ ಮೇಲೂ ಇದು ಮಾರಕ ಹೊರೆ ಉಂಟುಮಾಡಿದೆ. ಲಾರಿ ಬಾಡಿಗೆಗಳು ಗಗನಕ್ಕೇರುತ್ತಿರುವುದರಿಂದ ತರಕಾರಿ, ಹಾಲು, ದಿನಸಿ ಸೇರಿದಂತೆ ನಿತ್ಯೋಪಯೋಗಿ ವಸ್ತುಗಳ ಬೆಲೆಗಳು ಕೂಡಾ ತೀವ್ರವಾಗಿ ಏರಿಕೆಯಾಗಲಿವೆ. ಎಂದು ಸಚಿವರು ಆತಂಕ ವ್ಯಕ್ತಪಡಿಸಿದ್ದಾರೆ

ವಿಶ್ವಗುರು ಎಂದು ಸ್ವಯಂ ಘೋಷಿಸಿಕೊಂಡವರು ಅಂತರರಾಷ್ಟ್ರೀಯ ಮಟ್ಟದಲ್ಲಿ ಸೂಕ್ತ ರಿಯಾಯಿತಿ ದರದಲ್ಲಿ ಇಂಧನ ತರಲು ವಿಫಲರಾಗಿ ದೇಶದ ಆರ್ಥಿಕತೆಯನ್ನು ಹಳ್ಳ ಹಿಡಿಸುತ್ತಿದ್ದಾರೆ. ಎಂದು ಸಚಿವ ರಾಮಲಿಂಗಾ ರೆಡ್ಡಿ ವಾಗ್ದಾಳಿ ನಡೆಸಿದ್ದಾರೆ ಪ್ರಧಾನಿ ಮೋದಿಯವರೇ, ಈ ಕೂಡಲೇ ಈ ಜನವಿರೋಧಿ "ಪೆಟ್ರೋಲ್-ಡೀಸೆಲ್ ದರ ಏರಿಕೆ"ಯನ್ನು ಹಿಂಪಡೆಯಿರಿ. ಇಲ್ಲದಿದ್ದರೆ ದೇಶದ ರೈತರು, ಲಾರಿ ಚಾಲಕರು ಹಾಗೂ ಜನಸಾಮಾನ್ಯರು ಒಟ್ಟಾಗಿ ನಿಮಗೆ ತಕ್ಕ ಪಾಠ ಕಲಿಸಲಿದ್ದಾರೆ. ಎಂದು ಅವರು ತಿಳಿಸಿದ್ದಾರೆ.

# ಅಭಿವೃದ್ಧಿ ಮರೆತ ಸರ್ಕಾರ ವಿಸರ್ಜಿಸಿ

**ಬೆಂಗಳೂರು, ಮೇ 26:** ಇಡೀ ಕಾಂಗ್ರೆಸ್ ಸರ್ಕಾರವೇ ದೆಹಲಿ ಹೈಕಮಾಂಡ್ ಮುಂದೆ ಮಂಡಿಯೂರಿದೆ ಎಂದು ರಾಜ್ಯ ಬಿಜೆಪಿ ವಾಗ್ದಾಳಿ ನಡೆಸಿದೆ. ಕರ್ನಾಟಕ ಕಾಂಗ್ರೆಸ್ ಸರ್ಕಾರ ದೆಹಲಿ ಹೈಕಮಾಂಡ್ ಮುಂದೆ ಶರಣಾಗಿದೆಯೇ ರಾಜ್ಯದ ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ ಎಂದು ಬಿಜೆಪಿ ತೀವ್ರ ವಾಗ್ದಾಳಿ ನಡೆಸಿದೆ.ನಾಯಕರ ಕುರ್ಚಿ ಕಾಳಗದಿಂದಾಗಿ ರಾಜ್ಯದ ಅಭಿವೃದ್ಧಿ ಮರೆತ ಸರ್ಕಾರವನ್ನು ವಿಸರ್ಜಿಸಿ ಎಂದು ಬಿಜೆಪಿ ಆಗ್ರಹಿಸಿದೆ.

ರಾಜ್ಯದಲ್ಲಿ 'ಕುರ್ಚಿ ಕಾಳಗ' ತಾರಕಕ್ಕೇರಿದ್ದು, ಕಾಂಗ್ರೆಸ್ ಸರ್ಕಾರ ದೆಹಲಿ ಬಾಗಿಲಲ್ಲಿ ಮಂಡಿಯೂರಿ ಕುಳಿತಿದೆ ಎಂದು ಬಿಜೆಪಿ ಲೇವಡಿ ಮಾಡಿದೆ.

ಸಿಎಂ ಕುರ್ಚಿ ಉಳಿಸಿಕೊಳ್ಳುವ ಮತ್ತು ಅಧಿಕಾರ ಪಡೆಯುವ ಹಪಾಹಪಿಯಲ್ಲಿ ರಾಜ್ಯದ ಜನತೆ ಅನಾಥರಾಗಿದ್ದಾರೆ ಎಂದು ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದೆ.

ಎಕ್ಸ್ ಖಾತೆಯಲ್ಲಿ ಟ್ವೀಟ್ ಮಾಡಿದ ಬಿಜೆಪಿ ಇಡೀ ಕಾಂಗ್ರೆಸ್ ಸರ್ಕಾರವೇ ದೆಹಲಿ ಹೈಕಮಾಂಡ್ ಮುಂದೆ ಮಂಡಿಯೂರಿ ಶರಣಾಗಿದೆ! ರಾಜ್ಯದ ಅಭಿವೃದ್ಧಿಯನ್ನು ಗಾಳಿಗೆ ತೂರಿ, ನಾಯಕರ 'ಕುರ್ಚಿ ಕಾಳಗ ತಾರಕಕ್ಕೇರಿದೆ.: ಡಿ.ಕೆ. ಶಿವಕುಮಾರ್: "ನನ್ನ ಕೂಲಿ ಕೊಡಿ" ಎಂದು ಗೋಗರೆಯುತ್ತಿದ್ದಾರೆ. ಸಿದ್ದರಾಮಯ್ಯ "ನನ್ನ ಕುರ್ಚಿ ಉಳಿಸಿಕೊಡಿ" ಎಂದು ಅಂಗಲಾಚುತ್ತಿದ್ದಾರೆ.: ಸತೀಶ್ ಜಾರಕಿಹೊಳಿ ಕೆಪಿಸಿಸಿ ಅಧ್ಯಕ್ಷಗಿರಿಗೆ ಪಟ್ಟುಹಿಡಿದು ಕುಳಿತಿದ್ದಾರೆ. "ಪರಮೇಶ್ವರ್ ಮತ್ತು ಮಹದೇವಪ್ಪ ನಮಗೂ ಒಂದು ಅವಕಾಶ ಕೊಡಿ" ಎಂದು ದೆಹಲಿ ಬಾಗಿಲು ತಟ್ಟುತ್ತಿದ್ದಾರೆ. ನಾಯಕರ ಈ ಅಧಿಕಾರದ ಹಪಾಹಪಿಯಿಂದಾಗಿ ರಾಜ್ಯದಲ್ಲಿ ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ. ಸರ್ಕಾರ ಅಸ್ಥಿರಗೊಂಡು, ಕರುನಾಡಿನ ಜನತೆ ಅನಾಥರಾಗಿ ಸಂಕಷ್ಟದ ಸುಳಿಯಲ್ಲಿ ಸಿಲುಕಿ ನರಳುತ್ತಿದ್ದಾರೆ ಎಂದು ಕಿಡಿಕಾರಿದೆ.ಇನ್ನೊಂದು ಟ್ವೀಟ್ ಮಾಡಿದ ಬಿಜೆಪಿ 'ಮಾನ್ಯ ಜಾರಕಿಹೊಳಿಯವರೇ, ಸರ್ಕಾರವು ಪತನವಾಗುವ ಹಂತ ತಲುಪಿದೆಯೇ, ರಾಜ್ಯದ ಜನತೆ ನಿಮ್ಮ ಸರ್ಕಾರದ ವಿಸರ್ಜನೆಗೆ ಕಾಯುತ್ತಿದ್ದಾರೆ. ಸಿಎಂ ಮತ್ತು ಸಚಿವ ಸಂಪುಟದ ಮಂತ್ರಿಗಳಿಗಾಗಿ ರಾಜ್ಯದ ಜನತೆ ಹುಡುಕಾಟ ನಡೆಸುತ್ತಿದ್ದಾರೆ. ದೆಹಲಿಯಲ್ಲಿ ಹೈಕಮಾಂಡ್ ಗೇಟು ಕಾಯುವ ಬದಲು ರಾಜ್ಯದಲ್ಲಿ ಸರಿಯಾಗಿ ಆಡಳಿತ ನಡೆಸಲಿ. ಇಲ್ಲದಿದ್ದರೆ ಸರ್ಕಾರವನ್ನೇ ವಿಸರ್ಜಿಸಲಿ' ಎಂದಿದೆ.

# ಏಕಬಳಕೆ ಪ್ಲಾಸ್ಟಿಕ್ ತಪಾಸಣೆಗೆ ಕುಕ್ಕೆ ಸುಬ್ರಹ್ಮಣ್ಯ ಸುತ್ತ ಚೆಕ್‌ಪೋಸ್ಟ್

**ಕುಕ್ಕೆ ಸುಬ್ರಹ್ಮಣ್ಯ, ಮೇ 26:** ಶ್ರೀಕ್ಷೇತ್ರ ಕುಕ್ಕೆ ಸುಬ್ರಹ್ಮಣ್ಯಕ್ಕೆ ಬರಲು ಇರುವ ನಾಲ್ಕೂ ಪ್ರವೇಶ ರಸ್ತೆಗಳಲ್ಲಿ ಏಕಬಳಕೆ ಪ್ಲಾಸ್ಟಿಕ್ ತಪಾಸಣೆಗಾಗಿ ಚೆಕ್‌ಪೋಸ್ಟ್ ಸ್ಥಾಪಿಸಲು ಆದೇಶ ನೀಡಿರುವುದಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಕುಕ್ಕೆ ಸುಬ್ರಹ್ಮಣ್ಯ ದರ್ಶನಾನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ತಾವು ಇಂದು ದೇವಾಲಯಕ್ಕೆ ಬರುವಾಗ ರಸ್ತೆಯ ಬದಿಯಲ್ಲಿ ಪ್ಲಾಸ್ಟಿಕ್ ಬಾಟಲಿ, ತಟ್ಟೆ ಇತ್ಯಾದಿ ಬಿದ್ದಿರುವುದನ್ನು ನೋಡಿ ಆತಂಕವಾಯಿತು. ಕೂಡಲೇ ಅಧಿಕಾರಿಗಳ ಸಭೆ ನಡೆಸಿ ಚೆಕ್ ಪೋಸ್ಟ್ ಸ್ಥಾಪಿಸಿ 2 ಹಂತದ ತಪಾಸಣೆ ಮಾಡಲು ಸೂಚಿಸಿರುವುದಾಗಿ ತಿಳಿಸಿದರು.



ರಾಜ್ಯದಲ್ಲಿ ಡೀಮ್ಡ್ ಅರಣ್ಯಕ್ಕೆ ಸಂಬಂಧಿಸಿದಂತೆ ಸಮಸ್ಯೆ ಇದೆ. ಬಿಜೆಪಿ ಕಾರ್ಯಕಾಲದಲ್ಲಿ 2022ರಲ್ಲಿ ಸುಪ್ರೀಂಕೋರ್ಟ್ ಗೆ ಸಲ್ಲಿಸಿದ ಪ್ರಮಾಣ ಪತ್ರದಲ್ಲಿ 3.33ಲಕ್ಷ ಹೆಕ್ಟೇರ್ ಭೂಮಿ ಡೀಮ್ಡ್ ಎಂದು ಉಲ್ಲೇಖಿಸಲಾಗಿದೆ. ಆದರೆ ಇದರಲ್ಲೂ ಅಂಗನವಾಡಿ, ಸರ್ಕಾರಿ ಆಸ್ಪತ್ರೆ, ಪಟ್ಟಾ ಭೂಮಿ ಇದ್ದು, ಈ ಸಮಸ್ಯೆ ಪರಿಹರಿಸಲು ಕಂದಾಯ ಇಲಾಖೆಯ ಜೊತೆಯಲ್ಲಿ ಜಂಟಿ ಸರ್ವೆ ನಡೆಸುತ್ತಿರುವುದಾಗಿ ತಿಳಿಸಿದರು.

ಕಂದಾಯ ಇಲಾಖೆಯಲ್ಲಿ ಮೋಜಿಣಿದಾರರು ಕೆಲ ತಿಂಗಳಿಂದ ಮುಷ್ಕರ ನಡೆಸುತ್ತಿದ್ದಾರೆ. ಜೊತೆಗೆ ಸರ್ವೆಯರ್ ಗಳ ಕೊರತೆ ಇರುವುದಾಗಿ ಉಡುಪಿ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಅರಣ್ಯ ಜಂಟಿ ಸರ್ವೆಗಾಗಿಯೇ ವಿಶೇಷವಾಗಿ ಸಿಬ್ಬಂದಿ ನಿಯೋಜಿಸಲು ತಿಳಿಸಿದ್ದು ಈ ಬಗ್ಗೆ ಕಂದಾಯ ಸಚಿವರೊಂದಿಗೆ ಸಮಾಲೋಚಿಸುವುದಾಗಿ ತಿಳಿಸಿದರು.

**ಮಾನವ-ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕೆ ಕ್ರಮ:** ಮಾನವನ ಜೀವ ಅತ್ಯಮೂಲ್ಯವಾಗಿದ್ದು ಒಂದೇ ಒಂದು ಪ್ರಾಣಹಾನಿಯೂ ಆಗಬಾರದು, ಈ ನಿಟ್ಟಿನಲ್ಲಿ ಕ್ರಮ ವಹಿಸಲು ಅರಣ್ಯಾಧಿಕಾರಿಗಳಿಗೆ ತಿಳಿಸಲಾಗಿದೆ. ವನ್ಯಜೀವಿಗಳ ಸಂಚಾರದ ಬಗ್ಗೆ ನಿಗಾ ಇಡಲು ಡ್ರೋನ್ ಸೇರಿದಂತೆ ಅತ್ಯಾಧುನಿಕ ಉಪಕರಣಗಳನ್ನು ಬಳಸಲಾಗುತ್ತಿದೆ. ಕಮಾಂಡ್ ಸೆಂಟರ್ ತೆರೆಯಲಾಗಿದೆ ಎಂದು ತಿಳಿಸಿದರು. ಕುಕ್ಕೆ ಸುಬ್ರಹ್ಮಣ್ಯಕ್ಕೆ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಾರೆ. ಅವರ ಮೇಲೆ ವನ್ಯಜೀವಿ ದಾಳಿ ಮಾಡದಂತೆ ಎಚ್ಚರ ವಹಿಸಲು ಮತ್ತು ಚಿರತೆ ಸಮಸ್ಯೆ ಇರುವ ಕಡೆಗೆ ಹೆಚ್ಚಿನ ಬೋನು ನಿಯೋಜಿಸಲು ಮತ್ತು ಆನೆಗಳು ಬಾರದಂತೆ ಕಂದಕ ಕಾಮಗಾರಿ ಪೂರ್ಣಗೊಳಿಸಲು ಮತ್ತು ಸೌರ ತಂತಿ ಬೇಲಿ ಅಳವಡಿಸಲು ಸೂಚಿಸಿದರು.

ಮುಂಬರುವ ರಾಜ್ಯಸಭಾ ಚುನಾವಣೆಯ ಬಗ್ಗೆ ವರಿಷ್ಠರೊಂದಿಗೆ ಚರ್ಚಿಸಲು ಮುಖ್ಯಮಂತ್ರಿಗಳು ಮತ್ತು ನಾಯಕರು ದೆಹಲಿಗೆ ಹೋಗಿದ್ದಾರೆ ಎಂದು ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಸಂಪುಟ ವಿಸ್ತರಣೆ ಮುಖ್ಯಮಂತ್ರಿಗಳ ಪರಮಾಧಿಕಾರವಾಗಿದ್ದು, ಊಹಾತ್ಮಕ ಪ್ರಶ್ನೆಗಳಿಗೆ ಉತ್ತರಿಸುವುದಿಲ್ಲ ಎಂದರು.

### ನದಿಗೆ ತ್ಯಾಜ್ಯ ಹರಿಸಿದರೆ ಕ್ರಿಮಿನಲ್ ಮೊಕದ್ದಮೆ

**ಕುಮಾರಧಾರಾ ನದಿಗೆ ತ್ಯಾಜ್ಯವನ್ನು ನೇರವಾಗಿ ಹರಿಯಬಿಡುತ್ತಿರುವವರ ಮೇಲೆ ಕ್ರಮ ವಹಿಸಲು ಸೂಚಿಸಿದ ಈಶ್ವರ ಖಂಡ್ರೆ, ಸ್ಥಳೀಯ ಸಂಸ್ಥೆಗಳು ಈ ಬಗ್ಗೆ ನಿಗಾ ಇಡಬೇಕು, ತ್ಯಾಜ್ಯ ಜಲ ಸಂಸ್ಕರಣಾ ಘಟಕಗಳ ಪರಿಶೀಲನೆ ಮಾಡಬೇಕು, ಯಾರೇ ಸಂಸ್ಕರಿಸದೆ ತ್ಯಾಜ್ಯ ನದಿಗೆ ಬಿಟ್ಟಿದ್ದರೆ ಮೊದಲಿಗೆ ಎಚ್ಚರಿಕೆ ನೀಡಬೇಕು. ಪದೇ ಪದೇ ಇದೇ ತಪ್ಪು ಮಾಡಿದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.**

# ರಾಜ್ಯಾದ್ಯಂತ 150 ಹೊಸ ನಾಡಕಚೇರಿ ನಿರ್ಮಾಣಕ್ಕೆ ಅಂಕಿತ



**ಬೆಂಗಳೂರು, ಮೇ 26:** ರಾಜ್ಯಾದ್ಯಂತ 771 ಹೋಬಳಿ ಮಟ್ಟದ ನಾಡಕಚೇರಿಗಳು ಕಾರ್ಯನಿರ್ವಹಿಸುತ್ತಿದ್ದು, ರಾಜ್ಯಾದ್ಯಂತ ನೂತನವಾಗಿ 150 ನಾಡಕಚೇರಿಗಳ ನಿರ್ಮಾಣಕ್ಕೆ ಅಂಕಿತ ಹಾಕಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಹೇಳಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸಾರ್ವಜನಿಕರು 54 ಸೇವೆಗಳನ್ನು ಪಡೆಯಲು ಪ್ರತಿನಿತ್ಯ ಹೆಚ್ಚಿನ ಸಂಖ್ಯೆಯಲ್ಲಿ ನಾಡಕಚೇರಿಗಳಿಗೆ ಭೇಟಿ ನೀಡುತ್ತಿದ್ದಾರೆ ಅನೇಕ ಪ್ರಮಾಣ ಪತ್ರಗಳು, ದಾಖಲೆಗಳು ಮಾತ್ರವಲ್ಲದೆ ಕಂದಾಯ ಇಲಾಖೆಗೆ ಸಂಬಂಧಿಸಿದ ಕೆಲಸಗಳಿಗಾಗಿಯೂ ಭೇಟಿ ನೀಡುತ್ತಿರುತ್ತಾರೆ. ಇದಲ್ಲದೆ, ಉಪ ತಹಶೀಲ್ದಾರ್, ಕಂದಾಯ ನಿರೀಕ್ಷಕರು (ಆರ್‌ಐ) ಗ್ರಾಮ ಆಡಳಿತ ಅಧಿಕಾರಿಗಳ (ವಿಎ) ಬಳಿಯೂ ಕೆಲಸಕ್ಕಾಗಿ ಪ್ರತಿದಿನ ಸಾರ್ವಜನಿಕರು ಭೇಟಿ ನೀಡುತ್ತಾರೆ. ಸರ್ಕಾರ ಮತ್ತು ಸಾರ್ವಜನಿಕರ ನಡುವೆ ಕೊಂಡಿಯಾಗಿ ನಾಡಕಚೇರಿಗಳು ಕಾರ್ಯನಿರ್ವಹಿಸುತ್ತಿವೆ ಎಂದಿದ್ದಾರೆ.

ಇಂತಹ ಜನ ಸಂಪರ್ಕವಿರುವ ಕಚೇರಿಗಳಿಗೆ ಅನೇಕ ಕಡೆಗಳಲ್ಲಿ ಸ್ವಂತ ಕಟ್ಟಡಗಳಿಗಲ್ಲ. ಮತ್ತಷ್ಟು ಕಡೆ ಅಧಿಕಾರಿಗಳು ಹಳೇ ಕಟ್ಟಡಗಳಲ್ಲಿ ಅಥವಾ ಶಿಥಿಲಾವಸ್ಥೆಯ ಕಟ್ಟಡಗಳಲ್ಲಿ ಕುಳಿತು ಕಾರ್ಯನಿರ್ವಹಿಸುವಂತಹ ಸ್ಥಿತಿ ಇದೆ. ಸಾರ್ವಜನಿಕರ ಅನಾನುಕೂಲದ ಜತೆಗೆ ಉಪ ತಹಶೀಲ್ದಾರ್, ಕಂದಾಯ ನಿರೀಕ್ಷಕರು ಮತ್ತು ಗ್ರಾಮ ಆಡಳಿತ ಅಧಿಕಾರಿಗಳಿಗೆ ಕೆಲಸ ಮಾಡಲು ಸುಸಜ್ಜಿತ ಕಛೇರಿ ಕಟ್ಟಡದ ಕೊರತೆ ಎದುರಿಸುತ್ತಿದ್ದಾರೆ. ಇದನ್ನು ಮನಗಂಡು ಸರ್ಕಾರ ಸಾರ್ವಜನಿಕರಿಗೆ ಉತ್ತಮ ಸೌಲಭ್ಯ ಹಾಗೂ ಸಿಬ್ಬಂದಿಗೆ ಸುಸಜ್ಜಿತ ಕಚೇರಿ ಕಟ್ಟಡ ಒದಗಿಸಲು ತೀರ್ಮಾನಿಸಲಾಗಿದೆ ಎಂದಿದ್ದಾರೆ.

ಹಾಲಿ ಸ್ವಂತ ಕಟ್ಟಡಗಳು ಇಲ್ಲದೇ ಇರುವಂತಹ ಮತ್ತು ಬಹಳ ಹಳೇಯ ಕಟ್ಟಡಗಳನ್ನು ಹೊಂದಿರುವ ನಾಡ ಕಚೇರಿಗಳನ್ನು ಗುರುತಿಸಿ ಮೊದಲ ಹಂತದಲ್ಲಿ 94 ನಾಡ ಕಚೇರಿಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದೆ. ಮುಂದುವರೆದು ಇನ್ನೂ 56 ನಾಡಕಚೇರಿಗಳನ್ನು ನಿರ್ಮಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ಮೂಲಕ ಒಟ್ಟು 150 ನಾಡ ಕಚೇರಿಗಳಿಗೆ ಸುಸಜ್ಜಿತ ನೂತನ ಕಟ್ಟಡ ನಿರ್ಮಿಸಲು ತೀರ್ಮಾನಿಸಿದಂತಾಗಿದೆ ಎಂದು ಹೇಳಿದ್ದಾರೆ.

ಈ ಹಿಂದೆ ನಾಡಕಚೇರಿ ಕಟ್ಟಡ ನಿರ್ಮಿಸಲು ಕೇವಲ ರೂ.18 ಲಕ್ಷ ಗಳನ್ನು ಮಾತ್ರ ಒದಗಿಸಲಾಗುತ್ತಿತ್ತು. ಇದರಿಂದ ಸೂಕ್ತ ಮತ್ತು ಸಮರ್ಪಕ ಕಟ್ಟಡ ನಿರ್ಮಾಣ ಅಸಾಧ್ಯವಾಗಿತ್ತು. ಪರಿಣಾಮ ಸಾರ್ವಜನಿಕರಿಗೆ ಮತ್ತು ಸಿಬ್ಬಂದಿಗಳಿಗೆ ಅವಶ್ಯಕ ಸೌಲಭ್ಯ ನೀಡುವುದು ಅಸಾಧ್ಯವಾಗಿತ್ತು. ಹಾಗಾಗಿ ಜನರ ಅವಶ್ಯಕತೆಯನ್ನು ಪರಿಗಣಿಸಿ ಪ್ರಸ್ತುತ ಕಟ್ಟಡದ ವಿನ್ಯಾಸವನ್ನೇ ಬದಲಿಸಿ, ಸುಸಜ್ಜಿತವಾತ ಹೊಸ ವಿನ್ಯಾಸವನ್ನು ರೂಪಿಸಲಾಗಿದೆ ಎಂದಿದ್ದಾರೆ.

# ದೇಶದ ಆರೋಗ್ಯ ಸುಸ್ಥಿರತೆಗೆ ಗ್ರಾಮೀಣ ಆರ್ಥಿಕತೆಯೇ ಬಲ

### ಸಂಸದ ಡಾ. ಸಿ.ಎನ್. ಮಂಜುನಾಥ್ ಹೇಳಿಕೆ




**ಕನಕಪುರ, ಮೇ 26:** ರೈತರ ನಿಜವಾದ ಪುಸ್ತಕವೆಂದರೆ ಅವರ ಜಮೀನು; ನಿಜವಾದ ಗ್ರಂಥಾಲಯವೆಂದರೆ ಕೃಷಿ ಮತ್ತು ತೋಟಗಾರಿಕೆ ತರಬೇತಿ ಕೇಂದ್ರಗಳು ಎಂದು ಸಂಸದ ಡಾ.ಸಿ.ಎನ್. ಮಂಜುನಾಥ್ ಹೇಳಿದರು.

ತಾಲ್ಲೂಕಿನ ಕೋಡಿಹಳ್ಳಿ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಹಿಂದಿರುವ ರಂಗಮಂದಿರದಲ್ಲಿ ಐಸಿಎಆರ್, ಕನಕಪುರ ಆರ್ಗ್ಯಾನಿಕ್ ಪ್ರೊಡ್ಯೂಸರ್ ಕಂಪನಿ ಹಾಗೂ ಕೋಡಿಹಳ್ಳಿ ರೇಷ್ಮೆ ಕೃಷಿ ರೈತರ ಉತ್ಪಾದಕ ಕಂಪನಿ ಸಂಯುಕ್ತ ಆಶ್ರಯದಲ್ಲಿ ಗೊಬ್ಬರಗಳ ಸಮತೋಲಿತ ಬಳಕೆ ಮತ್ತು ಸಮಗ್ರ ಮಣ್ಣಿನ ಆರೋಗ್ಯ ನಿರ್ವಹಣೆ ಕುರಿತು ಮಂಗಳವಾರ ಹಮ್ಮಿಕೊಂಡಿದ್ದ ರಾಷ್ಟ್ರವ್ಯಾಪಿ ಜಾಗೃತಿ ಮತ್ತು ಸಂವೇದನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇಶದ ಆರೋಗ್ಯ ಸುಸ್ಥಿರವಾಗಿರಬೇಕಾದರೆ ಗ್ರಾಮೀಣ ಆರ್ಥಿಕತೆ ಬಲವಾಗಬೇಕು. ಗ್ರಾಮೀಣ ಆರ್ಥಿಕತೆ ಬಲವಾಗಬೇಕಾದರೆ ಜಾನುವಾರುಗಳ ಸಂಖ್ಯೆ ಹೆಚ್ಚಾಗಬೇಕು. ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಅತಿಯಾದ ಬಳಕೆಯಿಂದ ಮಣ್ಣಿನ ಆರೋಗ್ಯ ಹಾಳಾಗುತ್ತಿದೆ. ಇದೇ ಕಾರಣದಿಂದ ಅನೇಕ ಆರೋಗ್ಯ ಸಮಸ್ಯೆಗಳು ಮತ್ತು ಕ್ಯಾನ್ಸರ್‌ಗಳಂತಹ ಗಂಭೀರ ರೋಗಗಳು ಹೆಚ್ಚುತ್ತಿವೆ. ಗೊಬ್ಬರ ಮತ್ತು ಔಷಧಿಗಳನ್ನು ಮಿತವಾಗಿ ಬಳಸುವುದು ಅತ್ಯಗತ್ಯ ಎಂದು ಹೇಳಿದರು. ಇನ್ನೂ ಮಾತನಾಡಿದ ಅವರು, ಭೂಮಿಗೂ ಜೀವವಿದೆ. ಪ್ರತಿಯೊಂದು ಜೀವರಾಶಿಯೂ ಒಂದರ ಮೇಲೆ ಒಂದು ಅವಲಂಬಿತವಾಗಿದೆ. ಮಣ್ಣಿನ ಆರೋಗ್ಯ ಕಾಪಾಡಿದಾಗ ಮಾತ್ರ ಉತ್ತಮ ಆಹಾರ ಉತ್ಪಾದನೆ ಸಾಧ್ಯ. ರೈತರಿಗೆ ಮಣ್ಣಿನ ಆರೋಗ್ಯದ ಬಗ್ಗೆ ನಿರಂತರ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ದೇಶಾದ್ಯಂತ ಹೆಚ್ಚಾಗಿ ನಡೆಯಬೇಕು ಎಂದು ಹೇಳಿದರು.

ಡಾ. ಡಿ. ಕಲೈವನನ್, ಹಿರಿಯ ವಿಜ್ಞಾನಿ (ಮಣ್ಣು ವಿಜ್ಞಾನ), ಡಾ. ಜಿ.ಆರ್. ಸ್ಮಿತಾ, ಪ್ರಧಾನ ವಿಜ್ಞಾನಿ, ICAR-IIHR ಬೆಂಗಳೂರು, ಕನಕಪುರ ಆರ್ಗಾನಿಕ್ ಪ್ರೊಡ್ಯೂಸರ್ ಕಂಪನಿಯ ನಿರ್ದೇಶಕರಾದ ಶ್ರೀ ಲಕ್ಷ್ಮೀ ನಾರಾಯಣ ಹಾಗೂ ಶ್ರೀ ಸಂಪತ್ ಕುಮಾರ್, ಕೋಡಿಹಳ್ಳಿ ರೇಷ್ಮೆ ಕೃಷಿ ರೈತರ ಉತ್ಪಾದಕ ಕಂಪನಿ ಲಿಮಿಟೆಡ್‌ನ ನಿರ್ದೇಶಕರು, ಬಿಜೆಪಿ ಮುಖಂಡರುಗಳಾದ ಬೆಂಗಳೂರು ದಕ್ಷಿಣ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಜಗನ್ನಾಥ್‌ಗೌಡ, ಕನಕಪುರ ಗ್ರಾಮಾಂತರ ಮಂಡಲ ಬಿಜೆಪಿ ಅಧ್ಯಕ್ಷ ಕೆ.ಪಿ. ಕುಮಾರ್, ಕನಕಪುರ ನಗರ ಮಂಡಲ ಬಿಜೆಪಿ ಅಧ್ಯಕ್ಷ ಚೂಡಾಮಣಿ ಚಂದ್ರು, ವಿವಿಧ ಗಣ್ಯರು ಹಾಗೂ ಕನಕಪುರ ತಾಲೂಕಿನ ರೈತ ಬಾಂಧವರು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಅಧಿಕಾರ ಹಸ್ತಾಂತರ ಗೊಂದಲ ಬಗೆಹರಿಸದಿದ್ದರೆ ಆಡಳಿತದ ಮೇಲೆ ಪರಿಣಾಮ

### ಮಾಜಿ ಸಚಿವ ಕೆ.ಎನ್. ರಾಜಣ್ಣ ಎಚ್ಚರಿಕೆ



**ಬೆಂಗಳೂರು, ಮೇ 26:** ರಾಜ್ಯ ಕಾಂಗ್ರೆಸ್‌ನಲ್ಲಿ ಸೃಷ್ಟಿಯಾಗಿರುವ ಅಧಿಕಾರ ಹಸ್ತಾಂತರದ ಗೊಂದಲವನ್ನು ಹೈಕಮಾಂಡ್ ಶೀಘ್ರದಲ್ಲೇ ಬಗೆಹರಿಸಬೇಕು. ಇಲ್ಲದಿದ್ದರೆ ಅದು ನೇರವಾಗಿ ರಾಜ್ಯದ ಆಡಳಿತದ ಮೇಲೆ ಗಂಭೀರ ಪರಿಣಾಮ ಬೀರಲಿದ್ದು, ಅಧಿಕಾರಿಗಳು ಕೆಲಸ ಮಾಡದ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಎಚ್ಚರಿಸಿದ್ದಾರೆ.

ಮಂಗಳವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಕ್ಷದ ಆಂತರಿಕ ವಿದ್ಯಮಾನಗಳು ಹಾಗೂ ದೆಹಲಿಯಲ್ಲಿ ನಡೆಯಲಿರುವ ಹೈಕಮಾಂಡ್ ನಾಯಕರ ಸಭೆಯ ಕುರಿತು ಮುಕ್ತವಾಗಿ ತಮ್ಮ ಅಭಿಪ್ರಾಯ ಹಂಚಿಕೊಂಡರು.

ರಾಜಕೀಯದಲ್ಲಿ ಗೊಂದಲಗಳ ನಿವಾರಣೆ ಶೀಘ್ರದಲ್ಲೇ ಆಗಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನೇ ಮುಂದುವರಿಸಬೇಕೋ ಅಥವಾ ಸಂಪುಟ ಪುನಾರಚನೆಗೆ ಅವಕಾಶ ಕೊಡಬೇಕೋ ಎಂಬುದನ್ನು ಹೈಕಮಾಂಡ್ ಬೇಗ ತೀರ್ಮಾನಿಸಲಿ. ಇಲ್ಲದಿದ್ದರೆ ಅಧಿಕಾರಿಗಳ ಯೋಚನೆಯೇ ಬೇರೆ ಇರುತ್ತದೆ, ಅವರು ಸರಿಯಾಗಿ ಕೆಲಸ ಮಾಡುವುದಿಲ್ಲ," ಎಂದು ರಾಜಣ್ಣ ಆತಂಕ ವ್ಯಕ್ತಪಡಿಸಿದರು.

ಇದೇ ವೇಳೆ ತಾವು ದೆಹಲಿ ಪ್ರವಾಸ ಕೈಗೊಳ್ಳುತ್ತಿಲ್ಲ. ವೈಯಕ್ತಿಕ ಕಾರಣಗಳಿಗಾಗಿ ಇಂದು ರಾತ್ರಿ ಅಮೆರಿಕಕ್ಕೆ ತೆರಳುತ್ತಿರುವುದಾಗಿ ತಿಳಿಸಿದರು. ರಾಜ್ಯದಲ್ಲಿ ಒಂದು ವೇಳೆ ಮುಖ್ಯಮಂತ್ರಿ ಬದಲಾವಣೆಯ ಪ್ರಸಂಗ ಎದುರಾದರೆ, ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಸಿಎಂ ಆಗಬೇಕು ಎಂಬ ತಮ್ಮ ಹಳೆಯ ಹೇಳಿಕೆಗೆ ರಾಜಣ್ಣ ಪುನರುಚ್ಚರಿಸಿದರು. ಎರಡೂವರೆ ವರ್ಷಗಳ ಅಧಿಕಾರ ಹಂಚಿಕೆಯ ಒಪ್ಪಂದದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, "ಆ ರೀತಿಯ ಯಾವುದೇ ಒಪ್ಪಂದ ಆಗಿಲ್ಲ ಎಂದು ಭಾವಿಸುತ್ತೇನೆ. ಮುಖ್ಯಮಂತ್ರಿಗಳೇ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ರಾಹುಲ್ ಗಾಂಧಿ ಏನು ಹೇಳುತ್ತಾರೋ ಅದರಂತೆ ನಡೆದುಕೊಳ್ಳುವುದಾಗಿ ಸಿಎಂ ತಿಳಿಸಿದ್ದಾರೆ. ಅವರು ರಾಜೀನಾಮೆ ನೀಡಲು ಸೂಚಿಸಿದರೆ, ಒಂದು ಕ್ಷಣವೂ ಕಾಲಹರಣ ಮಾಡದೆ ಪದತ್ಯಾಗ ಮಾಡುವುದಾಗಿ ಸಿಎಂ ಹೇಳಿದ್ದಾರೆ. ಅಷ್ಟು ಹೇಳಿದ ಮೇಲೆ ಯಾವುದೇ ಗೊಂದಲಕ್ಕೆ ಆಸ್ಪದವಿಲ್ಲ ಎಂದು ರಾಜಣ್ಣ ಹೇಳಿದ್ದಾರೆ.

**ನನಗೆ ಸಚಿವ ಸ್ಥಾನದ ಆಸೆ ಇಲ್ಲ, ಮಂತ್ರಿಯಾಗಿದ್ದೂ ಆಯ್ತು, ಬಿಟ್ಟಿದ್ದೂ ಆಯ್ತು. ನನಗೀಗ ಮಂತ್ರಿ ಸ್ಥಾನ ಬೇಕು ಅಂತೇನೂ ಇಲ್ಲ, ಜನರ ಪರವಾಗಿ ಕೆಲಸ ಮಾಡುತ್ತಿದ್ದೇನೆ.**

**–ಕೆ.ಎನ್. ರಾಜಣ್ಣ, ಮಾಜಿ ಸಚಿವ**

### ರಾಜಕೀಯ ಕ್ರಾಂತಿ ಬಿಜೆಪಿಯಲ್ಲೂ ಆಗಬಹುದು

**ಸೆಪ್ಟೆಂಬರ್ ಕ್ರಾಂತಿ ಕುರಿತು ಮರುಪ್ರಶ್ನಿಸಿದಾಗ, "ರಾಜಕಾರಣ ಎಂಬುದು ನಿಂತ ನೀರಲ್ಲ. ಸಮಸ್ಯೆಗಳು ಉದ್ಭವಿಸುವುದು ಮತ್ತು ಅದಕ್ಕೆ ಪರಿಹಾರ ಕಂಡುಕೊಳ್ಳುವುದು ನಿರಂತರ ಪ್ರಕ್ರಿಯೆ. ನಾನು ಕ್ರಾಂತಿ ಎಂದು ಹೇಳಿದ್ದು ಕೇವಲ ಕಾಂಗ್ರೆಸ್ ಪಕ್ಷವನ್ನು ಉದ್ದೇಶಿಸಿ ಮಾತ್ರವಲ್ಲ, ಆ ರೀತಿಯ ರಾಜಕೀಯ ಬದಲಾವಣೆಯ ಕ್ರಾಂತಿ ಬಿಜೆಪಿಯಲ್ಲೂ ಆಗಬಹುದು," ಎಂದು ಮಾರ್ಮಿಕವಾಗಿ ನುಡಿದರು.**

# ಸರಕು ಸಾಗಣೆ ದರ ಶೇ.10ರಷ್ಟು ಏರಿಸಲು ಲಾರಿ ಮಾಲೀಕರ ಚಿಂತನೆ

**ಬೆಂಗಳೂರು, ಮೇ 26:** ಡೀಸೆಲ್ ದರ ಒಟ್ಟು ರೂ.7.81 ಹಾಗೂ ಪೆಟ್ರೋಲ್ ದರ ರೂ.7.97 ಏರಿಕೆಯಾದ ಬೆನ್ನಲ್ಲೇ ಕರ್ನಾಟಕದ ಲಾರಿ ಮಾಲೀಕರು ಮತ್ತು ಸಾರಿಗೆ ಸಂಸ್ಥೆಗಳು ಸಾಗಣೆ ದರವನ್ನು ಕನಿಷ್ಠ ಶೇ.10ರಷ್ಟು ಹೆಚ್ಚಿಸುವ ಕುರಿತು ಚಿಂತನೆ ನಡೆಸಿದ್ದಾರೆಂದು ತಿಳಿದುಬಂದಿದೆ. ಇದರಿಂದ ತರಕಾರಿ, ದಿನಸಿ ವಸ್ತುಗಳು, ಪ್ಲೈವುಡ್, ಕಬ್ಬಿಣ ಸೇರಿದಂತೆ ವಿವಿಧ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುವ ಸಾಧ್ಯತೆ ಇದೆ. ಇಂಧನ ದರ ಏರಿಕೆಯಿಂದ ಸಾಗಣೆ ವೆಚ್ಚ ಹೆಚ್ಚಾಗುತ್ತಿರುವ ಕಾರಣ ದರ ಹೆಚ್ಚಳ ಅನಿವಾರ್ಯವಾಗಿದೆ ಎಂದು ಸಾರಿಗೆ ವಲಯದ ಪ್ರತಿನಿಧಿಗಳು ಅಭಿಪ್ರಾಯಪಟ್ಟಿದ್ದಾರೆ. ಜೂನ್ ಮೊದಲ ವಾರದಿಂದಲೇ ತರಕಾರಿ ಮತ್ತು ಕೃಷಿ ಉತ್ಪನ್ನಗಳ ಚಿಲ್ಲರೆ ಬೆಲೆಯಲ್ಲಿ ಪ್ರತಿ ಕೆಜಿಗೆ ಕನಿಷ್ಠ 50 ಪೈಸೆಯಷ್ಟು ಹೆಚ್ಚಳವಾಗುವ ಸಾಧ್ಯತೆ ಇದೆ ಎಂದು ಕೃಷಿ ವಲಯದ ಪ್ರತಿನಿಧಿಗಳು ಹೇಳಿದ್ದಾರೆ. ಕರ್ನಾಟಕ ರಾಜ್ಯ ಲಾರಿ ಮಾಲೀಕರ ಹಾಗೂ ಏಜೆಂಟರ ಒಕ್ಕೂಟದ ಅಧ್ಯಕ್ಷ ಜಿ.ಆರ್. ಶಣ್ಮುಗಪ್ಪ ಮಾತನಾಡಿ, ಡೀಸೆಲ್ ದರ ಏರಿಕೆಯಾದಾಗ ಸಾಗಣೆ ವೆಚ್ಚವೂ ಸ್ವಯಂಚಾಲಿತವಾಗಿ ಹೆಚ್ಚಾಗುತ್ತದೆ. ಪ್ರಸ್ತುತ ಪರಿಸ್ಥಿತಿಯಲ್ಲಿ ಸಾಗಣೆ ದರ ಹೆಚ್ಚಳ ಹೊರತುಪಡಿಸಿ ಬೇರೆ ಮಾರ್ಗವಿಲ್ಲ ಎಂದು ಹೇಳಿದ್ದಾರೆ.

Managing Editor : SANDEEP RENU 99728 72151 | Executive Editor : SHARAT JYOTSNA B.R 9886766483 vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಖನಿಜಗಳ ಮೇಲಿನ ಚೀನಾದ ಹಿಡಿತ ಮುರಿಯಲು ಕ್ವಾಡ್ ರಾಷ್ಟ್ರಗಳಿಂದ 20 ಶತಕೋಟಿ ಡಾಲರ್ ಸಂಗ್ರಹ

**ನವದೆಹಲಿ, ಮೇ 26:** ಅಮೆರಿಕ, ಭಾರತ, ಜಪಾನ್ ಮತ್ತು ಆಸ್ಟ್ರೇಲಿಯಾ ಮಂಗಳವಾರ ಒಂದು ಹೆಗ್ಗುರುತು ನಿರ್ಣಾಯಕ ಖನಿಜ ಚೌಕಟ್ಟಿಗೆ ಸಹಿ ಹಾಕಿವೆ, ಜಾಗತಿಕ ಪೂರೈಕೆ ಸರಪಳಿಗಳ ಮೇಲಿನ ಚೀನಾದ ಪ್ರಾಬಲ್ಯಕ್ಕೆ ನೇರ ಸವಾಲಾಗಿ, ವಿದ್ಯುತ್ ವಾಹನಗಳು, ಅರೆವಾಹಕಗಳು ಮತ್ತು ರಕ್ಷಣಾ ವ್ಯವಸ್ಥೆಗಳಿಗೆ ಶಕ್ತಿ ತುಂಬುವ ಕಚ್ಚಾವಸ್ತುಗಳನ್ನು ಪಡೆಯಲು ಗಖಆ 20 ಶತಕೋಟಿ ಮೊತ್ತದ ಬದ್ಧತೆಯನ್ನು ಹೊಂದಿವೆ.

ನವದೆಹಲಿಯಲ್ಲಿ ನಡೆದ ಉನ್ನತಮಟ್ಟದ ಸಚಿವ ಸಂಪುಟ ಸಭೆಯ ಕೊನೆಯಲ್ಲಿ ಅನಾವರಣಗೊಂಡ ಕ್ವಾಡ್ ಕ್ರಿಟಿಕಲ್ ಮಿನರಲ್ಸ್ ಇನಿಶಿಯೇಟಿವ್, ಆಧುನಿಕ ಆರ್ಥಿಕತೆಗಳಿಗೆ ಆಧಾರವಾಗಿರುವ ಖನಿಜಗಳನ್ನು ಗಣಿಗಾರಿಕೆ ಮಾಡಲು, ಸಂಸ್ಕರಿಸಲು, ಮರುಬಳಕೆ ಮಾಡಲು ಮತ್ತು ಹಣಕಾಸು ಒದಗಿಸಲು ಮೂರು-ಹಂತದ ಯೋಜನೆಯನ್ನು ರೂಪಿಸುತ್ತದೆ – ಮತ್ತು ಇದನ್ನು ಒಂದೇ ಪೂರೈಕೆದಾರ ದೀರ್ಘಕಾಲದಿಂದ ಕಾರ್ಯತಂತ್ರದ ಹತೋಟಿಯಾಗಿ ಬಳಸುತ್ತಿದ್ದಾರೆ.



ಚೌಕಟ್ಟಿನ ಮೂರು ಸ್ತಂಭಗಳಲ್ಲಿ 20 ಶತಕೋಟಿ ಡಾಲರ್ ಹೂಡಿಕೆ ಕ್ರಮ ಸೇರಿದೆ, ಇದು ನಾಲ್ಕು ರಾಷ್ಟ್ರಗಳ ಗುಂಪಿಗೆ ರಫ್ತು ಸಾಲ ಏಜೆನ್ಸಿಗಳು, ಅಭಿವೃದ್ಧಿ ಹಣಕಾಸು ಸಂಸ್ಥೆಗಳು, ಇಕ್ವಿಟಿ ಭಾಗವಹಿಸುವಿಕೆ, ಸಾಲ ಖಾತರಿಗಳು ಮತ್ತು ಆಫ್ಟೇಕ್ ಒಪ್ಪಂದಗಳ ಮೂಲಕ ಸಂಯೋಜಿತ ಸರ್ಕಾರಿ ಮತ್ತು ಖಾಸಗಿ ವಲಯದ ಹಣಕಾಸುದಲ್ಲಿ ಗಖಆ 20 ಶತಕೋಟಿ ವರೆಗೆ ಸಜ್ಜುಗೊಳಿಸಲು ಅನುವು ಮಾಡಿಕೊಡುತ್ತದೆ. ನಿರ್ಣಾಯಕ ಖನಿಜ ಪೂರೈಕೆ ಸರಪಳಿಗಳಲ್ಲಿ ಗುರುತಿಸಲಾದ ಅಂತರವನ್ನು ತುಂಬಲು ಬಂಡವಾಳವು ನೇರ ಕ್ವಾಡ್ ನೆಕ್ಸಸ್, ಗಣಿಗಳು, ಸಂಸ್ಕರಣಾ ಘಟಕಗಳು ಮತ್ತು ಪಾಲುದಾರ ರಾಷ್ಟ್ರಗಳಲ್ಲಿ ನೆಲೆಗೊಂಡಿರುವ ಅಥವಾ ಪೂರೈಸುವ ಮರುಬಳಕೆ ಕಾರ್ಯಾಚರಣೆಗಳೊಂದಿಗೆ ಯೋಜನೆಗಳನ್ನು ಗುರಿಯಾಗಿಸುತ್ತದೆ. ಈ ಚೌಕಟ್ಟು ಕ್ವಾಡ್‌ನ ಆರ್ಥಿಕ ಭದ್ರತಾ ಕಾರ್ಯಸೂಚಿಯಲ್ಲಿ ಗಮನಾರ್ಹ ಏರಿಕೆಯನ್ನು ಸೂಚಿಸುತ್ತದೆ. ಲಿಥಿಯಂ, ಕೋಬಾಲ್ಟ್, ಅಪರೂಪದ ಭೂಮಿ ಮತ್ತು ನಿಕಲ್ ಸೇರಿದಂತೆ ನಿರ್ಣಾಯಕ ಖನಿಜಗಳು, ಫೈಟರ್ ಜೆಟ್‌ಗಳಿಂದ ಸೌರಫಲಕಗಳವರೆಗೆ ಮುಂದುವರಿದ ತಂತ್ರಜ್ಞಾನಗಳಿಗೆ ಅತ್ಯಗತ್ಯ, ಮತ್ತು ಚೀನಾ ಪ್ರಸ್ತುತ ಅವುಗಳಲ್ಲಿ ಬಹುಪಾಲು ಸಂಸ್ಕರಣಾ ಸಾಮರ್ಥ್ಯವನ್ನು ಜಾಗತಿಕವಾಗಿ ನಿಯಂತ್ರಿಸುತ್ತದೆ. ಹೂಡಿಕೆ ಸಾಧನಗಳನ್ನು ಒಟ್ಟುಗೂಡಿಸುವ ಮೂಲಕ ಮತ್ತು ನಿಯಂತ್ರಕ ಪರಿಸರಗಳನ್ನು ಜೋಡಿಸುವ ಮೂಲಕ, ಕ್ವಾಡ್ ಪರ್ಯಾಯ ಪೂರೈಕೆ ಪರಿಸರ ವ್ಯವಸ್ಥೆಯನ್ನು ರಚಿಸಲು ಪರಿಣಾಮಕಾರಿಯಾಗಿ ಪ್ರಯತ್ನಿಸುತ್ತಿದೆ, ಇದನ್ನು ಚೌಕಟ್ಟು "ವೈವಿಧ್ಯಮಯ ಮತ್ತು ನ್ಯಾಯಯುತ ನಿರ್ಣಾಯಕ ಖನಿಜ ಮಾರುಕಟ್ಟೆಗಳು" ಎಂದು ಕರೆಯುತ್ತದೆ.

## ಚೀನಾದ ಪೂರೈಕೆ ಸರಪಳಿ ಪ್ರಾಬಲ್ಯವನ್ನು ಎದುರಿಸಲು ಅಮೆರಿಕ, ಭಾರತ ನಿರ್ಣಾಯಕ ಖನಿಜ ಒಪ್ಪಂದಕ್ಕೆ ಸಹಿ

ಅಮೆರಿಕ ಮತ್ತು ಭಾರತ ಮಂಗಳವಾರ ವ್ಯಾಪಕವಾದ ನಿರ್ಣಾಯಕ ಖನಿಜ ಒಪ್ಪಂದಕ್ಕೆ ಸಹಿ ಹಾಕಿದವು, ಮುಂದುವರಿದ ತಂತ್ರಜ್ಞಾನ, ಶುದ್ಧ ಇಂಧನ ಮತ್ತು ರಕ್ಷಣಾ ಉತ್ಪಾದನೆಗೆ ಅಗತ್ಯವಾದ ಅಪರೂಪದ ಭೂಮಿ ಮತ್ತು ಇತರ ವಸ್ತುಗಳ ಪೂರೈಕೆಯನ್ನು ಪಡೆಯಲು ತಮ್ಮ ಕಾರ್ಯತಂತ್ರದ ಪಾಲುದಾರಿಕೆಯನ್ನು ಆಳಗೊಳಿಸಿದವು, ಎರಡೂ ರಾಷ್ಟ್ರಗಳು ಚೀನಾ-ನಿಯಂತ್ರಿತ ಪೂರೈಕೆ ಸರಪಳಿಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಚಲಿಸುತ್ತವೆ. ವಿದೇಶಾಂಗ ಸಚಿವ ಎಸ್. ಜೈಶಂಕರ್ ಮತ್ತು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ನವದೆಹಲಿಯಲ್ಲಿ "ನಿರ್ಣಾಯಕ ಖನಿಜಗಳು ಮತ್ತು ಅಪರೂಪದ ಭೂಮಿಯ ಗಣಿಗಾರಿಕೆ ಮತ್ತು ಸಂಸ್ಕರಣೆಯಲ್ಲಿ ಪೂರೈಕೆಯನ್ನು ಸುರಕ್ಷಿತಗೊಳಿಸುವುದು" ಎಂಬ ಚೌಕಟ್ಟಿನ ಒಪ್ಪಂದಕ್ಕೆ ಸಹಿ ಹಾಕಿದರು, ಇದು ಎರಡೂ



ದೇಶಗಳಾದ್ಯಂತ ಗಣಿಗಾರಿಕೆ, ಸಂಸ್ಕರಣೆ, ಮರುಬಳಕೆ ಮತ್ತು ಸಂಬಂಧಿತ ಹೂಡಿಕೆಯನ್ನು ವ್ಯಾಪಿಸಿರುವ ಸಹಕಾರವನ್ನು ಔಪಚಾರಿಕಗೊಳಿಸಿತು.ವಿದ್ಯುತ್ ವಾಹನಗಳಿಂದ ಹಿಡಿದು ಅರೆವಾಹಕಗಳು ಮತ್ತು ಕ್ಷಿಪಣಿ ವ್ಯವಸ್ಥೆಗಳವರೆಗೆ, ದೀರ್ಘಕಾಲದಿಂದ ಚೀನಾ ಪ್ರಾಬಲ್ಯ ಹೊಂದಿರುವ ಮಾರುಕಟ್ಟೆಗಳಲ್ಲಿ ಪ್ರತಿಯೊಂದಕ್ಕೂ ಆಧಾರವಾಗಿರುವ ಖನಿಜಗಳ ಮೇಲಿನ ಜಾಗತಿಕ ಸ್ಪರ್ಧೆಯನ್ನು ತೀವ್ರಗೊಳಿಸುವ ಕ್ಷಣದಲ್ಲಿ ಈ ಒಪ್ಪಂದವು ಬರುತ್ತದೆ.

# ನರ್ಮದಾ ನೀರು ಹಂಚಿಕೆ: ಮೋದಿ-ಶಿವರಾಜ್ ಸಿಂಗ್ ನಡೆ ದೇಶಕ್ಕೆ ಮಾದರಿ-ಎಚ್‌ಡಿಡಿ ಶ್ಲಾಘನೆ

**ನವದೆಹಲಿ, ಮೇ 26:** ಎರಡು ರಾಜ್ಯಗಳ ನದಿ ನೀರು ಹಚಿಕೆಯ ಬಗ್ಗೆ ನರ್ಮದಾ ನದಿ ನೀರು ಹಂಚಿಕೆ ವಿಚಾರದಲ್ಲಿ ಅಂದು ಗುಜರಾತ್ ಮುಖ್ಯಮಂತ್ರಿಗಳಾಗಿದ್ದ ನರೇಂದ್ರ ಮೋದಿ ಹಾಗೂ ಮಧ್ಯ ಪ್ರದೇಶದ ಮುಖ್ಯಮಂತ್ರಿ ಶಿವರಾಜ್ ಸಿಂಗ್ ಚೌಹಾಣ್ ಅವರ ನಡುವೆ ನಡೆದಿದ್ದ ಸೌಹಾರ್ದ ಚರ್ಚೆ ಅತ್ಯಂತ ಮಾದರಿ ಮತ್ತು ಅನುಕರಣೀಯ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಹೇಳಿದ್ದಾರೆ.

ಕೇಂದ್ರದ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ತಮ್ಮ ಒಡನಾಟ, ರಾಜಕೀಯ ಪ್ರಯಾಣದ ಬಗ್ಗೆ ರಚಿಸಿರುವ ಅಪನಾಪನ್ ಕೃತಿಯ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ಪ್ರಧಾನಿಗಳು, 2006ರಲ್ಲಿ ನವದೆಹಲಿಯಲ್ಲಿ ಶಿವರಾಜ್ ಸಿಂಗ್ ಮತ್ತು ನರೇಂದ್ರ ಮೋದಿ ಅವರ ನಡುವೆ ಸರ್ದಾರ್ ಸರೋವರ ಯೋಜನೆ ಮತ್ತು ನರ್ಮದಾ ನೀರು ನಿರ್ವಹಣೆಗೆ ಸಂಬಂಧಿಸಿದಂತೆ ಸಭೆ ನಡೆಯಿತು. ಆಗ ಇಬ್ಬರೂ ಅವರವರ ರಾಜ್ಯಗಳ ಮುಖ್ಯಮಂತ್ರಿಗಳಾಗಿದ್ದರು. ಗುಜರಾತ್ ಮತ್ತು ಮಧ್ಯಪ್ರದೇಶ ಎರಡೂ ರಾಜ್ಯಗಳು ಒಟ್ಟಿಗೆ ಪ್ರಯೋಜನ ಪಡೆಯಬಹುದಾದ ಸಹಕಾರಿ ಚೌಕಟ್ಟನ್ನು ಮೋದಿ ಅವರು ರೂಪಿಸಿದ್ದರು. ಪರಸ್ಪರ ಸಹಕಾರ ತತ್ವದ ಚೌಕಟ್ಟಿನಲ್ಲಿ ನಡೆದ ಈ ಸಭೆ ಯಶಸ್ವಿಯಾಯಿತು. ಅದೊಂದು ಉತ್ತಮ ಸಭೆ. ಅಂತಾರಾಜ್ಯ ಜಲ ವಿವಾದಗಳ ಪರಿಹಾರದ ನಿಟ್ಟಿನಲ್ಲಿ ಅದು ಮಾದರಿ ಚರ್ಚೆ ಎಂದು ಬಣ್ಣಿಸಿದರು.

ನರ್ಮದಾ ನೀರಿನ ಹಂಚಿಕೆ ಮತ್ತು ಸರ್ದಾರ್ ಸರೋವರ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸುವ ಬಗ್ಗೆ ಒಮ್ಮತ ಸಾಧಿಸಲು ಪ್ರಧಾನಿಯಾಗಿದ್ದಾಗ ತಾವು ನಡೆಸಿದ



ಪ್ರಯತ್ನಗಳನ್ನು ನೆನಪು ಮಾಡಿಕೊಂಡ ದೇವೇಗೌಡರು; 1996ರಲ್ಲಿ ನಾನು ಸೌಹಾರ್ದಯುತ ಮತ್ತು ಒಮ್ಮತ-ಆಧರಿತ ಪರಿಹಾರಕ್ಕೆ ಬರಲು ಸಂಬಂಧಪಟ್ಟ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಹಿರಿಯ ಅಧಿಕಾರಿಗಳ ಸಭೆಯನ್ನು ಕರೆದಿದ್ದೆ. ನಂತರ ಸುಪ್ರೀಂ ಕೋರ್ಟ್ ಆ ಪರಿಹಾರ ಸೂತ್ರವನ್ನು ಅಂಗೀಕರಿಸಿತು. ನರ್ಮದಾ ನದಿ ನೀರು ಗುಜರಾತ್ ಮತ್ತು ಮಧ್ಯಪ್ರದೇಶದ ಜನರಿಗೆ ಪ್ರಯೋಜನವನ್ನು ನೀಡುತ್ತಲೇ ಇದೆ ಎಂಬುದು ನನಗೆ ಬಹಳ ಸಂತೋಷದ ಸಂಗತಿ ಎಂದರು.

2019 ಸೆಪ್ಟೆಂಬರ್ ತಿಂಗಳಲ್ಲಿ ಸರ್ದಾರ್ ಸರೋವರ ಅಣೆಕಟ್ಟು ಪೂರ್ಣ ಮಟ್ಟಕ್ಕೆ ತುಂಬಿದಾಗ, ನಾನು ಬೆಂಗಳೂರಿನಿಂದ ಅಲ್ಲಿಗೆ ಹೋಗಿ ಅಣೆಕಟ್ಟನ್ನು, ಅದರ ಪೂರ್ಣ ಸಾಮರ್ಥ್ಯವನ್ನು ವೀಕ್ಷಿಸಿದೆ. ಇದು ನನಗೆ ಸಾರ್ಥಕದ ಕ್ಷಣವಾಗಿತ್ತು ಎಂದು ಮಾಜಿ ಪ್ರಧಾನಿಗಳು ಹೇಳಿದರು.

ಹಾಗೆಯೇ ಅಪಾನಪನ್ ಪುಸ್ತಕದ ಶೀರ್ಷಿಕೆ ತಮಗೆ ಬಹಳ ಇಷ್ಟವಾಯಿತು ಎಂದು ಹೇಳಿದ ಅವರು, ಇದು ಇಬ್ಬರು ಸಹೋದ್ಯೋಗಿಗಳ ಜತೆಗಿನ ಆಳವಾದ ಬಾಂಧವ್ಯವನ್ನು ಬೆಳೆಸಿಕೊಳ್ಳುವ ಮತ್ತು ಅನುಭವಿಸುವ ಬಗ್ಗೆ ಮತ್ತು ಆತ್ಮೀಯತೆ, ರಕ್ತ ಸಂಬಂಧ ಮತ್ತು ಏಕತೆಯ ಭಾವನೆ ಬಗ್ಗೆ ಈ ಕೃತಿ ಹೇಳುತ್ತದೆ. ಮೋದಿ ಮತ್ತು ಶಿವರಾಜ್ ಸಿಂಗ್ ಅವರ ನಡುವಿನ ದೀರ್ಘ ಕಾಲದ ಒಡನಾಟ, ಬಾಂಧವ್ಯವು ಅವರ ಶಿಸ್ತು ಮತ್ತು ಸಮರ್ಪಣಾ ಭಾವದಿಂದ ಒಟ್ಟಾಗಿ ಸಾಧಿಸಿದ ಧ್ಯೇಯದ ಬಗ್ಗೆ ಸ್ಪಷ್ಟವಾಗಿ ಹೇಳುತ್ತದೆ. ಈ ಇಬ್ಬರ ಪ್ರಯಾಣ ಈಗ ಇತಿಹಾಸದ ಭಾಗವಾಗಿದೆ ಎಂದು ಮಾಜಿ ಪ್ರಧಾನಿಗಳು ಬಣ್ಣಿಸಿದರು.

ಕೃತಿಯ ಶೀರ್ಷಿಕೆ ಬಗ್ಗೆಯೂ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ನನ್ನ ಮಾತೃಭಾಷೆ ಕನ್ನಡದ ಮೂಲಕ ಈ ಶೀರ್ಷಿಕೆ ಅರ್ಥವನ್ನು ಆಸ್ವಾದಿಸುವ ಪ್ರಯತ್ನ ಮಾಡಿದೆ. ನನ್ನ ಭಾಷೆಯಲ್ಲಿ ಅಪನಾಪನ್ ಎಂದರೆ 'ಆಪ್ತ' ಅಥವಾ 'ಆಪ್ತಭಾವ' ಎಂದು ಅರ್ಥ ಬರುತ್ತದೆ. ಅದೊಂದು ಸುಂದರವಾದ ಪದ. ಈ ಪುಸ್ತಕವನ್ನು ಕನ್ನಡಕ್ಕೆ ಅನುವಾದಿಸಿದರೆ ನಿಮಗೆ ಈಗಲೇ ಶೀರ್ಷಿಕೆ ಸಿದ್ಧವಾಗಿದೆ ಎಂದಾಗ ವೇದಿಕೆಯಲ್ಲಿ ವಿಶ್ರಾಂತ ಉಪ ರಾಷ್ಟ್ರಪತಿ ಎಂ. ವೆಂಕಯ್ಯನಾಯ್ಡು ಹಾಗೂ ಶಿವರಾಜ್ ಸಿಂಗ್ ಚೌಹಾಣ್ ಸೇರಿ ಇಡೀ ಸಭಾಂಗಣ ಕರತಾಡನ ಮಾಡಿತು.

ಈ ಪುಸ್ತಕವು ವಿಶಿಷ್ಟ ರಾಜಕೀಯ ಜೀವನ ಚರಿತ್ರೆ ಅಥವಾ ಸಾಂಪ್ರದಾಯಿಕ ಆತ್ಮಚರಿತ್ರೆಯಲ್ಲ. ಇದು ಮೋದಿ ಅವರೊಂದಿಗಿನ ಮಹತ್ವದ ಪ್ರಯಾಣದ ಬಗ್ಗೆ ಶಿವರಾಜ್ ಸಿಂಗ್ ಅರ್ಥಪೂರ್ಣವಾಗಿ ಬರೆದಿದ್ದಾರೆ. ಅಲ್ಲದೆ, ಕೃತಿಯಲ್ಲಿ ಒಂದು ನಿರ್ದಿಷ್ಟ ಔದಾರ್ಯತೆ ಮತ್ತು ನಮ್ರತೆ ಇದೆ, ಅದು ಶಿವರಾಜ್ ಸಿಂಗ್ ಅವರು ಅಧಿಕಾರಕ್ಕೆ ಬರುವ ಮೊದಲೇ ಮೋದಿ ಅವರಿಂದ ಕಲಿತದ್ದನ್ನು ಮುಕ್ತವಾಗಿ ಹೇಳಿದ್ದಾರೆ. ಕಲಿಕೆ ಮತ್ತು ಔದಾರ್ಯದ ಈ ಸ್ವೀಕೃತಿ ಸಾರ್ವಜನಿಕ ಜೀವನ ಮತ್ತು ರಾಜಕೀಯದಲ್ಲಿ ಬಹಳ ಅಪರೂಪ. ಇದು ಶಿವರಾಜ್ ಸಿಂಗ್ ಅವರು ಬಹಳ ವಿಶೇಷ ವ್ಯಕ್ತಿ ಎಂಬುದನ್ನು ತೋರಿಸುತ್ತದೆ ಹಾಗೂ ಆ ವಿಶೇಷ ವ್ಯಕ್ತಿಗೆ ಇನ್ನೊಬ್ಬ ವಿಶೇಷ ವ್ಯಕ್ತಿಯನ್ನು, ಅಂದರೆ ಮೋದಿ ಅವರನ್ನು ಹೇಗೆ ಗುರುತಿಸುವುದು ಮತ್ತು ಅವರ ಬಂಧಗಳನ್ನು ಹೇಗೆ ಗಾಢವಾಗಿಸಬೇಕೆಂಬುದು ತಿಳಿದಿದೆ.

ಅವರ ದೀರ್ಘಕಾಲದ ಸ್ನೇಹ ಮತ್ತು ಸಹೋದರತ್ವವು ಈ ರಾಷ್ಟ್ರದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದೆ ಎಂದು ದೇವೇಗೌಡರು ಬಣ್ಣಿಸಿದರು. ನರೇಂದ್ರ ಮೋದಿ ಅವರು ಬಹಳ ಪರಿಣಾಮಕಾರಿ ಆಡಳಿತಗಾರ ಮತ್ತು ಅನೇಕ ಉತ್ತಮ ವಿಚಾರಗಳನ್ನು ಹೊಂದಿರುವ ವ್ಯಕ್ತಿ. 2014ರಲ್ಲಿ ಮೋದಿ ಅವರು ಈ ರಾಷ್ಟ್ರದ ಆಡಳಿತ ವಹಿಸಿಕೊಂಡು ಅನೇಕ ಉತ್ತಮ ಕಾರ್ಯಕ್ರಮಗಳನ್ನು ಜಾರಿಗೆ ತಂದರು. ಇಡೀ ಜಗತ್ತು ಭಾರತದತ್ತ ತಿರುಗಿ ನೋಡುವಂತೆ ಆಯಿತು ಎಂದು ದೇವೇಗೌಡರು ಹೇಳಿದರು. ಅತ್ಯಂತ ಉತ್ತಮವಾದ ಈ ಕೃತಿ ಆದಷ್ಟು ಬೇಗ ಕನ್ನಡವು ಸೇರಿದಂತೆ ಭಾರತದ ಎಲ್ಲಾ ಭಾಷೆಗಳಿಗೆ ಅನುವಾದ ಆಗಲಿ ಎಂದು ಅವರು ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಹೇಳಿದರು.

## ಸತತ 2ನೇ ಬಾರಿಗೆ ಫೈನಲ್‌ಗೇರಿದ ಆರ್‌ಸಿಬಿ

**ಧರ್ಮಶಾಲಾ, ಮೇ 26:** ಸತತ ಎರಡನೇ ಬಾರಿಗೆ ಐಪಿಎಲ್ ಟ್ರೋಫಿ ಎತ್ತಿಹಿಡಿಯುವ ತವಕದಲ್ಲಿರುವ ಹಾಲಿ ಚಾಂಪಿಯನ್ ಆರ್‌ಸಿಬಿ, ತಾನು ಏಕೆ ಮತ್ತೊಮ್ಮೆ ಚಾಂಪಿಯನ್ ಆಗಬೇಕು ಎಂಬುದನ್ನು ಕ್ವಾಲಿಫೈಯರ್ 1 ಪಂದ್ಯದಲ್ಲಿಯೇ ಸಾಭೀತುಪಡಿಸಿದೆ. ಧರ್ಮಶಾಲಾದ ಹಿಮಾಚಲ ಪ್ರದೇಶ ಕ್ರಿಕೆಟ್ ಸಂಸ್ಥೆ ಕ್ರೀಡಾಂಗಣದಲ್ಲಿ ನಡೆದ ಗುಜರಾತ್ ವಿರುದ್ಧದ ಈ ಪಂದ್ಯದಲ್ಲಿ ಕೆಚ್ಚೆದೆಯ ಆಟ ಪ್ರದರ್ಶಿಸಿದ ಆರ್‌ಸಿಬಿ ದಾಖಲೆಯ ಗೆಲುವು



ದಾಖಲಿಸಿ ಸತತ ಎರಡನೇ ಬಾರಿಗೆ ಐಪಿಎಲ್ ಫೈನಲ್‌ಗೇರಿದೆ. ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ನಾಯಕ ರಜತ್ ಪಾಟಿದಾರ್ ಅವರ ಸಿಡಿಲಬ್ಬರದ ಬ್ಯಾಟಿಂಗ್‌ನಿಂದಾಗಿ ದಾಖಲೆಯ 255 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಗುಜರಾತ್, ಆರ್‌ಸಿಬಿ ಬೌಲರ್‌ಗಳಿಗೆ ದಾಳಿಗೆ ನಲುಗಿ 162 ರನ್‌ಗಳಿಗೆ ಆಲೌಟ್ ಆಯಿತು. ಆದಾಗ್ಯೂ ಗುಜರಾತ್‌ಗೆ ಫೈನಲ್‌ಗೇರಲು ಇನ್ನೊಂದು ಅವಕಾಶವಿದ್ದು, ಕ್ವಾಲಿಫೈಯರ್ 2 ಅನ್ನು ಆಡಲಿದೆ. ಆ ಪಂದ್ಯದಲ್ಲಿ ಗೆದ್ದರೆ ಮತ್ತೆ ಫೈನಲ್‌ನಲ್ಲಿ ಆರ್‌ಸಿಬಿಯನ್ನು ಎದುರಿಸಲಿದೆ.ಮೇಲೆ ಹೇಳಿದಂತೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಸತತ ಎರಡನೇ ಬಾರಿಗೆ ಮತ್ತು ಐಪಿಎಲ್ ಇತಿಹಾಸದಲ್ಲಿ ಐದನೇ ಬಾರಿಗೆ ಫೈನಲ್ ತಲುಪಿದ ಸಾಧನೆ ಮಾಡಿದೆ.

### ಆರ್‌ಸಿಬಿಗೆ ಉತ್ತಮ ಆರಂಭ

ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿಗೆ ಸಾಧಾರಣ ಆರಂಭ ಸಿಕ್ಕಿತು. ವೆಂಕಟೇಶ್ ಅಯ್ಯರ್ 19 ರನ್‌ಗಳ ಇನ್ನಿಂಗ್ಸ್ ಆಡಿ ಔಟಾದರು. ಆದರೆ ಆ ಬಳಿಕ ಜೊತೆಯಾದ ವಿರಾಟ್ ಕೊಹ್ಲಿ ಹಾಗೂ ದೇವದತ್ ಪಡಿಕ್ಕಲ್ ಅರ್ಧಶತಕದ ಜೊತೆಯಾಟವನ್ನಾಡುವ ಮೂಲಕ ತಂಡವನ್ನು ಪವರ್‌ಪ್ಲೇನಲ್ಲಿಯೇ 70 ರನ್‌ಗಳ ಗಡಿ ದಾಟಿಸಿದರು. ಜೊತೆಗೆ ಇವರಿಬ್ಬರು ಅರ್ಧಶತಕದತ್ತ ದಾಪುಗಾಲಿಟ್ಟಿದ್ದರು. ಆದರೆ ಈ ವೇಳೆ ದಾಳಿಗಿಳಿದ ಜೇಸನ್ ಹೋಲ್ಡರ್ ಒಂದೇ ಓವರ್‌ನಲ್ಲಿ ಇವರಿಬ್ಬರನ್ನು ಔಟ್ ಮಾಡಿದರು.

### ನಾಯಕನ ಇನ್ನಿಂಗ್ಸ್ ಆಡಿದ ರಜತ್

ವಿರಾಟ್ ಕೊಹ್ಲಿ 25 ಎಸೆತಗಳಲ್ಲಿ 43 ರನ್ ಬಾರಿಸಿದರೆ, ದೇವದತ್ ಪಡಿಕ್ಕಲ್ 30 ರನ್‌ಗಳ ಕಾಣಿಕೆ ನೀಡಿದರು. ಮಧ್ಯಮ ಕ್ರಮಾಂಕದಲ್ಲಿ ನಾಯಕನ ಇನ್ನಿಂಗ್ಸ್ ಆಡಿದ ರಜತ್ ಪಾಟಿದಾರ್ ಕೇವಲ 33 ಎಸೆತಗಳಲ್ಲಿ ಅಜೇಯ 93 ರನ್ ಬಾರಿಸಿದರು. ಅವರು ತಮ್ಮ ಇನ್ನಿಂಗ್ಸ್‌ನಲ್ಲಿ ಒಂಬತ್ತು ಸಿಕ್ಸರ್‌ಗಳು ಮತ್ತು ಐದು ಬೌಂಡರಿಗಳನ್ನು ಬಾರಿಸಿದರು. ಪಾಟಿದಾರ್ ಅವರ ಸ್ಟ್ರೈಕ್ ರೇಟ್ 281 ಕ್ಕಿಂತ ಹೆಚ್ಚಿತ್ತು. ಪಾಟಿದಾರ್ ಜೊತೆಗೆ, ಕೃನಾಲ್ ಪಾಂಡ್ಯ ಕೂಡ 43 ರನ್ ಗಳಿಸಿ ಆರ್‌ಸಿಬಿ 254 ತಲುಪಲು ಸಹಾಯ ಮಾಡಿದರು.

### ಗುಜರಾತ್ ಬ್ಯಾಟಿಂಗ್ ವೈಫಲ್ಯ

255 ರನ್‌ಗಳ ಗುರಿ ಬೆನ್ನಟ್ಟಿದ ಗುಜರಾತ್‌ನ ಬ್ಯಾಟಿಂಗ್ ಸಂಪೂರ್ಣವಾಗಿ ಕುಸಿಯಿತು. ಸಾಯಿ ಸುದರ್ಶನ್ 14 ರನ್‌ಗಳಿಗೆ ಹಿಟ್ ವಿಕೆಟ್ ಆದರೆ, ನಾಯಕ ಶುಭ್‌ಮನ್ ಗಿಲ್ ಕೇವಲ 2 ರನ್‌ಗಳಿಗೆ ಬೌಲ್ಡ್ ಆದರು. ವಿಕೆಟ್ ಕೀಪರ್ ಜೋಸ್ ಬಟ್ಲರ್ 11 ಎಸೆತಗಳಲ್ಲಿ 29 ರನ್ ಗಳಿಸಿ ಔಟಾದರು. ನಿಶಾಂತ್ ಸಿಂಧು 5 ರನ್ ಗಳಿಸಿ ಔಟಾದರೆ, ವಾಷಿಂಗ್ಟನ್ ಸುಂದರ್ ಕೂಡ 8 ರನ್ ಗಳಿಸಿ ಔಟಾದರು. ಜೇಸನ್ ಹೋಲ್ಡರ್‌ಗೆ ತಮ್ಮ ಖಾತೆಯನ್ನು ತೆರೆಯಲೂ ಸಾಧ್ಯವಾಗಲಿಲ್ಲ. ಆದಾಗ್ಯೂ ತಂಡದ ಪರ ಏಕಾಂಗಿ ಹೋರಾಟ ನಡೆಸಿದ ರಾಹುಲ್ ತೆವಾಟಿಯಾ 68 ರನ್‌ಗಳ ಇನ್ನಿಂಗ್ಸ್ ಆಡಿದರಾದರೂ ತಂಡವನ್ನು ಗೆಲುವಿನ ದಡ ಮುಟ್ಟಿಸಲು ಸಾಧ್ಯವಾಗಲಿಲ್ಲ. ಇತ್ತ ಆರ್‌ಸಿಬಿ ಪರ ವೇಗಿ ಜಾಕೋಬ್ ಡಫಿ ಮೂರು ವಿಕೆಟ್‌ಗಳನ್ನು ಪಡೆದರೆ, ಜೋಶ್ ಹ್ಯಾಜಲ್‌ವುಡ್, ರಸಿಕ್ ಸಲಾಂ ದಾರ್ ಮತ್ತು ಕೃನಾಲ್ ಪಾಂಡ್ಯ ತಲಾ 2 ವಿಕೆಟ್ ಪಡೆದರು. ಇವರಲ್ಲದೆ, ಭುವನೇಶ್ವರ್ ಕುಮಾರ್ 1 ವಿಕೆಟ್ ಪಡೆದರು.

# ನೀಟ್ ಬೆನ್ನಲ್ಲೇ ಎಸ್‌ಎಸ್‌ಸಿ-ಜಿಡಿ ಗದ್ದಲ, ಪರೀಕ್ಷೆ ರದ್ದು: ಅಭ್ಯರ್ಥಿಗಳ ಆಕ್ರೋಶ

**ನವದೆಹಲಿ, ಮೇ 26:** ಕೇಂದ್ರ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗವು (ಸ್ಟಾಫ್ ಸೆಲೆಕ್ಷನ್ ಕಮಿಷನ್ ಎಸ್‌ಎಸ್‌ಸಿ) ನಡೆಸುತ್ತಿದ್ದ ಬಹುನಿರೀಕ್ಷಿತ ಎಸ್‌ಎಸ್‌ಸಿ ಜಿಡಿ ಕಾನ್ಸ್‌ಟೇಬಲ್ ನೇಮಕಾತಿ ಪರೀಕ್ಷೆ ಸೋಮವಾರ ಏಕಾಏಕಿ ರದ್ದಾಗಿದೆ. ಕಾನ್ಪುರದ ಕೇಂದ್ರವೊಂದರಲ್ಲಿ ಭಾರಿ ಗೊಂದಲ ಮತ್ತು ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂಬ ಗಂಭೀರ ಆರೋಪಗಳ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದುಗೊಳಿಸಲಾಗಿದೆ ಎಂದು ವರದಿಯಾಗಿದೆ. ಪರೀಕ್ಷಾ ರದ್ದತಿಯಿಂದಾಗಿ ಪರೀಕ್ಷೆ ಬರೆದಿದ್ದ ಮತ್ತು ಬರೆಯಲಾಗದಿದ್ದ ಅಭ್ಯರ್ಥಿಗಳು ಆಕ್ರೋಶಗೊಂಡಿದ್ದು, ಭಾರೀ ಪ್ರತಿಭಟನೆ ನಡೆಸಿದ್ದಾರೆ.

ಕಾನ್ಪುರದ ಪೂರ್ವಾಮೀರ್‌ನಲ್ಲಿರುವ ರಾಮಕಲಿ ಇಕ್ಬಾಲ್ ಬಹದ್ದೂರ್ ಆನ್‌ಲೈನ್ ಸೆಂಟರ್ ಪರೀಕ್ಷಾ ಕೇಂದ್ರದಲ್ಲಿ ನಿಗದಿತ ಆಸನ ಸಾಮರ್ಥ್ಯಕ್ಕಿಂತ ದುಪ್ಪಟ್ಟು ಸಂಖ್ಯೆಯ ಅಭ್ಯರ್ಥಿಗಳಿಗೆ ಒಂದೇ ಶಿಫ್ಟ್‌ನಲ್ಲಿ ಪ್ರವೇಶ ಪತ್ರಗಳನ್ನು ವಿತರಿಸಿದ್ದರಿಂದಾಗಿ, ಎಲ್ಲ ಅಭ್ಯರ್ಥಿಗಳು ಪರೀಕ್ಷೆಯನ್ನು ತೆಗೆದುಕೊಳ್ಳಲಾಗಿಲ್ಲ. ಪರೀಕ್ಷಾ ಕೇಂದ್ರದ ಹೊರಗೆ ಮತ್ತು ಒಳಗೆ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು, ಪರೀಕ್ಷೆ ನಡೆಸಲಾಗಿಲ್ಲ. ಉತ್ತರ ಪ್ರದೇಶದ ಮೂರು ಕೇಂದ್ರಗಳಲ್ಲಿನ ಪರೀಕ್ಷೆಗಳು ರದ್ದಾಗಿದ್ದು, ಈ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಬೇಕಿದ್ದ ಅಭ್ಯರ್ಥಿಗಳಿಗೆ ಮರುಪರೀಕ್ಷೆ ನಡೆಸುವುದಾಗಿ ಎಸ್‌ಎಸ್‌ಸಿ ತಿಳಿಸಿದೆ.

ಅಧಿಕೃತ ಮೂಲಗಳ ಪ್ರಕಾರ, ಈ ನಿರ್ದಿಷ್ಟ ಪರೀಕ್ಷಾ ಕೇಂದ್ರದಲ್ಲಿ ಪ್ರತಿ ಶಿಫ್ಟ್‌ಗೆ ಕೇವಲ 399 ಅಭ್ಯರ್ಥಿಗಳಿಗೆ ಮಾತ್ರ ಪರೀಕ್ಷೆ ಬರೆಯಲು ಆಸನಗಳ ವ್ಯವಸ್ಥೆ ಇತ್ತು. ಆದರೆ, ತಾಂತ್ರಿಕ ದೋಷ ಅಥವಾ ಆಡಳಿತಾತ್ಮಕ ಬೇಜವಾಬ್ದಾರಿಯಿಂದಾಗಿ ಪ್ರತಿ ಶಿಫ್ಟ್‌ಗೆ ಸುಮಾರು 819 ಅಭ್ಯರ್ಥಿಗಳಿಗೆ ಇದೇ ಕೇಂದ್ರದ ಹೆಸರಿನಲ್ಲಿ ಪ್ರವೇಶ ಪತ್ರಗಳನ್ನು ವಿತರಿಸಲಾಗಿತ್ತು. ಇದು ಪರೀಕ್ಷಾ ಆವರಣದಲ್ಲಿ ಹಿಂದೆಂದೂ ಕಾಣದಂತಹ ಗದ್ದಲ ಮತ್ತು ಗೊಂದಲದ ವಾತಾವರಣ ನಿರ್ಮಾಣವಾಗಲು ಕಾರಣವಾಗಿದೆ.

ಇದರ ಬೆನ್ನಲ್ಲೇ, ಪರೀಕ್ಷೆಯ ರಹಸ್ಯ ಮತ್ತು ಪಾರದರ್ಶಕತೆಗೆ ಧಕ್ಕೆ ಬಂದಿದೆ ಹಾಗೂ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂಬ ಗಂಭೀರ ಆರೋಪಗಳು ಮತ್ತು ವದಂತಿಗಳು ಅಭ್ಯರ್ಥಿಗಳ ನಡುವೆ ದಟ್ಟವಾಗಿ ಹರಡಿದೆ. ಪರೀಕ್ಷಾ ಪ್ರಕ್ರಿಯೆಯಲ್ಲಿನ ಇಂತಹ ಸರಣಿ ಲೋಪಗಳು ಪರೀಕ್ಷಾರ್ಥಿಗಳಲ್ಲಿ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಸಂಪೂರ್ಣವಾಗಿ ಕುಸಿಯುವಂತೆ ಮಾಡಿದೆ.



ನಿಗದಿತ ವೇಳಾಪಟ್ಟಿಯ ಪ್ರಕಾರ ಎಸ್‌ಎಸ್‌ಸಿ ಜಿಡಿ ಕಾನ್ಸ್‌ಟೇಬಲ್ ಪರೀಕ್ಷೆಯು ಮಧ್ಯಾಹ್ನ 2 ಗಂಟೆಯಿಂದ 3 ಗಂಟೆಯವರೆಗೆ ಮೊದಲ ಶಿಫ್ಟ್ ಮತ್ತು ಸಂಜೆ 4.30 ರಿಂದ 5.30 ರವರೆಗೆ ಎರಡನೇ ಶಿಫ್ಟ್‌ನಲ್ಲಿ ನಡೆಯಬೇಕಿತ್ತು. ಮಧ್ಯಾಹ್ನದ ವೇಳೆಗೆ ಪರೀಕ್ಷಾ ಕೇಂದ್ರಕ್ಕೆ ಆಗಮಿಸಿದ ಅಭ್ಯರ್ಥಿಗಳಿಗೆ ಅಲ್ಲಿನ ಜನಸಂದಣಿ ನೋಡಿ ಆಘಾತವಾಗಿದೆ. ಈಗಾಗಲೇ ಸುಮಾರು 350 ಅಭ್ಯರ್ಥಿಗಳನ್ನು ಪರೀಕ್ಷಾ ಕೊಠಡಿಯೊಳಗೆ ಕೂರಿಸಿದ ನಂತರವಷ್ಟೇ, ನಿಗದಿತ ಸೀಟುಗಳಿಗಿಂತ ಹೆಚ್ಚಿನ ಸಂಖ್ಯೆಯ ಅಭ್ಯರ್ಥಿಗಳು ಹೊರಗೆ ಕಾಯುತ್ತಿರುವುದು ಅಧಿಕಾರಿಗಳ ಗಮನಕ್ಕೆ ಬಂದಿದೆ. ಲಭ್ಯವಿರುವ ಕಂಪ್ಯೂಟರ್ ವ್ಯವಸ್ಥೆ ಮತ್ತು ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆಯ ನಡುವೆ ಭಾರಿ ವ್ಯತ್ಯಾಸವಿರುವುದನ್ನು ಕಂಡು ಅಧಿಕಾರಿಗಳು ತಬ್ಬಿಬ್ಬಾಗಿದ್ದಾರೆ.

ಮ್ಯಾನೇಜ್‌ಮೆಂಟ್ ವೈಫಲ್ಯ ಮತ್ತು ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪಗಳ ವಿರುದ್ಧ ಪರೀಕ್ಷಾರ್ಥಿಗಳು ಪರೀಕ್ಷಾ ಕೇಂದ್ರದ ಮುಂಭಾಗದಲ್ಲೇ ಧರಣಿ ಕುಳಿತು ತೀವ್ರ ಪ್ರತಿಭಟನೆ ನಡೆಸಿದ್ದಾರೆ. ಪರಿಸ್ಥಿತಿ ವಿಕೋಪಕ್ಕೆ ಹೋಗುತ್ತಿರುವುದನ್ನು ಅರಿತ ಪರೀಕ್ಷಾ ಕೇಂದ್ರದ ಆಡಳಿತ ಮಂಡಳಿಯು ತಕ್ಷಣವೇ ಎಸ್‌ಎಸ್‌ಸಿ ಉನ್ನತಾಧಿಕಾರಿಗಳಿಗೆ ವಿಷಯ ಮುಟ್ಟಿಸಿತು. ಜಿಲ್ಲಾಡಳಿತ ಮತ್ತು ಎಸ್‌ಎಸ್ಸಿ ಅಧಿಕಾರಿಗಳ ನಡುವೆ ನಡೆದ ತುರ್ತು ಚರ್ಚೆಯ ನಂತರ, ಮುಂದಾಗಬಹುದಾದ ಭದ್ರತಾ ಲೋಪ ಮತ್ತು ಕಾನೂನು ಸುವ್ಯವಸ್ಥೆಯ ಹಿತದೃಷ್ಟಿಯಿಂದ ಎರಡೂ ಶಿಫ್ಟ್‌ಗಳ ಪರೀಕ್ಷೆಗಳನ್ನು ಅಧಿಕೃತವಾಗಿ ರದ್ದುಗೊಳಿಸಿವೆ.

ಯಾವುದೇ ಮುನ್ಸೂಚನೆಯಿಲ್ಲದೆ ದಿಢೀರನೆ ಪರೀಕ್ಷೆ ರದ್ದಾದ ಸುದ್ದಿ ತಿಳಿಯುತ್ತಿದ್ದಂತೆ ದೂರದ ಜಿಲ್ಲೆಗಳಿಂದ, ಹಳ್ಳಿಗಳಿಂದ ನೂರಾರು ಕಿಲೋಮೀಟರ್ ಪ್ರಯಾಣಿಸಿ ಬಂದಿದ್ದ ಅಭ್ಯರ್ಥಿಗಳು ಆಕ್ರೋಶಗೊಂಡಿದ್ದಾರೆ. ಶೀಘ್ರದಲ್ಲೇ ಮರುಪರೀಕ್ಷೆಯ ದಿನಾಂಕಗಳನ್ನು ಪ್ರಕಟಿಸಲಾಗುವುದು ಎಂದು ಎಸ್‌ಎಸ್‌ಸಿ ಭರವಸೆ ನೀಡಿದೆ. ಹೊಸ ಪರೀಕ್ಷಾ ದಿನಾಂಕಗಳು ಮತ್ತು ಪರಿಷ್ಕೃತ ಕೇಂದ್ರಗಳ ವಿವರಗಳನ್ನು ಅಭ್ಯರ್ಥಿಗಳ ನೋಂದಾಯಿತ ಇ-ಮೇಲ್ ವಿಳಾಸಕ್ಕೆ ನೇರವಾಗಿ ಕಳುಹಿಸಲಾಗುವುದು ಹಾಗೂ ಎಸ್‌ಎಸ್ಸಿಯ ಅಧಿಕೃತ ವೆಬ್‌ಸೈಟ್‌ನಲ್ಲಿಯೂ ಈ ಕುರಿತು ಪ್ರತ್ಯೇಕ ಅಧಿಸೂಚನೆ ಹೊರಡಿಸಲಾಗುವುದು ಎಂದು ಸ್ಪಷ್ಟಪಡಿಸಲಾಗಿದೆ. ಅಭ್ಯರ್ಥಿಗಳು ಯಾವುದೇ ವದಂತಿಗಳಿಗೆ ಕಿವಿಗೊಡದೆ ಅಧಿಕೃತ ವೆಬ್‌ಸೈಟ್ ನಿರಂತರವಾಗಿ ಗಮನಿಸುತ್ತಿರಲು ಎಸ್‌ಎಸ್‌ಸಿ ಮನವಿ ಮಾಡಿದೆ.

# ವಿಶ್ವದ ಅತಿದೊಡ್ಡ ಆರೋಗ್ಯ ಭರವಸೆ ಯೋಜನೆ ಆಯುಷ್ಮಾನ್ ಭಾರತ್: ಡಾ. ಮಂಜುನಾಥ್

**ನವದೆಹಲಿ, ಮೇ 26:** "ಆರೋಗ್ಯ ಮತ್ತು ಶಿಕ್ಷಣ ಸುಧಾರಣೆಗಳನ್ನು ಮುಂದುವರೆಸುವುದು: 2047ರಲ್ಲಿ ವಿಕಸಿತ್ ಭಾರತವನ್ನು ನಿರ್ಮಿಸುವುದು" ಎಂಬ ಕಾರ್ಯಾಗಾರದಲ್ಲಿ ಪ್ರಮುಖ ಭಾಷಣಕಾರರಾಗಿ ಭಾಗವಹಿಸಿದ್ದಕ್ಕೆ ಗೌರವ ಸಿಕ್ಕಂತಾಗಿದೆ ಎಂದು ಸಂಸದ ಡಾ.ಸಿ.ಎನ್. ಮಂಜುನಾಥ್ ಹೇಳಿದರು.

ನವದೆಹಲಿಯಲ್ಲಿ ಸೋಮವಾರ ನಡೆದ "ಆಯುಷ್ಮಾನ್ ಭಾರತ್: ಭಾರತದ ಆರೋಗ್ಯ ರಕ್ಷಣಾ ಪ್ರತಿಷ್ಠಾನವನ್ನು ಪುನರ್ವಿನ್ಯಾಸಗೊಳಿಸುವುದು" ಎಂಬ ವಿಷಯದ ಕುರಿತು ಅಧಿವೇಶನದಲ್ಲಿ, ಭಾರತದಲ್ಲಿ ಆರೋಗ್ಯ ಸುಧಾರಣೆಗಳ ಪರಿವರ್ತನೆಯ ಪರಿಣಾಮ ಮತ್ತು ವಿಕ್ಷಿತ್ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸಲು ಬಲವಾದ, ಹೆಚ್ಚು ಸಮಗ್ರ ಮತ್ತು ರೋಗಿ-ಕೇಂದ್ರಿತ ಆರೋಗ್ಯ ರಕ್ಷಣಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಮಹತ್ವದ ಕುರಿತು ಮಾತನಾಡಿದ ಅವರು, ಆಯುಷ್ಮಾನ್ ಭಾರತ್ ಇಂದು ವಿಶ್ವದ ಅತಿದೊಡ್ಡ ಆರೋಗ್ಯ ಭರವಸೆ ಉಪಕ್ರಮಗಳಲ್ಲಿ ಒಂದಾಗಿದ್ದು, ಸಂಕೀರ್ಣ ಆರೋಗ್ಯ ರಕ್ಷಣಾ ಸವಾಲುಗಳನ್ನು ಎದುರಿಸುತ್ತಿರುವ ರೋಗಿಗಳಿಗೆ ಉಚಿತ ಚಿಕಿತ್ಸೆ ಮತ್ತು ಆರ್ಥಿಕ ರಕ್ಷಣೆಯನ್ನು

**45 ಕೋಟಿ ಫಲಾನುಭವಿಗಳು, ಇದುವರೆಗೆ 10 ಕೋಟಿಗೂ ಹೆಚ್ಚು ರೋಗಿಗಳಿಗೆ ಪ್ರಯೋಜನ**

ಒದಗಿಸುತ್ತದೆ. 45 ಕೋಟಿ ಫಲಾನುಭವಿಗಳು ಈ ಉಪಕ್ರಮದ ಅಡಿಯಲ್ಲಿ ದಾಖಲಾಗಿದ್ದಾರೆ ಮತ್ತು 10 ಕೋಟಿಗೂ ಹೆಚ್ಚು ರೋಗಿಗಳು ಇಲ್ಲಿಯವರೆಗೆ ಚಿಕಿತ್ಸಾ ಪ್ರಯೋಜನಗಳನ್ನು ಪಡೆದಿದ್ದಾರೆ, ಇದು ಈ ಹೆಗ್ಗುರುತು ಕಾರ್ಯಕ್ರಮದ ಪ್ರಮಾಣ ಮತ್ತು ವ್ಯಾಪ್ತಿಯನ್ನು ಪ್ರತಿಬಿಂಬಿಸುತ್ತದೆ ಎಂದರು.

ದೇಶಾದ್ಯಂತ ದುರ್ಬಲ ವರ್ಗಗಳಿಗೆ ಆರೋಗ್ಯ ಸೇವೆಯನ್ನು ಹೆಚ್ಚು ಸಮಾನ ಮತ್ತು ಸುಲಭವಾಗಿ ಲಭ್ಯವಾಗುವಂತೆ ಮಾಡುವ ಮೂಲಕ ಆಯುಷ್ಮಾನ್ ಭಾರತ್ ಹೇಗೆ ಪ್ರಮುಖ ಬೆಂಬಲ ವ್ಯವಸ್ಥೆಯಾಗಿದೆ. ಈ ಉಪಕ್ರಮವು ಪ್ರಾಥಮಿಕ, ಮಾಧ್ಯಮಿಕ ಮತ್ತು ತೃತೀಯ ಆರೋಗ್ಯ ಸೇವೆಗಳಲ್ಲಿ ಪ್ರವೇಶವನ್ನು ಬಲಪಡಿಸಿದೆ. ಇದಕ್ಕೂ ಮೊದಲು, ಹೆಚ್ಚಿನ ಚಿಕಿತ್ಸಾ ವೆಚ್ಚಗಳಿಂದಾಗಿ




ಅನೇಕ ಕುಟುಂಬಗಳಿಗೆ ಸುಧಾರಿತ ತೃತೀಯ ಚಿಕಿತ್ಸೆ ಪಡೆಯಲು ಆಗುತ್ತಿರಲಿಲ್ಲ. ಆದರೆ, ಈ ಸುಧಾರಣೆಯು ವಿಶೇಷ ಆರೋಗ್ಯ ಸೇವೆಗೆ ಅನುಕೂಲ ಮಾಡಿಕೊಟ್ಟಿದೆ ಎಂದರು. ಆರೋಗ್ಯ ರಕ್ಷಣೆಗಾಗಿ ಜನರು ಖರ್ಚು ಮಾಡುವ ವೆಚ್ಚವು ಶೇ.60 ರಷ್ಟು ಗಣನೀಯವಾಗಿ ಕಡಿಮೆಯಾಗಿದೆ, ಇದು ಕುಟುಂಬಗಳಿಗೆ ಪ್ರಮುಖ ಆರ್ಥಿಕ ಪರಿಹಾರವನ್ನು ತಂದಿದೆ ಮತ್ತು ಭಾರತದಾದ್ಯಂತ ಆರೋಗ್ಯ ಭದ್ರತೆಯನ್ನು ಸುಧಾರಿಸಿದೆ ಎಂದರು.

ಮುಂದಿನ ಹಂತದ ಆರೋಗ್ಯ ಸುಧಾರಣೆಗಳಿಗೆ ಸಲಹೆಯಾಗಿ, ಆಯುಷ್ಮಾನ್ ಭಾರತ್ ಅಡಿಯಲ್ಲಿ ವಿಮಾ ರಕ್ಷಣೆಯನ್ನು 5 ಲಕ್ಷದಿಂದ 8-10 ಲಕ್ಷ ರೂ.ಗೆ ಹೆಚ್ಚಿಸುವ ಬಗ್ಗೆ ಪ್ರಸ್ತಾಪಿಸಿದ್ದು, ಇದರಿಂದಾಗಿ ನಿರ್ಣಾಯಕ ಮತ್ತು ಮುಂದುವರಿದ ಚಿಕಿತ್ಸೆಗಳ ಅಗತ್ಯವಿರುವ ರೋಗಿಗಳು ಆರ್ಥಿಕ ತೊಂದರೆಯಿಲ್ಲದೆ ಹೆಚ್ಚು ಸೌಲಭ್ಯ ಪಡೆಯಲು ಸಾಧ್ಯವಾಗುತ್ತದೆ ಎಂದರು.

2047 ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವಲ್ಲಿ ಪ್ರಮುಖ ಆಧಾರ ಸ್ತಂಭಗಳಾಗಿ ಆರೋಗ್ಯ ರಕ್ಷಣೆ ಮತ್ತು ಶಿಕ್ಷಣ ಸುಧಾರಣೆಗಳನ್ನು ಮುಂದುವರಿಸುವ ಕುರಿತು ಅರ್ಥಪೂರ್ಣ ಚರ್ಚೆಗಳಿಗೆ ಕಾರ್ಯಾಗಾರವು ಅವಕಾಶವನ್ನು ಒದಗಿಸಿದೆ ಎಂದರು.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತರುಣ್ ಚುಗ್ ಮತ್ತು ಸಂಸದ ಮತ್ತು ಬಿಜೆಪಿ ರಾಷ್ಟ್ರೀಯ ವಕ್ತಾರ ಡಾ. ಸಂಬಿತ್ ಪಾತ್ರ ಭಾಗವಹಿಸಿದ್ದರು.

# ಇರಾನ್‌ನ ಯುರೇನಿಯಂ ನಿಕ್ಷೇಪ ವಿಲೇವಾರಿಗೆ ಅಮೆರಿಕ ಅಧ್ಯಕ್ಷ ಟ್ರಂಪ್ ಒತ್ತಡ

**ವಾಷಿಂಗ್ಟನ್, ಮೇ 26:** ಇರಾನ್‌ನ ಅಪಾರ ಪುಷ್ಟೀಕರಿಸಿದ ಯುರೇನಿಯಂ ನಿಕ್ಷೇಪಗಳನ್ನು ವಿಲೇವಾರಿ ಮಾಡಲು ತಮ್ಮ ಆದ್ಯತೆಯ ಆಯ್ಕೆಗಳನ್ನು ವಿವರಿಸಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಟೆಹ್ರಾನ್ ಅದನ್ನು ನಾಶಮಾಡಲು ಅಮೆರಿಕಕ್ಕೆ ಹಸ್ತಾಂತರಿಸಬೇಕು ಅಥವಾ ಇರಾನ್ನೊಳಗೆ ಅಂತರರಾಷ್ಟ್ರೀಯ ಮೇಲ್ವಿಚಾರಣೆಯಲ್ಲಿ ಅಥವಾ ಇನ್ನೊಂದು ಆದ್ಯತೆಯ ಸ್ಥಳದಲ್ಲಿ ಅದನ್ನು ನಿರ್ಮೂಲನೆ ಮಾಡಬೇಕು ಎಂದು ಹೇಳಿದರು. ಸೋಮವಾರ ಟ್ರೂತ್ ಸೋಷಿಯಲ್ಗೆ ಕರೆದೊಯ್ಯುತ್ತಾ, ಎರಡೂ ಕಡೆಯ ಸಮಾಲೋಚಕರು ಪ್ರಾದೇಶಿಕ ಯುದ್ಧವು ಮತ್ತಷ್ಟು ಉಲ್ಬಣಗೊಳ್ಳದಂತೆ ತಡೆಯಲು ಕತಾರ್‌ನಲ್ಲಿ ಮತ್ತೊಂದು ಸುತ್ತಿನ ಉನ್ನತ ಮಟ್ಟದ ಮಾತುಕತೆಗೆ ತಯಾರಿ ನಡೆಸುತ್ತಿರುವಾಗ ಅವರ ಹೇಳಿಕೆಗಳು ಬಂದವು. "ಪುಷ್ಟೀಕರಿಸಿದ ಯುರೇನಿಯಂ (ಪರಮಾಣು ಧೂಳು) ಅನ್ನು ತಕ್ಷಣವೇ ಅಮೆರಿಕಕ್ಕೆ ಹಸ್ತಾಂತರಿಸಿ ಮನೆಗೆ ತರಲಾಗುತ್ತದೆ ಮತ್ತು ನಾಶಪಡಿಸಲಾಗುತ್ತದೆ ಅಥವಾ ಆದ್ಯತೆಯಾಗಿ, ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್ನೊಂದಿಗೆ ಸಂಯೋಜಿತವಾಗಿ



ಮತ್ತು ಸಮನ್ವಯದಿಂದ, ಸ್ಥಳದಲ್ಲಿ ಅಥವಾ ಇನ್ನೊಂದು ಸ್ವೀಕಾರಾರ್ಹ ಸ್ಥಳದಲ್ಲಿ ನಾಶಪಡಿಸಲಾಗುತ್ತದೆ" ಎಂದು ಟ್ರಂಪ್ ಬರೆದಿದ್ದಾರೆ.

ಈ ಪ್ರಕ್ರಿಯೆಯನ್ನು "ಪರಮಾಣು ಶಕ್ತಿ ಆಯೋಗ ಅಥವಾ ಅದರ ಸಮಾನ" ಮೇಲ್ವಿಚಾರಣೆ ಮಾಡಬೇಕು ಎಂದು ಅವರು ಹೇಳಿದರು, ಇದು ಭವಿಷ್ಯದ ಯಾವುದೇ ಒಪ್ಪಂದದ ಭಾಗವಾಗಿ ಅಂತರರಾಷ್ಟ್ರೀಯ ಪರಿಶೀಲನೆಗಾಗಿ ವಾಷಿಂಗ್ಟನ್‌ನ ಒತ್ತಡವನ್ನು ಸೂಚಿಸುತ್ತದೆ. ವಾಷಿಂಗ್ಟನ್ ಇಸ್ಲಾಮಿಕ್ ಗಣರಾಜ್ಯವು ತನ್ನ ಪರಮಾಣು ಕಾರ್ಯಕ್ರಮವನ್ನು ರದ್ದುಗೊಳಿಸಬೇಕೆಂದು ಒತ್ತಾಯಿಸುತ್ತಲೇ ಇದೆ, ಆದರೆ ಇರಾನಿನ ಅಧಿಕಾರಿಗಳು ಅದನ್ನು ತಮ್ಮ 'ಸಾರ್ವಭೌಮ ಹಕ್ಕು' ಎಂದು ಕರೆದಿದ್ದಾರೆ ಮತ್ತು ಅವರು ಪರಮಾಣು ಶಸ್ತ್ರಾಸ್ತ್ರಗಳನ್ನು ಹುಡುಕುತ್ತಿದ್ದಾರೆ ಎಂಬ ಪಾಶ್ಚಿಮಾತ್ಯ ಹಕ್ಕುಗಳನ್ನು ನಿರಾಕರಿಸಿದ್ದಾರೆ.

ಟ್ರಂಪ್ ಅವರ ಹೇಳಿಕೆಗಳ ಹೊರತಾಗಿಯೂ, ಮಾತುಕತೆಗಳ ತಕ್ಷಣದ ಗಮನವು ಪರಮಾಣು ಸಮಸ್ಯೆಯನ್ನು ವಿವರವಾಗಿ ಪರಿಹರಿಸುವ ಬದಲು ಸಂಘರ್ಷವನ್ನು ಕೊನೆಗೊಳಿಸುವುದಾಗಿದೆ ಎಂದು ಟೆಹ್ರಾನ್ ಸೂಚಿಸಿದೆ. ಇರಾನಿನ ವಿದೇಶಾಂಗ ಸಚಿವಾಲಯದ ವಕ್ತಾರ ಇಸ್ಮಾಯಿಲ್ ಬಘೈ ಸೋಮವಾರ ಹೇಳಿದರು: "ಈ ಹಂತದಲ್ಲಿ, ನಾವು ಪರಮಾಣು ಸಮಸ್ಯೆಗಳನ್ನು ಚರ್ಚಿಸುತ್ತಿಲ್ಲ." ಬದಲಾಗಿ, ದೋಹಾದಲ್ಲಿ ನಡೆಯುವ ಮಾತುಕತೆಗಳು ಪ್ರಸ್ತುತ ಒಪ್ಪಂದವನ್ನು ವಿಸ್ತರಿಸುವುದು, ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವುದು ಮತ್ತು ಈ ವರ್ಷದ ಆರಂಭದಲ್ಲಿ ಯುದ್ಧ ಭುಗಿಲೆದ್ದಾಗಿನಿಂದ ಪ್ರಾದೇಶಿಕ ಸಾಗಣೆಯನ್ನು ದುರ್ಬಲಗೊಳಿಸಿದ ಸಮುದ್ರ ನಿರ್ಬಂಧಗಳನ್ನು ಸಡಿಲಿಸುವ ಮೇಲೆ ಕೇಂದ್ರೀಕರಿಸುವ ನಿರೀಕ್ಷೆಯಿದೆ.

# ಅಧಿಕಾರಿಗಳಿಗೆ ಇಂಟರ್ನೆಟ್ ಪ್ರವೇಶ ಪುನಃಸ್ಥಾಪಿಸಲು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಆದೇಶ

**ಟೆಹ್ರಾನ್, ಮೇ 26:** ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರು ಇಂಟರ್ನೆಟ್ ಪ್ರವೇಶವನ್ನು ಪುನಃಸ್ಥಾಪಿಸಲು ಅಧಿಕಾರಿಗಳಿಗೆ ಆದೇಶಿಸಿದ್ದಾರೆ, ಇದು ಪ್ರಸ್ತುತ 88 ನೇ ದಿನಕ್ಕೆ ಪ್ರವೇಶಿಸಿರುವ ಸ್ಥಗಿತಗೊಳಿಸುವಿಕೆಯನ್ನು ಕೊನೆಗೊಳಿಸಿದೆ, ಇದು ಯಾವುದೇ ದೇಶವು ವಿಧಿಸಿರುವ ಅತ್ಯಂತ ದೀರ್ಘವಾದ ಇಂಟರ್ನೆಟ್ ಕಡಿತವಾಗಿದೆ. ಆದಾಗ್ಯೂ, ಆದೇಶವನ್ನು ಘೋಷಿಸಿದಾಗಲೂ, ಇರಾನ್ ಒಳಗೆ ಅನಿರ್ಬಂಧಿತ ಪ್ರವೇಶವು ನಿಜವಾಗಿಯೂ ಮರಳುತ್ತದೆಯೇ ಎಂದು ಇನ್ನೂ ಅನಿಶ್ಚಿತತೆ ಇತ್ತು, ಇದು ಸಾಮಾನ್ಯ ಇರಾನಿಯನ್ನರಿಗೆ ಮಾಹಿತಿಗೆ ಎಷ್ಟು ಪ್ರವೇಶವನ್ನು ನೀಡಬೇಕು ಎಂಬುದರ ಕುರಿತು ಇಸ್ಲಾಮಿಕ್ ಗಣರಾಜ್ಯದೊಳಗೆ ಆಳವಾದ ವಿಭಜನೆಗಳನ್ನು ಒತ್ತಿಹೇಳುತ್ತದೆ. ಇರಾನ್ನ ಇಂಟರ್ನೆಟ್ ವ್ಯವಸ್ಥೆಯು ಹೆಚ್ಚು ಕೇಂದ್ರೀಕೃತವಾಗಿದೆ ಮತ್ತು



2012 ರಲ್ಲಿ ಮಾಜಿ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ರಚಿಸಿದ ಸುಪ್ರೀಂ ಕೌನ್ಸಿಲ್ ಫಾರ್ ಸೈಬರ್‌ಸ್ಪೇಸ್‌ನಿಂದ ಮೇಲ್ವಿಚಾರಣೆ ಮಾಡಲ್ಪಟ್ಟ ಪ್ರಬಲ ರಾಜ್ಯ ಸಂಸ್ಥೆಗಳ ಜಟಿಲ ಮೂಲಕ ನಿಯಂತ್ರಿಸಲ್ಪಡುತ್ತದೆ.

ಇರಾನ್‌ನ ಭದ್ರತೆ ಮಂಡಳಿ, ಧಾರ್ಮಿಕ ಮತ್ತು ನ್ಯಾಯಾಂಗ ಸ್ಥಾಪನೆಯಾದ್ಯಂತದ ಹಿರಿಯ ವ್ಯಕ್ತಿಗಳನ್ನು ಒಳಗೊಂಡಿದೆ,

ಇದರಲ್ಲಿ ಗುಪ್ತಚರ ಸಚಿವರು, ಮುಖ್ಯ ನ್ಯಾಯಾಧೀಶರು ಮತ್ತು ಬಿಗಿಯಾದ ಆನ್‌ಲೈನ್ ನಿಯಂತ್ರಣಗಳಿಗಾಗಿ ದೀರ್ಘಕಾಲದಿಂದ ಒತ್ತಾಯಿಸುತ್ತಿರುವ ಧರ್ಮಗುರುಗಳು ಸೇರಿದ್ದಾರೆ. ವ್ಯವಸ್ಥೆಯೊಳಗಿನ ಕೆಲವು ಸಂಪ್ರದಾಯವಾದಿ ವ್ಯಕ್ತಿಗಳು ಇನ್ಸ್ಟಾಗ್ರಾಮ್‌ನಂತಹ ವೇದಿಕೆಗಳನ್ನು ಅಮೆರಿಕನ್ ಫೈಟರ್ ಜೆಟ್‌ಗಳಿಗೆ ಹೋಲಿಸಿದ್ದಾರೆ, ಅನಿಯಂತ್ರಿತ ಇಂಟರ್ನೆಟ್ ಪ್ರವೇಶವು ರಾಷ್ಟ್ರೀಯ ಭದ್ರತಾ ಬೆದರಿಕೆ ಮತ್ತು ಪಾಶ್ಚಿಮಾತ್ಯ ಪ್ರಭಾವದ ಸಾಧನವಾಗಿದೆ ಎಂದು ವಾದಿಸಿದ್ದಾರೆ.

ಆ ಬಿಕ್ಕಟ್ಟನ್ನು ತಪ್ಪಿಸಲು, ಇರಾನ್ನ ಮಧ್ಯಮ ಸುಧಾರಣಾವಾದಿ ಅಧ್ಯಕ್ಷರು ಈ ತಿಂಗಳು ಸಮಾನಾಂತರ ಕಾರ್ಯಪಡೆಯನ್ನು ರಚಿಸಿದರು, ಆದರೆ ಸರ್ವೋಚ್ಚ ನಾಯಕನ ಮಂಡಳಿಯನ್ನು ತಳ್ಳಿಹಾಕಲು ಪ್ರಯತ್ನಿಸಿದ ಆರೋಪಗಳನ್ನು ಎದುರಿಸಬೇಕಾಯಿತು.

ಇಂಟರ್ನೆಟ್ ಪ್ರವೇಶವನ್ನು ಪುನಃಸ್ಥಾಪಿಸಲು ಅವರ ಆದೇಶದ ಸುದ್ದಿ ಸೋಮವಾರ ರಾತ್ರಿ ಹೊರಬಂದಾಗಲೂ, ನಿರ್ದೇಶನವನ್ನು ಸಂಪೂರ್ಣವಾಗಿ ಜಾರಿಗೊಳಿಸಲಾಗುತ್ತದೆಯೇ ಮತ್ತು ಆಚರಣೆಯಲ್ಲಿ ಅದರ ಅರ್ಥವೇನು ಎಂಬುದು ಇನ್ನೂ ಸ್ಪಷ್ಟವಾಗಿಲ್ಲ.

# ದೆಹಲಿ ಪೊಲೀಸರಿಗೆ ಎಸಿ ಹೆಲ್ಮೆಟ್, ಕೈ ಫ್ಯಾನ್

**ನವದೆಹಲಿ, ಮೇ 26:** ರಾಷ್ಟ್ರ ರಾಜಧಾನಿ ದೆಹಲಿಯನ್ನು ವಿಪರೀತ ಬಿಸಿಲು ಮತ್ತು ತಾಪಮಾನ ಹೆಚ್ಚಳವು ಕಾಡುತ್ತಿದೆ. ಜನರು ಬಳಲುವಂತೆ ಮಾಡಿದೆ. ಉಷ್ಣೋಗ್ರತೆಯ ನಡುವೆಯೂ ರಸ್ತೆಗಿಳಿದು ಕರ್ತವ್ಯ ನಿರ್ವಹಿಸುವ ದೆಹಲಿ ಸಂಚಾರ ಪೊಲೀಸರ ಹಿತರಕ್ಷಣೆಗೆ ಪೊಲೀಸ್ ಇಲಾಖೆ ಮುಂದಾಗಿದ್ದು, ವಿಶೇಷ ಯೋಜನೆ ಆರಂಭಿಸಿದೆ.



ತೀವ್ರ ತಾಪಮಾನದಿಂದ ಕಾಪಾಡಲು ಸಂಚಾರ ಪೊಲೀಸರಿಗೆ ಅತ್ಯಾಧುನಿಕ ಹವಾನಿಯಂತ್ರಿತ ಹೆಲ್ಮೆಟ್ ಮತ್ತು ಕೈಯಲ್ಲಿ ಹಿಡಿಯಬಹುದಾದ ಸಣ್ಣ ಪಂಖಗಳನ್ನು ಪ್ರಾಯೋಗಿಕವಾಗಿ ವಿತರಣೆ ಮಾಡಿದೆ. ದೆಹಲಿಯಲ್ಲಿ ತಾಪಮಾನವು 40ಲಿಅ ನಿಂದ 45ಲಿಅ ಗರಿಷ್ಠ ಮಟ್ಟದಲ್ಲಿದೆ. ಈ ಪರಿಸ್ಥಿತಿಯಲ್ಲಿಯೂ ಕೆಲಸ ಮಾಡುತ್ತಿರುವ ಪೊಲೀಸರನ್ನು ಬಿಸಿಲಿನ ಬೇಗೆಯಿಂದ ರಕ್ಷಿಸುವುದು ತಮ್ಮ ಆದ್ಯತೆಯೆಂದು ದೆಹಲಿ ಪೊಲೀಸ್ ಇಲಾಖೆ ಹೇಳಿಕೊಂಡಿದೆ.

ಬಿಸಿಲಿನ ಬೇಗೆಯಿಂದ ಪೊಲೀಸರನ್ನು ತಂಪಾಗಿಡಲು ವಿನ್ಯಾಸಗೊಳಿಸಲಾದ ಈ ಹೆಲ್ಮೆಟ್‌ಗಳು ಸಾಮಾನ್ಯ ಹೆಲ್ಮೆಟ್‌ಗಳಿಗಿಂತ ಭಿನ್ನವಾಗಿವೆ. ಇವು ಬ್ಯಾಟರಿ ಚಾಲಿತವಾಗಿದ್ದು, ಇವುಗಳ ಒಳಭಾಗದಲ್ಲಿ ವಿಶೇಷವಾದ ಕೂಲಿಂಗ್ ಪ್ಯಾಡ್‌ಗಳು ಮತ್ತು ಸಣ್ಣ ಗಾಳಿದ್ವಾರಗಳಿವೆ. ಇದು ತಲೆಯ ಭಾಗಕ್ಕೆ ನಿರಂತರವಾಗಿ ತಂಪಾದ ಗಾಳಿಯನ್ನು ಪೂರೈಸುತ್ತದೆ ಎಂದು ಇಲಾಖೆ ತಿಳಿಸಿದೆ.

ತಾಪಮಾನವು 45°C ದಾಟಿದಾಗಲೂ, ಈ ಹೆಲ್ಮೆಟ್‌ಗಳು ತಲೆಯ ಮೂಲಕ ಇಡೀ ದೇಹದ ತಾಪಮಾನವನ್ನು ಗಣನೀಯವಾಗಿ ಸುಮಾರು 10–15°Cನಷ್ಟು ಕಡಿಮೆ ಕಾಯ್ದುಕೊಳ್ಳಲು ಸಹಾಯ ಮಾಡುತ್ತದೆ. ಇವಕ್ಕೆ ಸೊಂಟಕ್ಕೆ ಕಟ್ಟಿಕೊಳ್ಳಬಹುದಾದ ಲಘು ತೂಕದ ಬ್ಯಾಟರಿ ಪ್ಯಾಕ್ ಅನ್ನು ಸಂಪರ್ಕಿಸಲಾಗಿರುತ್ತದೆ. ಇದು ಒಮ್ಮೆ ಚಾರ್ಜ್ ಮಾಡಿದರೆ, 5ರಿಂದ 8 ಗಂಟೆಗಳ ಕಾಲ ನಿರಂತರವಾಗಿ ಕೆಲಸ ಮಾಡುತ್ತದೆ ಎಂದು ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಹೆಲ್ಮೆಟ್ ಜೊತೆಗೆ, ಸಿಗ್ನಲ್‌ಗಳಲ್ಲಿ ನಿಂತು ವಾಹನಗಳನ್ನು ನಿಯಂತ್ರಿಸುವಾಗ ಬಿಸಿ ಗಾಳಿಯಿಂದ ತಪ್ಪಿಸಲು, ಪೊಲೀಸರಿಗೆ ಸಣ್ಣ ರಿಚಾರ್ಜಬಲ್ ಫ್ಯಾನ್‌ಗಳನ್ನು ನೀಡಲಾಗಿದೆ.

ಇವುಗಳನ್ನು ಸುಲಭವಾಗಿ ಕೈಯಲ್ಲಿ ಹಿಡಿಯಬಹುದು ಅಥವಾ ಇಲಾಖೆಯು ನೀಡುವ ಬೆಲ್ಟ್‌ಗಳಿಗೆ ಸಿಕ್ಕಿಸಿಕೊಳ್ಳಬಹುದು. ಮುಖ ಮತ್ತು ಕುತ್ತಿಗೆಯ ಭಾಗಕ್ಕೆ ತಂಗಾಳಿ ಬೀಸುವಂತೆ ಮಾಡಲು ಮತ್ತು ವಿಪರೀತ ಬೆವರುವಿಕೆಯಿಂದ ಉಂಟಾಗುವ ನಿರ್ಜಲೀಕರಣವನ್ನು ತಡೆಯಲು ಇದು ಸಹಕಾರಿಯಾಗಿದೆ ಎಂದು ಇಲಾಖೆ ತಿಳಿಸಿದೆ.

ಸದ್ಯಕ್ಕೆ ಈ ಉಪಕರಣಗಳನ್ನು ದೆಹಲಿಯ ಅತ್ಯಂತ ದಟ್ಟಣೆ ಇರುವ ಮತ್ತು ನೆರಳಿನ ಸೌಲಭ್ಯವಿಲ್ಲದ ಪ್ರಮುಖ ಜಂಕ್ಷನ್ಗಳಲ್ಲಿ ಕರ್ತವ್ಯ ನಿರ್ವಹಿಸುವ ಆಯ್ದ ಸಂಚಾರ ಪೊಲೀಸರಿಗೆ ಮಾತ್ರ ನೀಡಲಾಗಿದೆ. ಪ್ರಯೋಗವು ಯಶಸ್ವಿಯಾದರೆ, ಹೆಲ್ಮೆಟ್ಗಳ ತೂಕ, ಕಾರ್ಯಕ್ಷಮತೆ ಹಾಗೂ ಬ್ಯಾಟರಿ ಬಾಳಿಕೆಯ ಬಗ್ಗೆ ಪೊಲೀಸರಿಂದ ಸಕಾರಾತ್ಮಕ ಅಭಿಪ್ರಾಯಗಳು ಬಂದರೆ, ಮುಂಬರುವ ದಿನಗಳಲ್ಲಿ ಇಲಾಖೆಯ ಎಲ್ಲ ಸಂಚಾರ ಪೊಲೀಸರಿಗೂ ಇದನ್ನು ವಿಸ್ತರಿಸಲಾಗುತ್ತದೆ ಎಂದು ಇಲಾಖೆ ತಿಳಿಸಿದೆ.

ಇವುಗಳ ಜೊತೆಗೆ, ಈಗಾಗಲೇ ದೆಹಲಿ ಪೊಲೀಸರಿಗೆ, ಓಆರ್‌ಎಸ್, ಗ್ಲುಕೋಸ್, ನಿಂಬೆ ಹಣ್ಣಿನ ರಸ ಹಾಗೂ ತಂಪಾದ ಕುಡಿಯುವ ನೀರು ವಿತರಿಸಲಾಗುತ್ತಿದೆ. ನಿರಂತರವಾಗಿ ಬಿಸಿಲಿನಲ್ಲಿ ನಿಲ್ಲದಂತೆ ತಡೆಯಲು ಪೊಲೀಸರ ಶಿಫ್ಟ್ ಅವಧಿಗಳನ್ನು ಮರುಹೊಂದಿಸಲಾಗಿದೆ. ನೆರಳಿನ ಆಸರೆಗಾಗಿ ಸಣ್ಣ ಬೂತ್‌ಗಳನ್ನು ನಿರ್ಮಿಸಲಾಗಿದೆ ಎಂದು ಇಲಾಖೆ ತಿಳಿಸಿದೆ.



ದೆಹಲಿ ಸಚಿವ ಪರ್ವೇಶ್ ಸಾಹಿಬ್ ಸಿಂಗ್ ಬಾರಾಪುಲ್ಲಾ ಹಂತ–3 ಸ್ಥಳಕ್ಕೆ ಭೇಟಿ ನೀಡಿ ಮಂಗಳವಾರ ಅಂತಿಮ ಹಂತದ ಕಾಮಗಾರಿಯನ್ನು ಪರಿಶೀಲಿಸಿದರು

# ಮಲದ ಗುಂಡಿಗೆ ಇಳಿದ 6 ಮಂದಿ ಸಾವು

**ಭುವನೇಶ್ವರ, ಮೇ 26:** ಒಡಿಶಾದ ಕಳಹಂಡಿ ಜಿಲ್ಲೆಯಲ್ಲಿ ಮಂಗಳವಾರ ಎದೆಯೊಡೆಯುವಂತಹ ಭೀಕರ ದುರಂತವೊಂದು ಸಂಭವಿಸಿದೆ. ನಿರ್ಮಾಣ ಹಂತದಲ್ಲಿದ್ದ ಸೆಪ್ಟಿಕ್ ಟ್ಯಾಂಕ್ (ಮಲದ ಗುಂಡಿ) ಒಳಗಿನ ಸೆಂಟ್ರಿಂಗ್ (ಮರದ ಹಲಗೆ) ತೆಗೆಯಲು ಒಳಕ್ಕೆ ಇಳಿದಿದ್ದ ಆರು ಮಂದಿ ವಿಷಾನಿಲ ಸೇವಿಸಿ ಉಸಿರುಗಟ್ಟಿ ದಾರುಣವಾಗಿ ಸಾವನ್ನಪ್ಪಿದ್ದಾರೆ. ಕಣ್ಣೆದುರೇ ಒಬ್ಬರ ಹಿಂದೊಬ್ಬರಂತೆ ಆರು ಜೀವಗಳು ಬಲಿಯಾಗಿದ್ದು, ಇಡೀ ಗ್ರಾಮವೇ ಶೋಕಸಾಗರದಲ್ಲಿ ಮುಳುಗಿದೆ. ಮತ್ತೊಬ್ಬ ವ್ಯಕ್ತಿ ತೀವ್ರ ಅಸ್ವಸ್ಥಗೊಂಡಿದ್ದು, ಆಸ್ಪತ್ರೆಯಲ್ಲಿ ಸಾವು–ಬದುಕಿನ ನಡುವೆ ಹೋರಾಡುತ್ತಿದ್ದಾನೆ.

ಮದನ್‌ಪುರ್–ರಾಂಪುರ್ ಪೊಲೀಸ್ ಠಾಣಾ ವ್ಯಾಪ್ತಿಯ ಗೌಡ ಕರ್ಲಾಕುಂಟ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಮನೆ ಮಾಲೀಕ ನಿಮ್ಮೆ ಪಾಲ್ ಎಂಬುವವರ ಮನೆಯಲ್ಲಿ ಹೊಸದಾಗಿ ಸೆಪ್ಟಿಕ್ ಟ್ಯಾಂಕ್ ನಿರ್ಮಿಸಲಾಗುತ್ತಿತ್ತು. ಮಂಗಳವಾರ ಮಧ್ಯಾಹ್ನ ಟ್ಯಾಂಕ್ ಒಳಗಿನ ಸೆಂಟ್ರಿಂಗ್ ವಸ್ತುಗಳನ್ನು ಹೊರತೆಗೆಯಲು ಕಾರ್ಮಿಕನೊಬ್ಬ ಮೊದಲು ಟ್ಯಾಂಕ್ ಒಳಕ್ಕೆ ಇಳಿದಿದ್ದಾನೆ. ಆದರೆ, ಕಿರಿದಾದ ಗುಂಡಿಯೊಳಗೆ ಆಮ್ಲಜನಕದ ಕೊರತೆ ಹಾಗೂ ಕಾರ್ಬನ್ ಡೈಆಕ್ಸೈಡ್‌ನಂತಹ ವಿಷಾನಿಲಗಳು ತುಂಬಿದ್ದ ಕಾರಣ ಆತ ಉಸಿರುಗಟ್ಟಿ ಪ್ರಜ್ಞೆ ತಪ್ಪಿದ್ದಾನೆ. ಆತನನ್ನು ರಕ್ಷಿಸಲು ಉಳಿದವರು ಒಬ್ಬರ ಹಿಂದೆ ಮತ್ತೊಬ್ಬರಂತೆ ಟ್ಯಾಂಕ್‌ಗೆ ಇಳಿದು ತಮ್ಮ ಪ್ರಾಣವನ್ನೇ ಕಳೆದುಕೊಂಡಿದ್ದಾರೆ.

ಮೃತರನ್ನು ಮನೆ ಮಾಲೀಕ ನಿಮ್ಮೆ ಪಾಲ್ (48), ಆತನ ಪುತ್ರ ಆಕಾಶ್ ಪಾಲ್ (28), ಹಾಗೂ ಕಾರ್ಮಿಕರಾದ ಅಡಲ್ ಮಾಝಿ (55), ಮನೋರಂಜನ್ ಹಾತಿ (27), ಛಂದ ಜಲ್ (32) ಮತ್ತು ವಿಪುಲ್ ಜಲ್ (30) ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ಪಂಕಜ್ ಭೋಯಿ (32) ಎಂಬುವವರು ತೀವ್ರವಾಗಿ ಅಸ್ವಸ್ಥರಾಗಿದ್ದು, ಅವರನ್ನು ಆರಂಭದಲ್ಲಿ ಮದನ್‌ಪುರ್–ರಾಂಪುರ್ ಆಸ್ಪತ್ರೆಗೆ ದಾಖಲಿಸಿ, ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಕೇಂದ್ರ ಆಸ್ಪತ್ರೆಗೆ ರವಾನಿಸಲಾಗಿದೆ. ಆಸ್ಪತ್ರೆಗೆ ತರುವ ಮುನ್ನವೇ ಆರು ಮಂದಿ ಮೃತಪಟ್ಟಿದ್ದರು ಎಂದು ವೈದ್ಯರು ದೃಢಪಡಿಸಿದ್ದಾರೆ.

ವಿಷಯ ತಿಳಿದ ತಕ್ಷಣ ಸ್ಥಳೀಯರು ಹಾಗೂ ಪೊಲೀಸರು ಕಾರ್ಯಾಚರಣೆ ನಡೆಸಿ ಮೃತದೇಹಗಳನ್ನು ಹೊರತೆಗೆದಿದ್ದಾರೆ. ಈ ಘಟನೆ ಕುರಿತು ತೀವ್ರ ದಿಗ್ಭ್ರಮೆ ಹಾಗೂ ಶೋಕ ವ್ಯಕ್ತಪಡಿಸಿರುವ ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ, ಮೃತರ ಕುಟುಂಬಗಳಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ತಲಾ 4 ಲಕ್ಷ ರೂ. ಗಳ ಪರಿಹಾರವನ್ನು ಘೋಷಿಸಿದ್ದಾರೆ. ಇದರ ಜೊತೆಗೆ, ಮೃತರ ಅಂತ್ಯಕ್ರಿಯೆಗಾಗಿ ಕಳಹಂಡಿ ಜಿಲ್ಲಾಡಳಿತವು ತಲಾ 30,000 ರೂ. ಗಳ ತುರ್ತು ಆರ್ಥಿಕ ನೆರವು ಬಿಡುಗಡೆ ಮಾಡಿದೆ.

ಘಟನಾ ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಸಹಜ ಸಾವು ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಟ್ಯಾಂಕ್ ಒಳಗೆ ಯಾವ ರೀತಿಯ ವಿಷಾನಿಲ ಶೇಖರಣೆಯಾಗಿತ್ತು ಹಾಗೂ ಘಟನೆಗೆ ನಿಖರ ಕಾರಣವೇನು ಎಂಬ ಬಗ್ಗೆ ತನಿಖೆ ಚುರುಕುಗೊಳಿಸಿದ್ದಾರೆ. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಒಡಿಶಾ ಲೋಕೋಪಯೋಗಿ ಸಚಿವ ಪೃಥ್ವಿರಾಜ್ ಹರಿಚಂದನ್ ತಿಳಿಸಿದ್ದಾರೆ.

?ಮೃತರ ಕುಟುಂಬಗಳಿಗೆ ಕೇವಲ ಪರಿಹಾರದ ಹಣ ನೀಡುವುದರಿಂದ ಕಳೆದುಕೊಂಡ ಜೀವಗಳನ್ನು ಮರಳಿ ತರಲು ಸಾಧ್ಯವಿಲ್ಲ; ಎಷ್ಟೇ ಆರ್ಥಿಕ ನೆರವು ನೀಡಿದರೂ ಅದು ಅಮೂಲ್ಯವಾದ ಮನುಷ್ಯನ ಜೀವಕ್ಕೆ ಎಂದಿಗೂ ಸಾಟಿಯಾಗುವುದಿಲ್ಲ,? ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಸಾಮಾಜಿಕ ಹೋರಾಟಗಾರರು ವ್ಯವಸ್ಥೆಯ ನಿರ್ಲಕ್ಷ್ಯವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಶೌಚಗುಂಡಿ ಹಾಗೂ ಮ್ಯಾನ್‌ಹೋಲ್‌ಗಳಿಗೆ ಇಳಿಯುವಾಗ ಪಾಲಿಸಬೇಕಾದ ಕನಿಷ್ಠ ಸುರಕ್ಷತಾ ನಿಯಮಗಳ ಬಗ್ಗೆ ಜನಸಾಮಾನ್ಯರು ಮತ್ತು ಕಾರ್ಮಿಕರಲ್ಲಿರುವ ತೀವ್ರ ಅರಿವಿನ ಕೊರತೆಯೇ ಈ ದುರಂತಕ್ಕೆ ಪ್ರಮುಖ ಕಾರಣವಾಗಿದೆ. ಇಂತಹ ಹೃದಯವಿದ್ರಾವಕ ಘಟನೆಗಳು ಪದೇಪದೇ ಮರುಕಳಿಸುತ್ತಿದ್ದರೂ ಆಡಳಿತ ವ್ಯವಸ್ಥೆ ಕೇವಲ ಪರಿಹಾರ ಘೋಷಣೆಗಷ್ಟೇ ಸೀಮಿತವಾಗುತ್ತಿರುವುದು ವಿಪರ್ಯಾಸ. ಭವಿಷ್ಯದಲ್ಲಿ ಇಂತಹ ದಾರುಣ ಸಾವುಗಳನ್ನು ಸಂಪೂರ್ಣವಾಗಿ ತಡೆಯಲು, ಕೇವಲ ಹಣಕಾಸಿನ ನೆರವಿಗೆ ಸೀಮಿತವಾಗದೆ ಕಾರ್ಮಿಕರ ಸುರಕ್ಷತೆಗಾಗಿ ಕಟ್ಟುನಿಟ್ಟಿನ ಮುಂಜಾಗ್ರತಾ ಕ್ರಮಗಳನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕು. ತಾಂತ್ರಿಕ ಸಲಕರಣೆಗಳನ್ನು ಅಳವಡಿಸಬೇಕು ಹಾಗೂ ಈ ಬಗ್ಗೆ ವ್ಯಾಪಕ ಜನಜಾಗೃತಿ ಮೂಡಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

# ಡೇರಾ ಮುಖ್ಯಸ್ಥನಿಗೆ 16ನೇ ಬಾರಿ ಪೆರೋಲ್: 30 ದಿನ ರಜೆ

**ನವದೆಹಲಿ, ಮೇ 26:** ಅತ್ಯಾಚಾರ ಪ್ರಕರಣದಲ್ಲಿ 20 ವರ್ಷಗಳ ಜೈಲು ಶಿಕ್ಷೆ ಅನುಭವಿಸುತ್ತಿರುವ ಡೇರಾ ಸಚ್ಚಾ ಸೌದಾ ಮುಖ್ಯಸ್ಥ ಗುರ್ಮೀತ್ ರಾಮ್ ರಹೀಮ್ ಸಿಂಗ್‌ಗೆ ಹರಿಯಾಣ ಸರ್ಕಾರ ಮತ್ತೊಮ್ಮೆ 30 ದಿನಗಳ ಪೆರೋಲ್ ಮಂಜೂರು ಮಾಡಿದೆ. ಮಂಗಳವಾರ ಬೆಳಗ್ಗೆ ಹರಿಯಾಣದ ರೋಹ್ಟಕ್‌ನಲ್ಲಿರುವ ಸುನಾರಿಯಾ ಜೈಲಿನಿಂದ ಆತ ಬಿಡುಗಡೆಯಾಗಿದ್ದು, 2020ರ ನಂತರ ಆತನಿಗೆ ದೊರೆಯುತ್ತಿರುವ 16ನೇ ತಾತ್ಕಾಲಿಕ ಬಿಡುಗಡೆ ಇದಾಗಿದೆ. ಆಶ್ರಮದ ಇಬ್ಬರು ಮಹಿಳಾ ಅನುಯಾಯಿಗಳ ಮೇಲೆ ಅತ್ಯಾಚಾರವೆಸಗಿದ ಪ್ರಕರಣದಲ್ಲಿ 2017ರ ಆಗಸ್ಟ್‌ನಿಂದ ಆತ ಜೈಲುಶಿಕ್ಷೆ ಅನುಭವಿಸುತ್ತಿದ್ದಾನೆ. ಮಂಗಳವಾರ ಮುಂಜಾನೆ 6:34ರ ಸುಮಾರಿಗೆ ಬಿಗಿ ಭದ್ರತೆಯೊಂದಿಗೆ ಆತ ಸುನಾರಿಯಾ ಜೈಲಿನಿಂದ ಹೊರಬಂದಿದ್ದಾನೆ. ಈ ತಾತ್ಕಾಲಿಕ ಬಿಡುಗಡೆಯ ಅವಧಿಯಲ್ಲಿ ಆತ ಸಿರ್ಸಾದಲ್ಲಿರುವ ಡೇರಾ ಸಚ್ಚಾಸೌಧ ಆಶ್ರಮದಲ್ಲಿಯೇ ವಾಸ್ತವ್ಯ ಹೂಡಲಿದ್ದಾನೆ ಎಂದು ಆತನ ವಕೀಲರಾದ ಜಿತೇಂದ್ರ ಖುರಾನಾ ಸ್ಪಷ್ಟಪಡಿಸಿದ್ದಾರೆ. ಬಿಡುಗಡೆಯ ಷರತ್ತುಗಳ ಪ್ರಕಾರ, ಆಶ್ರಮದಲ್ಲಿ ಬೆಂಬಲಿಗರನ್ನು ಭೌತಿಕವಾಗಿ ಒಗ್ಗೂಡಿಸಲು ಅಥವಾ ಬೃಹತ್ ಸಭೆಗಳನ್ನು ನಡೆಸಲು ಆತನಿಗೆ ಅವಕಾಶವಿಲ್ಲ. ಆದರೆ, ಆಶ್ರಮದ ಒಳಗಿದ್ದುಕೊಂಡೇ ಆನ್ಲೈನ್ ಮುಖಾಂತರ ತನ್ನ ಅನುಯಾಯಿಗಳನ್ನು ಉದ್ದೇಶಿಸಿ ಮಾತನಾಡಲು ಆತನಿಗೆ ಅವಕಾಶ ಕಲ್ಪಿಸಲಾಗಿದೆ. ಜೈಲು ಸೇರಿರುವ 2017ರಿಂದ ಈವರೆಗೆ ಆತ ಫರ್ಲೋ ಮತ್ತು ಪೆರೋಲ್ ಸೌಲಭ್ಯಗಳನ್ನು ಬಳಸಿಕೊಂಡು ಒಟ್ಟು 406 ದಿನಗಳನ್ನು ಜೈಲಿನಿಂದ ಹೊರಗೆ ಕಳೆದಿದ್ದಾನೆ. ?ಹರಿಯಾಣ ಉತ್ತಮ ನಡತೆ ಕೈದಿಗಳ (ತಾತ್ಕಾಲಿಕ ಬಿಡುಗಡೆ) ಕಾಯ್ದೆ–2022?ರ ಅಡಿಯಲ್ಲಿ ಯಾವುದೇ ಕೈದಿಗೆ ಒಂದು ಕ್ಯಾಲೆಂಡರ್ ವರ್ಷದಲ್ಲಿ ಗರಿಷ್ಠ 10 ವಾರಗಳ ಪೆರೋಲ್ ಪಡೆಯಲು ಕಾನೂನಿನಲ್ಲಿ ಅವಕಾಶವಿದೆ. ಈ ವರ್ಷದ ಜನವರಿ ತಿಂಗಳಿನಲ್ಲಿ ಆತ ಈಗಾಗಲೇ 40 ದಿನಗಳ ಪೆರೋಲ್ ಪಡೆದುಕೊಂಡಿದ್ದನು. ಇದೀಗ ಸಿಕ್ಕಿರುವ 30 ದಿನಗಳ ಬಿಡುಗಡೆಯನ್ನು ಸೇರಿಸಿದರೆ, 2026ನೇ ವರ್ಷಕ್ಕೆ ಆತನಿಗೆ ಲಭ್ಯವಿದ್ದ ಒಟ್ಟು 70 ದಿನಗಳ (10 ವಾರ) ಪೆರೋಲ್ ಮಿತಿಯು ಸಂಪೂರ್ಣವಾಗಿ ಮುಕ್ತಾಯವಾದಂತಾಗಿದೆ.

# 50 ಸಾವಿರ ರೂ.ವರೆಗಿನ ಬೆಳೆ ಸಾಲಮನ್ನಾ: ತ.ನಾಡು ಸರ್ಕಾರ ಆದೇಶ

**ಚೆನ್ನೈ, ಮೇ 26:** ಸಹಕಾರ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಪಡೆದಿದ್ದ ತಮಿಳುನಾಡಿನ ಅತಿಸಣ್ಣ ರೈತರ 50,000 ರೂಪಾಯಿವರೆಗಿನ ಸಾಲವನ್ನು ಸಂಪೂರ್ಣ ಮನ್ನಾ ಮಾಡಿ ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಆದೇಶ ಹೊರಡಿಸಿದ್ದಾರೆ. ಈ ನಿರ್ಧಾರದಿಂದ ರಾಜ್ಯದ ಬೊಕ್ಕಸಕ್ಕೆ ಒಟ್ಟು 2,044.46 ಕೋಟಿ ರೂಪಾಯಿ ಹೊರೆಯಾಗಲಿದ್ದು, ಒಟ್ಟು 14,22,555 ರೈತರಿಗೆ ಅನುಕೂಲವಾಗಲಿದೆ.

ಮೇ 1, 2025 ರಿಂದ ಫೆಬ್ರವರಿ 28, 2026ರ ನಡುವೆ ಸಹಕಾರ ಬ್ಯಾಂಕ್‌ಗಳ ಮೂಲಕ ಸಾಲ ಪಡೆದ ರೈತರು ಈ ಯೋಜನೆಗೆ ಒಳಪಡಲಿದ್ದಾರೆ. ಈ ಯೋಜನೆಯಡಿ ಅತಿಸಣ್ಣ ರೈತರ 50,000 ರೂಪಾಯಿವರೆಗಿನ ಬೆಳೆಸಾಲ ಸಂಪೂರ್ಣ ಮನ್ನಾ ಆಗಲಿದೆ. ಹಾಗೆಯೇ, ಸಣ್ಣ ರೈತರಿಗೆ ಇದೇ ಮೊತ್ತದ ಅಂದರೆ 50,000 ರೂಪಾಯಿವರೆಗಿನ ಸಾಲದ ಮೇಲೆ ಶೇಕಡಾ 50 ರಷ್ಟು ರಿಯಾಯಿತಿ ಸಿಗಲಿದೆ. ಮುಂದಿನ ಕೃಷಿ ಹಂಗಾಮಿಗೆ ಮುನ್ನ ರೈತರ ಮೇಲಿನ ಆರ್ಥಿಕ ಹೊರೆಯನ್ನು ತಗ್ಗಿಸುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ. ಸಚಿವಾಲಯದಲ್ಲಿ ಕೃಷಿ ಸಚಿವ ಎಂ. ವಿನೋದ್, ಸಹಕಾರ ಸಚಿವ ವಿ. ಗಾಂಧಿರಾಜ್, ಹಣಕಾಸು ಸಚಿವ ಎನ್. ಮೇರಿ ವಿಲ್ಸನ್ ಹಾಗೂ ಉನ್ನತ ಅಧಿಕಾರಿಗಳೊಂದಿಗೆ ನಡೆಸಿದ ಉನ್ನತ ಮಟ್ಟದ ಪರಿಶೀಲನಾ ಸಭೆಯ ಬಳಿಕ ಸಿಎಂ ವಿಜಯ್ ಈ ಮಹತ್ವದ ಪ್ರಕಟಣೆ ಹೊರಡಿಸಿದ್ದಾರೆ. 50,000 ರೂ.ಗಳಿಗಿಂತ ಹೆಚ್ಚಿನ ಸಾಲ ಪಡೆದ ರೈತರಿಗೂ ಅನುಕೂಲವಾಗುವಂತೆ ಹಂತಹಂತವಾಗಿ ರಿಯಾಯಿತಿ ನೀಡುವ ವ್ಯವಸ್ಥೆಯನ್ನು ಸರ್ಕಾರ ಜಾರಿಗೆ ತಂದಿದೆ. ಇದರ ಅನ್ವಯ 50,001 ರಿಂದ 60,000 ರೂ.ವರೆಗಿನ ಸಾಲಕ್ಕೆ 40,000 ರೂ, 60,001 ರಿಂದ 70,000 ರೂ.ವರೆಗಿನ ಸಾಲಕ್ಕೆ



30,000 ರೂ. ಹಾಗೂ 70,001 ರಿಂದ 80,000 ರೂ.ವರೆಗಿನ ಸಾಲಕ್ಕೆ 20,000 ರೂ. ಮನ್ನಾ ಆಗಲಿದೆ. ಅದೇ ರೀತಿ 80,001 ರಿಂದ 1 ಲಕ್ಷ ರೂ.ವರೆಗಿನ ಸಾಲಕ್ಕೆ 10,000 ರೂ. ಹಾಗೂ 1 ಲಕ್ಷಕ್ಕೂ ಮೇಲ್ಪಟ್ಟು ಸಾಲ ಪಡೆದ ದೊಡ್ಡ ರೈತರಿಗೂ 5,000 ರೂಪಾಯಿ ಮನ್ನಾ ಸೌಲಭ್ಯ ದೊರೆಯಲಿದೆ. ಇತ್ತೀಚೆಗಷ್ಟೇ ನಡೆದ ವಿಧಾನಸಭಾ ಚುನಾವಣೆಯಲ್ಲಿ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಪಕ್ಷವು ರೈತರಿಗೆ ನೀಡಿದ್ದ ಪ್ರಮುಖ ಭರವಸೆಗಳಲ್ಲಿ ಬೆಳೆಸಾಲ ಮನ್ನಾ ಕೂಡ ಒಂದಾಗಿತ್ತು. ಈ ಯೋಜನೆಯ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿರುವ ಟಿವಿಕೆ ನಾಯಕ ಹಾಗೂ ಸಚಿವ ಸಿ.ಟಿ.ಆರ್. ನಿರ್ಮಲ್ ಕುಮಾರ್, ರಾಜ್ಯದಲ್ಲಿ ಒಟ್ಟು 16.92 ಲಕ್ಷ ರೈತರು ಕೃಷಿಸಾಲ ಪಡೆದಿದ್ದು, ಆ ಪೈಕಿ 14.22 ಲಕ್ಷ ರೈತರ ಸಾಲವನ್ನು ಇಂದು ಮನ್ನಾ ಮಾಡುವ ಮೂಲಕ ನಮ್ಮ ಚುನಾವಣಾ ಪ್ರಣಾಳಿಕೆಯ ಭರವಸೆಯನ್ನು ಸರ್ಕಾರ ಈಡೇರಿಸಿದೆ ಎಂದು ತಿಳಿಸಿದ್ದಾರೆ.

ಆರ್‌ಬಿಐ ನವೆಂಬರ್ 2025ರ ಮಾರ್ಗಸೂಚಿಗಳ ಅನ್ವಯ, 45 ರಿಂದ 60 ದಿನಗಳ ಒಳಗೆ ಸರ್ಕಾರವು ಮನ್ನಾ ಮಾಡಿದ ಸಂಪೂರ್ಣ ಮೊತ್ತವನ್ನು ಬ್ಯಾಂಕ್ಗಳಿಗೆ ಪಾವತಿಸಲಿದೆ ಎಂದು ಸರ್ಕಾರದ ಅಧಿಕೃತ ಪ್ರಕಟಣೆ ಸ್ಪಷ್ಟಪಡಿಸಿದೆ.



ಪತ್ತನಾಜೆ ಉತ್ಸವ ಸಮಾಪ್ತಿ: ಧರ್ಮಸ್ಥಳದಲ್ಲಿ ಪೂಜೆ, ಯಕ್ಷಗಾನ ಮೇಳದ ವಾರ್ಷಿಕ ತಿರುಗಾಟಕ್ಕೆ ಮಂಗಳ

# ರೋಹನ್ ಕಾರ್ಪೊರೇಷನ್ ಸಿಎಸ್‌ಆರ್ ನಿಧಿಯಿಂದ ವೆನ್ಲಾಕ್ ಆಸ್ಪತ್ರೆಗೆ ಹತ್ತು ಲಕ್ಷ ಮೌಲ್ಯದ ಮಲ್ಟಿಪ್ಯಾರ ಮಾನಿಟರ್ ಕೊಡುಗೆ

**ಮುಂಬಯಿ, ಮೇ.24:** ರೋಹನ್ ಕಾರ್ಪೋರೇಶನ್ ಸಿಎಸ್ ಆರ್ ನಿಧಿಯಿಂದ ವತಿಯಿಂದ ವೆನ್ಲಾಕ್ ಆಸ್ಪತ್ರೆಗೆ 10ಲಕ್ಷ ಮೌಲ್ಯದ ಮಲ್ಟಿಪ್ಯಾರ ಮಾನಿಟರ್ ಕೊಡುಗೆಯನ್ನು ರೋಹನ್ ಕಾರ್ಪೊರೇಷನ್ ನ ಅಧ್ಯಕ್ಷ ಡಾ.ರೋಹನ್ ಮೊಂತೆರೊ ಅವರು ವೆನ್ಲಾಕ್ ವೈದ್ಯಕೀಯ ಅಧೀಕ್ಷಕ ಡಾ.ಶಿವಪ್ರಕಾಶ್ ಅವರಿಗೆ ಹಸ್ತಾಂತರಿಸಿದರು.

ನಗರದ ಓಶಿಯನ್ ಪರ್ಲ್ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಂಗಳೂರು ವಿಧಾನ ಪರಿಷತ್ ಸದಸ್ಯ ಐವನ್ ಡಿ ಸೋಜ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡುತ್ತಾ, ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜ, ರೋಹನ್ ಮೊಂತೆರೊ ಮಂಗಳೂರು ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರು ತಮ್ಮಬದ್ಧತೆ, ಪರಿಶ್ರಮದಿಂದ ಮಹತ್ವದ ಸಾಧನೆ ಮಾಡಲು




ಸಾಧ್ಯವಾಗಿದೆ.ಬಡವರಲ್ಲಿ ಬಡವರಿಗೆ ನೆರವಾಗುತ್ತಿರುವ ವೆನ್ಲಾಕ್ ಆಸ್ಪತ್ರೆಗೆ ಅಗತ್ಯ ಸಲಕರಣೆಗಳನ್ನು ಒದಗಿಸಲು ರೋಹನ್ ಮೊಂತೆರೊ ತಮ್ಮ ಆದಾಯದ ಪಾಲನ್ನು ಸಿಎಸ್ ಆರ್ ಮೂಲಕ ನೆರವಾಗುತ್ತಿರುವುದು ಶ್ಲಾಘನೀಯ ಎಂದರು.

ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿ ಡಾ। ಶಿವಪ್ರಕಾಶ್ ಮಾತನಾಡುತ್ತಾ, ವೆನ್ಲಾಕ್ ಆಸ್ಪತ್ರೆಗೆ 10ಲಕ್ಷ ರೂ. ವೆಚ್ಚದ ಮಲ್ಟಿಪ್ಯಾರ ಮಾನಿಟರ್ ಒದಗಿಸಿರುವುದರಿಂದ ಆಸ್ಪತ್ರೆಗೆ ಬರುವ ಬಡ ರೋಗಿಗಳಿಗೆ ಅನುಕೂಲವಾಗಲಿದೆ.ಈ ಹಿನ್ನೆಲೆಯಲ್ಲಿ ರೋಹನ್ ಕಾರ್ಪೊರೇಷನ್‌ಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ರೋಹನ್ ಕಾರ್ಪೊರೇಷನ್‌ನ ಅಧ್ಯಕ್ಷ ಡಾ। ರೋಹನ್ ಮೊಂತೆರೊ, ಸಂಸ್ಥೆಯ ಸಿಎಸ್‌ಆರ್ ನಿಧಿಯಿಂದ ಬಡವರಿಗೆ ಆರೋಗ್ಯ ಸೌಲಭ್ಯಗಳನ್ನು ನೀಡುತ್ತಿರುವ ವೆನ್ಲಾಕ್ ಆಸ್ಪತ್ರೆಗೆ ಮಲ್ಟಿಪ್ಯಾರ ಮಾನಿಟರ್ ಒದಗಿಸಿರುವುದರಿಂದ ಬಡ ರೋಗಿಗಳಿಗೆ ಸಹಾಯವಾಗಲಿದೆ ಎಂದರು. ರೋಹನ್ ಕಾರ್ಪೊರೇಷನ್ ನಿರ್ದೇಶಕ ಡಿಯೋನ್ ಮೊಂತೆರೊ ವಂದಿಸಿದರು. ಸಾಹಿಲ್ ಝಹೀರ್ ಕಾರ್ಯಕ್ರಮ ನಿರೂಪಿಸಿದರು.

## ಕೇಂದ್ರದ ಜನವಿರೋಧಿ ನೀತಿ ವಿರುದ್ಧ ಮೇ 30ರಂದು ಕಾಂಗ್ರೆಸ್ ಪ್ರತಿಭಟನೆ



**ಬೆಂಗಳೂರು, ಮೇ 26:** ಇಂಧನ ಬೆಲೆ ಏರಿಕೆ ಹಾಗೂ ಕೇಂದ್ರ ಸರ್ಕಾರದ ಜನ ವಿರೋಧಿ ನೀತಿಗಳ ವಿರುದ್ಧ ಮೇ 30ರಂದು ಪಕ್ಷದ ವತಿಯಿಂದ ರಾಜ್ಯಾದ್ಯಂತ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದರು.

ಕೆಪಿಸಿಸಿ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಇಂಧನ ಬೆಲೆ ಹಾಗೂ ಕೇಂದ್ರದ ಬಿಜೆಪಿ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧ ಸಾರ್ವಜನಿಕರ ಗಮನಸೆಳೆಯಲು ಕಾಂಗ್ರೆಸ್ ಕಾರ್ಯಕರ್ತರು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಬೃಹತ್ ಪ್ರತಿಭಟನೆ ನಡೆಸಲಿದ್ದಾರೆ ಎಂದರು.

---

ಫಿನೆರಿನೋನ್ ಮಾತ್ರೆ ಲಸಿಕೆಯ ಉಪಯೋಗ ಪಡೆಯಿರಿ

## ಉಚಿತವಾಗಿ ಲಭ್ಯ: ಹೃದಯ, ಕಿಡ್ನಿ ಸಮಸ್ಯೆ ನಿಯಂತ್ರಿಸಲು ಸಾಧ್ಯ: ದಿನೇಶ್ ಗುಂಡೂರಾವ್

**ಬೆಂಗಳೂರು, ಮೇ.26:** ಫಿನೆರಿನೋನ್ ಮಾತ್ರೆ ಮತ್ತು ವಯಸ್ಕರ ಲಸಿಕೆಯನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಅತ್ಯುತ್ತಮ ಸೌಲಭ್ಯಗಳನ್ನು ಸರ್ಕಾರಿ ಆಸ್ಪತ್ರೆಯಲ್ಲಿ ನೀಡುವುದು ನಮ್ಮ ಆದ್ಯತೆ. ಒಳರೋಗಿಗಳು ಹೆಚ್ಚಿರುವ ಈ ಆಸ್ಪತ್ರೆಯಲ್ಲಿ ಸಾರ್ವಜನಿಕರ ಅಪೇಕ್ಷೆಯಂತೆ 5 ಸ್ಪೆಷಲ್ ಮತ್ತು 7 ಸೆಮಿಸ್ಪೆಷಲ್ ವಾರ್ಡ್ ಸೌಕರ್ಯ ಕಲ್ಪಿಸಲಾಗಿದೆ. ಟೈಪ್ 2 ಮಧುಮೇಹ ಹೊಂದಿರುವವರಿಗೆ ಕಿಡ್ನಿ, ಹೃದಯ, ರೆಟಿನಾ ಸಮಸ್ಯೆ ಕಾಣಿಸಿಕೊಳ್ಳುವುದು ಸಹಜ. ಇದರ ಕುರಿತು ಹಲವರಿಗೆ ಜ್ಞಾನ ಇರುವುದಿಲ್ಲ. ಫಿನೆರಿನೋನ್ ಮಾತ್ರೆ ತೆಗೆದುಕೊಳ್ಳುವುದರಿಂದ ಹೃದಯ ಸಂಬಂಧಿಸಿದ ಮರಣ, ಕಿಡ್ನಿ ಸಮಸ್ಯೆಗಳನ್ನು ನಿಯಂತ್ರಿಸಲು ಸಾಧ್ಯ. ಉಚಿತವಾಗಿ ಇದನ್ನು ನೀಡುತ್ತಿದ್ದೇವೆ. ಟೈಪ್ 2 ಮಧುಮೇಹ ಇರುವ ರೋಗಿಗಳು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಈ ಲಸಿಕೆಯನ್ನು 65 ವರ್ಷ ಮೇಲ್ಪಟ್ಟವರು ಪಡೆದುಕೊಳ್ಳಬೇಕು. ಇದು ಸೋಂಕು ಜನ್ಯ ರೊಗಗಳನ್ನು ತಡೆಗಟ್ಟುತ್ತದೆ. ಹೃದಯ ಸಂಬಂಧಿಸಿದ ಕಾಯಿಲೆ ಇರುವವರು, ರೋಗ ನಿರೋಧಕ ಶಕ್ತಿ ಕಡಿಮೆ ಇರುವವರಿಗೆ ಇದು ಉಪಯುಕ್ತವಾಗಲಿದೆ. ಫ್ಲೂ ಲಸಿಕೆ 6 ತಿಂಗಳಿಂದ 65 ವರ್ಷ ವಯೋಮಾನದವರು ಇದನ್ನು ಪಡೆದುಕೊಳ್ಳಬೇಕು. 18 ರೀತಿಯ ವೈರಸ್‌ಗಳಿಂದ ಇದು ರಕ್ಷಣೆ ಕೊಡುತ್ತದೆ. ಮುಂಗಾರು ಪ್ರಾರಂಭವಾಗುವ ಈ ಹೊತ್ತಿನಲ್ಲಿ ಇದನ್ನು ಪಡೆದುಕೊಂಡರೆ ಹಲವಾರು ರೋಗಗಳಿಂದ ರಕ್ಷಣೆ ಪಡೆಯಬಹುದಾಗಿದೆ. ಇವುಗಳಿಂದ ಆಸ್ಪತ್ರೆಗೆ ದಾಖಲಾಗುವ ಸಮಸ್ಯೆ ಕಡಿಮೆ ಮಾಡಬಹುದು, ಶ್ವಾಸಕೋಶ ಸಂಬಂಧಿತ ಸಮಸ್ಯೆ ಇರುವವರಿಗೆ ಇದು ವರದಾನವಾಗಲಿದೆ.

ಆಸ್ಪತ್ರೆಯ ವಿವಿಧ ವಿಭಾಗಗಳಿಗೆ ತೆರಳಿ ರೋಗಿಗಳು ಹಾಗೂ ಸಂಬಂಧಿಗಳೊಂದಿಗೆ ಸೌಲಭ್ಯ, ಚಿಕಿತ್ಸೆ ಕುರಿತು ಸಮಾಲೋಚನೆ ನಡೆಸಿದರು. ಸದ್ಯದಲ್ಲೇ ಎಂ.ಆರ್.ಐ ಸೇರಿದಂತೆ ಹಲವಾರು ಸೌಲಭ್ಯಗಳನ್ನು, ಸಿಬ್ಬಂದಿ ನೇಮಕಾತಿಯನ್ನು ಮಾಡಲಾಗುವುದು ಎಂದು ಹೇಳಿದ್ದಾರೆ.

---

## ಎಸ್‌ಐಆರ್ ಮೂಲಕ ಪ್ರಜಾಪ್ರಭುತ್ವದ ಕಗ್ಗೊಲೆ: ಕೇಂದ್ರದ ವಿರುದ್ಧ ಸಚಿವ ಕೆ.ಎಚ್.ಮುನಿಯಪ್ಪ ಆರೋಪ



**ಬೆಂಗಳೂರು, ಮೇ. 26:** ಕೇಂದ್ರದ ಬಿಜೆಪಿ ಸರ್ಕಾರವು ಎಸ್‌ಐಆರ್ ಪರಿಶೀಲನೆ ಮೂಲಕ ಸಾರ್ವಜನಿಕರ ಹೆಸರನ್ನು ಕೈಬಿಡುವ ಮೂಲಕ ಪ್ರಜಾಪ್ರಭುತ್ವವನ್ನು ಕಗ್ಗೊಲೆ ಮಾಡಲು ಹೊರಟಿದೆ ಎಂದು ಸಚಿವ ಕೆ.ಎಚ್. ಮುನಿಯಪ್ಪ ಗಂಭೀರ ಆರೋಪ ಮಾಡಿದ್ದಾರೆ. ದಶಕಗಳಿಂದ ಮತ ಚಲಾಯಿಸುತ್ತಿರುವವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕುವ ಕಾರ್ಯಕ್ರಮ ಅನ್ಯಾಯವಾದುದು. ಇದು ಸಂವಿಧಾನಕ್ಕೆ ಮಾಡುತ್ತಿರುವ ದ್ರೋಹ. ಪಕ್ಷದ ಉನ್ನತ ನಾಯಕರ ಮಾರ್ಗದರ್ಶನದಲ್ಲಿ ಬೂತ್ ಮಟ್ಟದ ಕಾರ್ಯಕರ್ತರು ಮತದಾರರ ಪಟ್ಟಿ ಪರಿಶೀಲನೆ ಮತ್ತು ಜನಜಾಗೃತಿ ಅಭಿಯಾನ ಕೈಗೊಳ್ಳಲಿದ್ದಾರೆ ಎಂದು ಅವರು ವಿವರಿಸಿದರು.

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ದೇಶದ ಜನರಿಗೆ ಅನ್ಯಾಯ ಮಾಡುತ್ತಿದೆ. ಒಬ್ಬ ವ್ಯಕ್ತಿ ತನ್ನ ಗ್ರಾಮದಲ್ಲಿ ಅಥವಾ ತನ್ನ ನಗರದಲ್ಲಿ ಹತ್ತಾರು ವರ್ಷಗಳಿಂದ ವಾಸ ಮಾಡ್ತಾ ಇದ್ದಾರೆ, ಹತ್ತಾರು ಚುನಾವಣೆನಲ್ಲಿ ಮತ ಕೊಟ್ಟಿದ್ದಾರೆ. ಅಂತವರ ಮತವನ್ನು ಕಸಿಯು ವಂತಹ ಕಾರ್ಯಕ್ರಮವನ್ನು ಮಾಡಿದ್ದಾರೆ ಅಂದ್ರೆ, ಇದು ನಮ್ಮ ದೇಶದ ದುರದೃಷ್ಟ. ಇದು ಪ್ರಜಾಪ್ರಭುತ್ವದ ಕೊಲೆ ಯಾಗಿದೆ ಮತ್ತು ಸಂವಿಧಾನವನ್ನು ಅವರು ಕಗ್ಗೊಲೆ ಮಾಡಿದ್ದಾರೆ ಎಂದರು.

ಕಾಂಗ್ರೆಸ್ ಪಾರ್ಟಿ ಎಲ್ಲಾ ಸೆಕ್ರೆಟರಿಸ್ ಜೊತೆ ಎರಡು ದಿನಗಳ ಕಾರ್ಯಾಗಾರ ನಡೆಸಿದೆ.

ಅಭ್ಯರ್ಥಿಗಳು, ಶಾಸಕರು, ಸಚಿವರು ಎಲ್ಲರೂ ಸೇರಿ. ಈ ದಿನ ಎಲ್ಲಾ ಆರ್ಗನೈಸೇಶನ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು, ಕೆಪಿಸಿಸಿ ಪದಾಧಿಕಾರಿಗಳು, ಗ್ಯಾರಂಟಿ ಅಧ್ಯಕ್ಷರು, ಉಪಾಧ್ಯಕ್ಷರು ಅದೇ ರೀತಿ ಬೂತ್ಸ್, ಕಾರ್ಪೊರೇಷನ್ ಚೇರ್ಮನ್ ಎಲ್ಲರ ಒಟ್ಟಿಗೆ ಸೇರಿ ನಾವು ಇದೆ ತಿಂಗಳ 30 ರಂದು ಪ್ರತಿಭಟನೆಯನ್ನು ಎಲ್ಲಾ ಜಿಲ್ಲಾ ಹೆಡ್‌ಕ್ವಾರ್ಟರ್‌ನಲ್ಲಿ ಪ್ರೈಸ್ ರೈಸ್ (ಬೆಲೆ ಏರಿಕೆ) ಬಗ್ಗೆ ಮಾಡಲಿದ್ದೇವೆ ಎಂದರು.

---

ಬೊಕ್ಕಸಕ್ಕೆ ಆಗುತ್ತಿರುವ ನಷ್ಟಕ್ಕೆ ಕಡಿವಾಣ ಹಾಕಲು ಸರ್ಕಾರ ಕ್ರಮ

## ಗೃಹಲಕ್ಷ್ಮಿ ಯೋಜನೆಯಲ್ಲಿ ಪಾರದರ್ಶಕತೆ ತರಲು ಒನ್‌ಟೈಮ್ ಬಯೋಮೆಟ್ರಿಕ್

**ಬೆಂಗಳೂರು, ಮೇ 26:** ಗೃಹಲಕ್ಷ್ಮಿ ಯೋಜನೆಯಲ್ಲಿ ಪಾರದರ್ಶಕತೆ ತರಲು ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಸರ್ಕಾರದ ಬೊಕ್ಕಸಕ್ಕೆ ಆಗುತ್ತಿರುವ ಕೋಟ್ಯಂತರ ರೂಪಾಯಿ ನಷ್ಟವನ್ನು ತಡೆಯಲು ಇನ್ಮುಂದೆ 'ಒನ್‌ಟೈಮ್ ಬಯೋಮೆಟ್ರಿಕ್' ಸಲ್ಲಿಕೆಯನ್ನು ಕಡ್ಡಾಯಗೊಳಿಸಲಾಗುತ್ತಿದೆ.

ಇತ್ತೀಚಿನ ಸಮೀಕ್ಷೆಯ ಪ್ರಕಾರ, ರಾಜ್ಯದಲ್ಲಿ ಸುಮಾರು 1.44 ಲಕ್ಷಕ್ಕೂ ಅಧಿಕ ಗೃಹಲಕ್ಷ್ಮಿ ಫಲಾನುಭವಿಗಳು ಮರಣ ಹೊಂದಿದ್ದರೂ, ಅವರಲ್ಲಿ 68,776 ಮೃತರ ಖಾತೆಗಳಿಗೆ ಸದ್ದಿಲ್ಲದೆ ಹಣ ಜಮೆಯಾಗುತ್ತಿರುವುದು ಪತ್ತೆಯಾಗಿದೆ. ಈ ರೀತಿ ಮರಣ ಹೊಂದಿದ ನಂತರವೂ ಸುಮಾರು 4 ಲಕ್ಷಕ್ಕೂ ಹೆಚ್ಚು ಕಂತುಗಳಲ್ಲಿ ಒಟ್ಟು 79.75 ಕೋಟಿ ಹಣ ಅಕ್ರಮವಾಗಿ ಪಾವತಿಯಾಗಿದ್ದು,



ಇದನ್ನು ತಡೆಗಟ್ಟಲು ನಿವೃತ್ತ ಸರ್ಕಾರಿ ನೌಕರರ ಪಿಂಚಣಿ ಮಾದರಿಯಲ್ಲೇ ಗೃಹಲಕ್ಷ್ಮಿ ಫಲಾನುಭವಿಗಳಿಗೂ ಪ್ರತಿ ವರ್ಷ ಜೀವಿತ ಪ್ರಮಾಣ ಪತ್ರ ನೀಡುವುದನ್ನು ಕಡ್ಡಾಯಗೊಳಿಸಲು ಮುಖ್ಯಮಂತ್ರಿ ಸಿದ್ದ ರಾಮಯ್ಯ ಆದೇಶಿಸಿದ್ದಾರೆ.

ಈ ಹೊಸ ನಿಯಮದ ಪ್ರಕಾರ, ಪ್ರಸ್ತುತ ಯೋಜನೆ ಲಾಭ ಪಡೆಯುತ್ತಿರುವ 1.24 ಕೋಟಿಗೂ ಹೆಚ್ಚು ಮಹಿಳೆಯರು ಇಲಾಖೆ ಸೂಚಿಸುವ ನಿಗದಿತ ಅವಧಿಯೊಳಗೆ ತಮ್ಮ ಬಯೋಮೆಟ್ರಿಕ್ ನವೀಕರಣ ಮಾಡಬೇಕಾಗುತ್ತದೆ. ಫಲಾನುಭವಿಗಳು ತಮ್ಮ ಹತ್ತಿರದ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಅಥವಾ ಬಾಪೂಜಿ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ, ಆಧಾರ್ ಕಾರ್ಡ್ ಬಳಸಿ ಬೆರಳಚ್ಚು ಅಥವಾ ಕಣ್ಣಿನ ಐರಿಸ್ ಸ್ಕ್ಯಾನ್ ಮಾಡುವ ಮೂಲಕ ನವೀಕರಿಸಬಹುದು.

.ಯಾವುದೇ ಫಲಾನುಭವಿಯು ನಿಗದಿಪಡಿಸಿದ ಸಮಯದೊಳಗೆ ಬಯೋಮೆಟ್ರಿಕ್ ನವೀಕರಣ ಮಾಡದಿದ್ದರೆ, ಅಂತಹ ಖಾತೆಗಳು ಇಲಾಖೆಯ ತಂತ್ರಾಂಶದಲ್ಲಿ ಸ್ವಯಂ ಚಾಲಿತವಾಗಿ ತಾತ್ಕಾಲಿಕವಾಗಿ ಸ್ಥಗಿತಗೊಳ್ಳಲಿವೆ ಅರ್ಹ ಮತ್ತು ಜೀವಂತವಿರುವ ಮಹಿಳೆಯರಿಗೆ ಮಾತ್ರ ಈ ಯೋಜನೆಯ 2,000 ಹಣ ತಲುಪಲಿ ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗುತ್ತಿದ್ದು, ಶೀಘ್ರದಲ್ಲೇ ಇಲಾಖೆಯು ಅಧಿಕೃತ ದಿನಾಂಕ ಮತ್ತು ಮಾರ್ಗಸೂಚಿಗಳನ್ನು ಪ್ರಕಟಿಸಲಿದೆ.

---

ಕಾರ್ಮಿಕರ ಕನಿಷ್ಠ ವೇತನ ಹೆಚ್ಚಳ: ಬಿಸಿಯಾಗಲಿದೆ ಹೋಟೆಲ್ ತಿಂಡಿ ಬೆಲೆ

## ಶೇ.60ರಷ್ಟು ಹೆಚ್ಚಳದಿಂದ ಉದ್ಯಮದ ಮೇಲೆ ಗಂಭೀರ ಪರಿಣಾಮ: ಅಧ್ಯಕ್ಷ ಜಿ.ಕೆ. ಶೆಟ್ಟಿ

**ಬೆಂಗಳೂರು, ಮೇ 26:** ಕಾರ್ಮಿಕರ ಕನಿಷ್ಠ ವೇತನವನ್ನು ಶೇ.60ರಷ್ಟು ಹೆಚ್ಚಿಸಿ ಕರ್ನಾಟಕ ಸರ್ಕಾರ ಅಧಿಸೂಚನೆ ಹೊರಡಿಸಿದೆ. ರಾಜ್ಯ ಸರ್ಕಾರದ ಈ ನಿರ್ಧಾರದಿಂದ ರಾಜ್ಯಾದ್ಯಂತ ಹೋಟೆಲ್‌ಗಳು ಮತ್ತು ರೆಸ್ಟೋರೆಂಟ್‌ಗಳಲ್ಲಿ ಆಹಾರ ದರ ತೀವ್ರವಾಗಿ ಏರಿಕೆಯಾಗಲಿದೆ ಎಂದು ಕರ್ನಾಟಕ ರಾಜ್ಯ ಹೋಟೆಲ್‌ಗಳ ಸಂಘ ಎಚ್ಚರಿಕೆ ನೀಡಿದೆ.

ಕಾರ್ಮಿಕರ ಸರಾಸರಿ ಕನಿಷ್ಠ ವೇತನ ಹೆಚ್ಚಳವು ಸದ್ಯದ ವೇತನಕ್ಕಿಂತ ಸುಮಾರು ಶೇ.60ರಷ್ಟಿದೆ. ಇದು ಹೋಟೆಲ್ ಉದ್ಯಮದ ಮೇಲೆ, ವಿಶೇಷವಾಗಿ ಸಣ್ಣ ಮತ್ತು ಕುಟುಂಬ ನಡೆಸುವ ಹೋಟೆಲ್‌ಗಳ ಮೇಲೆ ತೀವ್ರ ಪರಿಣಾಮ ಬೀರಬಹುದು ಎಂದು ಸಂಘದ ಅಧ್ಯಕ್ಷ ಜಿ.ಕೆ.ಶೆಟ್ಟಿ ಹೇಳಿದ್ದಾರೆ.

ಪ್ರಸ್ತುತ 50 ರೂ. ಇರುವ ಒಂದು ಪ್ಲೇಟ್ ಇಡ್ಲಿಯ ಬೆಲೆ ಸುಮಾರು 80–90 ರೂ.ಗೆ ಏರಿಕೆಯಾಗಬಹುದು. ಹಾಗೆಯೇ ಮಸಾಲೆ ದೋಸೆಯ ಬೆಲೆ ಸುಮಾರು 80–90 ರೂ.ನಿಂದ ಸುಮಾರು 150 ರೂ.ಗೆ ಹೆಚ್ಚಳವಾಗಬಹುದು.

150–200 ರೂ. ಸಸ್ಯಾಹಾರಿ ಊಟ 250–300 ರೂ.ವರೆಗೆ, ಬೆಂಗಳೂರಿನಲ್ಲಿ ಪ್ರಸ್ತುತ 300–350 ರೂ.ನ ಬಿರಿಯಾನಿ ಭಕ್ಷ್ಯಗಳು 500 ರೂ.ವರೆಗೆ ತಲುಪಬಹುದು ಎಂದು ಸಂಘ ತಿಳಿಸಿದೆ.ಪರಿಷ್ಕೃತ ವೇತನ ರಚನೆಯ ಪ್ರಕಾರ ವಲಯ 3 ತಾಲೂಕುಗಳಲ್ಲಿ ಕೌಶಲ್ಯರಹಿತ ಕೆಲಸಗಾರನಿಗೆ ಸುಮಾರು 19,300 ರೂ. ಮತ್ತು ವಲಯ 1 ಪ್ರದೇಶಗಳಲ್ಲಿ ಕೌಶಲ್ಯಪೂರ್ಣ ಕೆಲಸಗಾರನಿಗೆ ಸುಮಾರು 31,100 ರೂ.ವರೆಗೆ ಇರಲಿದೆ.

ಕಾರ್ಯಾಚರಣೆಯ ವೆಚ್ಚದಲ್ಲಿನ ತೀವ್ರ ಏರಿಕೆಯಿಂದಾಗಿ ಹೋಟೆಲ್ ವಲಯವು ಈಗಾಗಲೇ ಆರ್ಥಿಕ ಒತ್ತಡದಲ್ಲಿದೆ. ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ ಕೆಲವೇ ತಿಂಗಳಲ್ಲಿ 1,884 ರೂ.ನಿಂದ 3,152 ರೂ.ಗೆ ಏರಿದೆ.

ಹಾಗೆಯೆ ದಿನಸಿ ಬೆಲೆಗಳು, ವಿದ್ಯುತ್ ಸುಂಕಗಳು ಮತ್ತು ಕಸದ ಸೆಸ್ ಶುಲ್ಕಗಳ ಹೆಚ್ಚಳವೂ ಆಗಿದೆ ಎಂದು ಶೆಟ್ಟಿ ಉಲ್ಲೇಖಿಸಿದರು.

ಹೋಟೆಲ್‌ಗಳು ಇತರ ವಲಯಗಳಂತೆ ಅಲ್ಲ. ನಾವು ಉದ್ಯೋಗಿಗಳಿಗೆ ಆಹಾರ, ವಸತಿ ಮತ್ತು ಇತರ ಸೌಲಭ್ಯಗಳನ್ನು ಒದಗಿಸುತ್ತೇವೆ. ಇಷ್ಟು ದೊಡ್ಡ ವೇತನ ಹೆಚ್ಚಳ ವಿಧಿಸುವ ಮೊದಲು ಸರ್ಕಾರವು ಹೋಟೆಲ್ ಉದ್ಯಮದ ಸ್ವರೂಪವನ್ನು ಪರಿಗಣಿಸಬೇಕಾಗಿತ್ತು" ಎಂದು ಶೆಟ್ಟಿ ಅಭಿಪ್ರಾಯಪಟ್ಟರು.

ಇತರ ಹಲವು ಕೈಗಾರಿಕೆಗಳಿಗಿಂತ ಭಿನ್ನವಾಗಿ ಹೋಟೆಲ್ ಸಂಸ್ಥೆಗಳು ಈಗಾಗಲೇ



ಕಾರ್ಮಿಕರಿಗೆ ಆಹಾರ, ವಸತಿ, ಸಮವಸ್ತ್ರ ಮತ್ತು ತೊಳೆಯುವ ಭತ್ಯೆ ಸೇರಿದಂತೆ ಹಲವಾರು ಸೌಲಭ್ಯಗಳನ್ನು ಒದಗಿಸುತ್ತಿವೆ. ಕನಿಷ್ಠ ವೇತನ ಪರಿಷ್ಕರಣೆಯನ್ನು ಜಾರಿಗೆ ತರುವ ಸಂದರ್ಭದಲ್ಲಿ ನಮ್ಮ ಉದ್ಯಮವನ್ನು ಪ್ರತ್ಯೇಕವಾಗಿ ವರ್ಗೀಕರಿಸಲು ಕರ್ನಾಟಕ ಸರ್ಕಾರಕ್ಕೆ ಮನವಿ ಮಾಡಿದ್ದೆವು. ಆದರೆ ಈ ವಿನಂತಿಯನ್ನು ಸರ್ಕಾರ ಸ್ವೀಕರಿಸಿಲ್ಲ ಎಂದು ಸಂಘ ಹೇಳಿದೆ.ಹೋಟೆಲ್ ಉದ್ಯಮಕ್ಕೆ ಪರಿಷ್ಕೃತ ಕನಿಷ್ಠ ವೇತನದ ಅನುಷ್ಠಾನವನ್ನು ಮರುಪರಿಶೀಲಿಸುವಂತೆ ಸರ್ಕಾರಕ್ಕೆ ಒತ್ತಾಯಿಸಿದೆ. ಇಲ್ಲದಿದ್ದರೆ ಸರ್ಕಾರದ ಕ್ರಮವು ಹೋಟೆಲ್ ನಡೆಸುವವರು ಮತ್ತು ಗ್ರಾಹಕರಿಗೆ ತೊಂದರೆ ಉಂಟುಮಾಡಬಹುದು ಎಂದು ಎಚ್ಚರಿಸಿದೆ.

ಹೆಚ್ಚುತ್ತಿರುವ ವೆಚ್ಚಗಳು ನಿರುದ್ಯೋಗಕ್ಕೆ ಕಾರಣವಾಗಬಹುದು. ಜೊತೆಗೆ ಅನೇಕ ಕಾರ್ಮಿಕರು ಸಣ್ಣ ಅಂಗಡಿಗಳು ಮತ್ತು ಪಾದಚಾರಿ ಮಾರ್ಗದಲ್ಲಿನ ಮಾರಾಟದಂತಹ ಅಸಂಘಟಿತ ವಲಯಕ್ಕೆ ಸ್ಥಳಾಂತರಗೊಳ್ಳುವಂತೆ ಆಗಬಹುದು ಎಂದು ಸಂಘವು ಕಳವಳ ವ್ಯಕ್ತಪಡಿಸಿದೆ.

---

## ಐಪಿಎಲ್ ಬೆಟ್ಟಿಂಗ್: 23 ಮಂದಿ ಬಂಧನ ನಗದು, ಮೊಬೈಲ್ ಫೋನ್ ವಶ

**ಬೆಂಗಳೂರು, ಮೇ. 26:** ಐಪಿಎಲ್ ಟಿ–20 ಕ್ರಿಕೆಟ್ ಬೆಟ್ಟಿಂಗ್ ದಂಧೆಯಲ್ಲಿ ತೊಡಗಿದ್ದ 23 ಜನರನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ಬೆಂಗಳೂರು ನಗರದ ಸಿಸಿಬಿಯ ವಿಶೇಷ ತನಿಖಾ ದಳದ ಅಧಿಕಾರಿಗಳು ನಗರದ ವಿವಿಧ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಏಕಕಾಲಕ್ಕೆ ಸಂಘಟಿತ ದಾಳಿ ನಡೆಸಿ ಈ ಯಶಸ್ವಿ ಕಾರ್ಯಾಚರಣೆ ಕೈಗೊಂಡಿದ್ದಾರೆ.

ಈ ದಾಳಿಯ ವೇಳೆ ಒಟ್ಟು 17 ಪ್ರತ್ಯೇಕ ಕ್ರಿಕೆಟ್ ಬೆಟ್ಟಿಂಗ್ ಪ್ರಕರಣಗಳನ್ನು ದಾಖಲಿಸಿ ಕೊಳ್ಳಲಾಗಿದ್ದು, ದಂಧೆಯಲ್ಲಿ ಭಾಗಿಯಾಗಿದ್ದ 23 ಮಂದಿಯನ್ನು ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಂಧಿತರಿಂದ ಬೆಟ್ಟಿಂಗ್ ದಂಧೆಗೆ ಬಳಸುತ್ತಿದ್ದ ಭಾರಿ ಪ್ರಮಾಣದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

'ದಾಳಿಯ ವೇಳೆ 1.10 ಲಕ್ಷ ರೂ. ಮೌಲ್ಯದ 7 ಮೊಬೈಲ್ ಫೋನ್‌ಗಳು, 1,06,433 ನಗದು ಹಾಗೂ 13.37 ಕೋಟಿ ಮುಖಬೆಲೆಯ ಬೆಟ್ಟಿಂಗ್ ಚಿಪ್ಸ್‌ಗಳನ್ನು ಜಪ್ತಿ ಮಾಡಲಾಗಿದೆ' ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ವಶಪಡಿಸಿಕೊಳ್ಳಲಾದ ಒಟ್ಟು ಆಸ್ತಿಯು ಅಂದಾಜು ಮೌಲ್ಯ ರೂ.13.39 ಕೋಟಿ ಎಂದು ಅಂದಾಜಿಸಲಾಗಿದ್ದು, ಈ ಜಾಲದ ಹಿಂದೆ ಯಾರಿದ್ದಾರೆ ಎಂಬ ಕುರಿತು ಸಿಸಿಬಿ ಪೊಲೀಸರು ಮುಂದಿನ ತನಿಖೆಯನ್ನು ಚುರುಕುಗೊಳಿಸಿದ್ದಾರೆ.

---

## ವಿನಯ್ ಕುಲಕರ್ಣಿ ಜಾಮೀನು, ಶಿಕ್ಷೆ ಅಮಾನತು ಕೋರಿದ ಅರ್ಜಿ ವಿಚಾರಣೆ ಜೂ. 1ಕ್ಕೆ

**ಬೆಂಗಳೂರು, ಮೇ.26:** ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ದೋಷಿಯಾಗಿರುವ ಮಾಜಿ ಶಾಸಕ ವಿನಯ್ ಕುಲಕರ್ಣಿ ಅವರ ಜಾಮೀನು ಹಾಗೂ ಶಿಕ್ಷೆ ಅಮಾನತು ಕೋರಿ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ಜೂ.1ಕ್ಕೆ ಮುಂದೂಡಿದೆ.

ಧಾರವಾಡ ಜಿಲ್ಲಾ ನ್ಯಾಯಾಲಯ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದನ್ನು ಪ್ರಶ್ನಿಸಿ ವಿನಯ್ ಕುಲಕರ್ಣಿ ಹೈಕೋರ್ಟ್ ಮೆಟ್ಟಿಲೇರಿ ದ್ದರು. ಮಂಗಳವಾರ ಹೈಕೋರ್ಟ್‌ನ ವಿಭಾಗೀಯ ಪೀಠದ ಮುಂದೆ ಈ ಅರ್ಜಿಯ ವಿಚಾರಣೆ ನಡೆಯಿತು.

ವಿಚಾರಣೆ ವೇಳೆ ವಿನಯ್ ಕುಲಕರ್ಣಿ ಪರ ವಕೀಲರು ಕೋರ್ಟ್‌ಗೆ ವಿಶೇಷ ಮನವಿ ಮಾಡಿಕೊಂಡರು. "ಪ್ರಕರಣದಲ್ಲಿ ಶಿಕ್ಷೆಯಾಗಿರುವುದರಿಂದ ವಿನಯ್ ಕುಲಕರ್ಣಿ ಅವರು ಈಗಾಗಲೇ ಶಾಸಕ ಸ್ಥಾನದಿಂದ ಅನರ್ಹಗೊಂಡಿದ್ದಾರೆ. ಹೀಗಾಗಿ ತೆರವಾಗಿರುವ ಕ್ಷೇತ್ರಕ್ಕೆ ಚುನಾವಣಾ ಆಯೋಗವು



ಯಾವುದೇ ಕ್ಷಣ ದಲ್ಲಾದರೂ ಉಪಚುನಾವಣೆ ಘೋಷಿ ಸುವ ಸಾಧ್ಯತೆ ಇದೆ. ಆದ್ದ ರಿಂದ ಈ ಅರ್ಜಿಯನ್ನು ತುರ್ತಾಗಿ ವಿಚಾರಣೆ ನಡೆಸಬೇಕು" ಎಂದು ವಕೀಲರು ಕೋರಿದರು.

ವಿನಯ್ ಕುಲಕರ್ಣಿ ವಕೀಲರ ವಾದವನ್ನು ಆಲಿಸಿದ ಹೈಕೋರ್ಟ್ ವಿಭಾಗೀಯ ಪೀಠವು, ಈ ಅರ್ಜಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸುವಂತೆ ಕೇಂದ್ರೀಯ ತನಿಖಾ ದಳದ (ಸಿಬಿಐ) ವಕೀಲರಿಗೆ ಸೂಚನೆ ನೀಡಿತು. ಸಿಬಿಐ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಿದ ನ್ಯಾಯಾಲಯ, ಮುಂದಿನ ವಿಚಾರಣೆ ಯನ್ನು ಜೂನ್ 1ಕ್ಕೆ ಮುಂದೂಡಿತು.

ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಪ್ರಕರಣ ರಾಜಕೀಯವಾಗಿ ಭಾರಿ ಸದ್ದು ಮಾಡಿತ್ತು. ಈಗ ಸಿಬಿಐ ವಿಶೇಷ ನ್ಯಾಯಾಲಯದಿಂದ ಶಿಕ್ಷೆಗೆ ಒಳಗಾಗಿ ಶಾಸಕ ಸ್ಥಾನ ಕಳೆದುಕೊಂಡಿರುವ ವಿನಯ್ ಕುಲಕರ್ಣಿ ಅವರಿಗೆ ಜೂ.1 ರಂದು ಹೈಕೋರ್ಟ್‌ನಲ್ಲಿ ಸಿಗಲಿರುವ ತೀರ್ಪು ರಾಜಕೀಯ ಭವಿಷ್ಯದ ದೃಷ್ಟಿಯಿಂದ ಅತ್ಯಂತ ನಿರ್ಣಾಯಕವಾಗಿದೆ.

---



ನಗರ್ತ ಸಮುದಾಯವನ್ನು ಬಿಸಿಎಂ ಎಂದು ಪರಿಗಣಿಸುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ಅಯೋಧ್ಯಾ ನಗರ್ತ ಸಮುದಾಯದ ಸದಸ್ಯರು ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

---

ಐದು ದಿನ ಕರಾವಳಿಯಲ್ಲಿ ವರುಣನ ಆರ್ಭಟ

## ಒಳನಾಡಿನಲ್ಲಿ ವ್ಯಾಪಕ ಮಳೆ: ಜೂನ್ ಮೊದಲ ವಾರದಲ್ಲಿ ಮುಂಗಾರು ನಿರೀಕ್ಷೆ

**ಬೆಂಗಳೂರು, ಮೇ 26:** ರಾಜ್ಯದ ಕರಾವಳಿ ಮತ್ತು ಒಳನಾಡಿನ ಜಿಲ್ಲೆಗಳಲ್ಲಿ ಮುಂದಿನ ಐದು ದಿನಗಳು ಗುಡುಗು, ಸಿಡಿಲು ಹಾಗೂ ತೀವ್ರ ವೇಗದ ಬಿರುಗಾಳಿ ಸಹಿತ ಮಳೆ ಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದ್ದು, ಜತೆಗೆ ರಾಜ್ಯದಲ್ಲಿ ಜೂನ್ ಮೊದಲ ವಾರದಲ್ಲೇ ಮುಂಗಾರು ಆರಂಭ ವಾಗುವ ಸಾಧ್ಯತೆ ಇದೆ ಎಂದು ತಿಳಿಸಿದೆ.

ಮುಂದಿನ 2–3 ದಿನಗಳಲ್ಲಿ ನೈಋತ್ಯ ಮತ್ತು ಆಗ್ನೇಯ ಸಮುದ್ರ, ಬಂಗಾಳಕೊಲ್ಲಿ ಮತ್ತು ಅಂಡಮಾನ್ ಸಮುದ್ರದ ಉಳಿದ ಭಾಗಗಳಿಗೆ ನೈರುತ್ಯ ಮುಂಗಾರು ಮತ್ತಷ್ಟು ಪ್ರವೇಶಿಸಲು ಹವಾಮಾನ ಪರಿಸ್ಥಿತಿಗಳು ಅನುಕೂಲಕರವಾಗಿವೆ. ಹವಾಮಾನ ವೈಪರೀತ್ಯದ ಹಿನ್ನೆಲೆಯಲ್ಲಿ ಇಂದು ಮತ್ತು ನಾಳೆ ಎರಡು ದಿನಗಳ ಕಾಲ ರಾಜ್ಯದ ಕೆಲ ಭಾಗಗಳಲ್ಲಿ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ. ಅಲ್ಲದೆ, ಬಂಗಾಳ ಕೊಲ್ಲಿಯ ನೈಋತ್ಯ ಭಾಗದಲ್ಲಿ ಮೇಲ್ಮೈ ಸುಳಿಗಾಳಿ ಉಂಟಾಗಿರುವ ಕಾರಣ ವಾಯು ಚಂಡಮಾರುತದ ಪ್ರಸರಣ ಉಂಟಾಗುವುದರಿಂದ ರಾಜ್ಯದಲ್ಲಿ ಮಳೆ ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಬೆಂಗಳೂರು ನಗರದಲ್ಲಿ ಮುಂದಿನ 24 ಗಂಟೆಗಳಲ್ಲಿ ಭಾಗಶಃ ಮೋಡ



ಕವಿದ ವಾತಾವರಣವಿದ್ದು, ಮಧ್ಯಾಹ್ನ ಅಥವಾ ಸಂಜೆಯ ವೇಳೆಗೆ ಸಾಮಾನ್ಯವಾಗಿ ಮೋಡ ಕವಿದ ವಾತಾವರಣವಿರುತ್ತದೆ. ಗಂಟೆಗೆ 40 ರಿಂದ 50 ಕಿ.ಮೀ ವೇಗದ ಗಾಳಿಯೊಂದಿಗೆ ಸಾಧಾರಣ ಮಳೆ ಅಥವಾ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ನಗರದ ಕೆಲವು ಪ್ರದೇಶಗಳಲ್ಲಿ ಆಲಿಕಲ್ಲು ಅಥವಾ ಭಾರೀ ಮಳೆಯಾಗುವ ನಿರೀಕ್ಷೆಯಿದೆ.

ಗರಿಷ್ಠ ತಾಪಮಾನವು ಸುಮಾರು 34ಲಿಅ ಮತ್ತು ಕನಿಷ್ಠ ತಾಪಮಾನವು 21ಲಿಅ ಆಗಿರುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ವರದಿ ತಿಳಿಸಿದೆ. ಜತೆಗೆ ಮೇ ಕೊನೆಯ ವಾರದಲ್ಲಿ ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಏಕಾಏಕಿ ಹವಾಮಾನ ಬದಲಾಗಲಿದೆ ಎಂದು ಸೂಚಿಸಿದೆ.

### ಎಲ್ಲೆಲ್ಲಿ ಮಳೆ?

ಬೆಂಗಳೂರು ಗ್ರಾಮಾಂತರ ಮತ್ತು ಬೆಂಗಳೂರು ನಗರ ಜಿಲ್ಲೆಗಳಲ್ಲಿ 40–50 ಕಿ ಮೀ ವೇಗದ ಗಾಳಿ ಮತ್ತು ಆಲಿಕಲ್ಲು ಸಹಿತ ಭಾರೀ ಮಳೆ ಅಥವಾ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಚಾಮರಾಜನಗರ, ಕೋಲಾರ, ರಾಮನಗರ, ಮಂಡ್ಯ ಮತ್ತು ಹಾಸನ ಜಿಲ್ಲೆಗಳಲ್ಲಿಯೂ ಬಿರುಗಾಳಿ ಸಹಿತ ಭಾರೀ ಮಳೆಯಾಗುವ ನಿರೀಕ್ಷೆಯಿದೆ.

ಅದರಂತೆ ಧಾರವಾಡ, ಗದಗ, ಹಾವೇರಿ, ಕೊಪ್ಪಳ, ಬಾಗಲಕೋಟೆ, ವಿಜಯಪುರ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಸಾಧಾರಣ ಮಳೆ ಅಥವಾ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಒಂದೆರಡು ಕಡೆ ಸಾಧಾರಣ ಮಳೆಯಾಗಲಿದೆ ಎಂದು ತಿಳಿಸಿದೆ.

### ಹವಾಮಾನ ಇಲಾಖೆಯ ಮಹತ್ವದ ಎಚ್ಚರಿಕೆ

ಭಟ್ಕಳ ಸಮೀಪ ನದಿನೀರಿನಲ್ಲಿ ಕೊಚ್ಚಿ ಹೋಗಿ 11 ಮಂದಿ ಸಾವನ್ನಪ್ಪಿದ ಬೆನ್ನಲ್ಲೇ ಇದೀಗ ಮಳೆಗಾಲವೂ ಸಮೀಪಿಸುತ್ತಿರುವ ಹಿನ್ನಲೆಯಲ್ಲಿ ಮತ್ತು ಮಳೆ ಗುಡುಗು, ಸಿಡಿಲನ ಜತೆಗೆ ಗಾಳಿಯ ವೇಗವೂ ಹೆಚ್ಚಿರುವುದರಿಂದ ಮೀನುಗಾರರು ಹೆಚ್ಚಿನ ಎಚ್ಚರಿಕೆ ವಹಿಸಬೇಕು. ಅಲ್ಲದೆ ಯಾರೂ ಕೂಡ ಸಮುದ್ರ, ನದಿಯ ನೀರಿಗೆ ಇಳಿಯಬಾರದು. ಇಲಾಖೆ ನೀಡುವ ಮುನ್ಸೂಚನೆ ಹಾಗೂ ಎಚ್ಚರಿಕ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಹವಾಮಾನ ಇಲಾಖೆ ನಿರ್ದೇಶಿಸಿದೆ.

---

## ಶಿಕ್ಷಕರು, ಅತಿಥಿ ಶಿಕ್ಷಕರು, ಅಂಗನವಾಡಿ ನೌಕರರ ನೇಮಕಾತಿಗೂ ಒಳಮೀಸಲಾತಿ ಕಡ್ಡಾಯವಾಗಿ ಜಾರಿಗೊಳಿಸಿ: ಡಾ. ಸಂಗಮೇಶ್ ಆಗ್ರಹ

**ಬೆಂಗಳೂರು, ಮೇ. 26:** ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಗೆ ಆದೇಶ ಹೊರಡಿಸಿದ್ದರೂ, ರಾಜ್ಯದ ವಿವಿಧ ಶಿಕ್ಷಣ ಹಾಗೂ ಉದ್ಯೋಗ ಕ್ಷೇತ್ರಗಳಲ್ಲಿ ಸಮರ್ಪಕವಾಗಿ ಅನುಷ್ಠಾನ ವಾಗುತ್ತಿಲ್ಲ. ಶಿಕ್ಷಣ ಮತ್ತು ಉದ್ಯೋಗ ವಲಯದಲ್ಲಿ ಕಡ್ಡಾಯವಾಗಿ ಒಳ ಮೀಸಲಾತಿ ಜಾರಿಗೆ ತರಬೇಕು ಎಂದು ಕರ್ನಾಟಕ ರಾಜ್ಯ ಯುವ ಸಮೂಹ ಒತ್ತಾಯಿಸಿದೆ.

2026–27 ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ, ಅತಿಥಿ, ಗುತ್ತಿಗೆ, ತಾತ್ಕಾಲಿಕ ನೇಮಕಾತಿಗಳಲ್ಲಿ ಸಂವಿಧಾನಬದ್ಧ ಮೀಸಲಾತಿ ಮತ್ತು ಪರಿಶಿಷ್ಟ ಜಾತಿಗಳ ಒಳಮೀಸಲಾತಿಯನ್ನು ಕಡ್ಡಾಯವಾಗಿ ಜಾರಿಗೊಳಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಯುವ ಸಮೂಹ ರಾಜ್ಯಪಾಲರು, ಉನ್ನತ ಶಿಕ್ಷಣ, ಶಾಲಾ ಶಿಕ್ಷಣ ಸಚಿವರು ಹಾಗೂ ಸಂಬಂಧಿತ ಇಲಾಖೆಗಳ ಸಚಿವರು ಮತ್ತು ಅಧಿಕಾರಿಗಳಿಗೆ ಸಮಗ್ರ ಮನವಿ ಸಲ್ಲಿಸಿದೆ.

ಮನವಿ ಪತ್ರಕ್ಕೆ ರಾಜ್ಯಾಧ್ಯಕ್ಷ ಡಾ. ಎಸ್. ಸಂಗಮೇಶ್, ವಕೀಲ ಹನುಮೇಶ ಗುಂಡೂರ, ಕಾರ್ಯಕಾರಿ ಅಧ್ಯಕ್ಷರಾದ ಅಗ್ನಿ ಅಜಿತ್, ಯುವ ಹೋರಾಟಗಾರರಾದ ಡಾ. ರವಿ ಕುಮಾರ ಮರಡಿಪುರ, ಸಾಮಾಜಿಕ ಹೋರಾಟಗಾರ ನಿಂಗರಾಜ್ ಗುಳೆ, ಪದಾಧಿಕಾರಿಗಳಾದ ಜಿ. ಎಂ. ಬಬಲಾದ್, ಮಂಜುನಾಥ್ ಬಿ, ಡೇವಿಡ್ ಸಹಿ ಮಾಡಿದ್ದಾರೆ.



ಐಟಿಐ ಕಾಲೇಜುಗಳು, ವಿವಿಧ ವಿಶ್ವವಿದ್ಯಾಲಯಗಳ ಪಿ.ಎಚ್.ಡಿ ಪ್ರವೇಶಾತಿ, ಪಿಯುಸಿ ನಂತರದ 5 ವರ್ಷದ ಎಲ್.ಎಲ್.ಬಿ ಪ್ರವೇಶಾತಿ, ಸರ್ಕಾರಿ ಡಿಗ್ರಿ ಕಾಲೇಜುಗಳ 10,500 ಅತಿಥಿ ಸಹ ಪ್ರಾಧ್ಯಾಪಕರ ನೇಮಕಾತಿ, 52 ಸಾವಿರ ಅತಿಥಿ ಶಿಕ್ಷಕರ ನೇಮಕಾತಿ, 5,910 ಅತಿಥಿ ಉಪನ್ಯಾಸಕರ ನೇಮಕಾತಿ, ಅಂಗನವಾಡಿ ಹುದ್ದೆಗಳು, ಆರ್.ಟಿ.ಇ ಮತ್ತು ಆದರ್ಶ ವಿದ್ಯಾಲಯಗಳ ಪ್ರವೇಶಾತಿ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಒಳಮೀಸಲಾತಿ ಜಾರಿಯಾಗಿಲ್ಲ. ಸಂವಿಧಾನದ ಕಲಂ 14, 15(4), 15(5), 16(4), 16(4o) ಹಾಗೂ 46 ರ ಆಶಯಗಳಿಗೆ ಅನುಗುಣವಾಗಿ ಸಾಮಾಜಿಕ ನ್ಯಾಯ ಕಾಪಾಡುವುದು ಸರ್ಕಾರದ ಕರ್ತವ್ಯವಾಗಿದ್ದು, ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನ ಬೆಳಕಿನಲ್ಲಿ ಪರಿಶಿಷ್ಟ ಜಾತಿಗಳ ಒಳವರ್ಗೀಕರಣ ಸಂವಿಧಾನಬದ್ಧವಾಗಿರುವುದನ್ನು ಸರ್ಕಾರ ಮನಗಾಣಬೇಕು ಎಂದು ಹೇಳಿದ್ದಾರೆ.

ಆಂಧ್ರಪ್ರದೇಶ, ತೆಲಂಗಾಣ, ಪಂಜಾಬ್, ಹರಿಯಾಣ ಮತ್ತು ತಮಿಳುನಾಡು ರಾಜ್ಯಗಳಲ್ಲಿ ಜಾರಿಯಲ್ಲಿರುವ ಒಳಮೀಸಲಾತಿ ಮಾದರಿಗಳನ್ನು ಉಲ್ಲೇಖಿಸಿ, ಕರ್ನಾಟಕದಲ್ಲಿಯೂ ಕಡ್ಡಾಯ ಅನುಷ್ಠಾನಕ್ಕೆ ಸ್ಪಷ್ಟ ಆದೇಶ ಹೊರಡಿಸಬೇಕು.

ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಸ್ಪಷ್ಟ ಮಾರ್ಗಸೂಚಿ ಜಾರಿಗೊಳಿಸಬೇಕು. ಒಳಮೀಸಲಾತಿ ಮೇಲ್ವಿಚಾರಣೆಗೆ ಪ್ರತ್ಯೇಕ ಸಮಿತಿ ರಚಿಸಿ, ನಿಯಮ ಉಲ್ಲಂಘನೆ ಮಾಡುವ ಇಲಾಖೆ ಮತ್ತು ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

---

## ಕಾಂಗ್ರೆಸ್‌ನಿಂದ ದ್ವೇಷಭಾಷಣಕ್ಕೆ ಕುಮ್ಮಕ್ಕು: ಭರವಸೆ ಈಡೇರಿಸಿಲ್ಲ ಮಾನವಹಕ್ಕು ಹೋರಾಟಗಾರ್ತಿ ತೀಸ್ತಾ ಸೆಟಲ್ವಾಡ್ ಬೇಸರ

**ಬೆಂಗಳೂರು, ಮೇ 26:** ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಚುನಾವಣೆ ವೇಳೆ ನೀಡಿದ್ದ ಭರವಸೆಗಳನ್ನು ಇದುವರೆಗೂ ಈಡೇರಿಕೆ ಮಾಡಿಲ್ಲ. ಜತೆಗೆ, ದ್ವೇಷಭಾಷಣಕ್ಕೆ ಕುಮ್ಮಕ್ಕು ನೀಡುವ ಕಾರ್ಯಕ್ರಮಗಳು ಎಂದಿನಂತೆ ಮುಂದುವರಿದಿರುವುದು ಅಚ್ಚರಿ ತಂದಿದೆ ಎಂದು ಮಾನವ ಹಕ್ಕುಗಳ ಹೋರಾಟಗಾರ್ತಿ ತೀಸ್ತಾ ಸೆಟಲ್ವಾಡ್ ಬೇಸರ ವ್ಯಕ್ತಪಡಿಸಿದ್ದಾರೆ.

ಡಾ.ಎಚ್.ಎಸ್.ದೊರೆಸ್ವಾಮಿ ಸ್ಮಾರಕ ಪ್ರತಿಷ್ಠಾನ, ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿವಿ, ಮಹಾತ್ಮ ಗಾಂಧಿ ಅಧ್ಯಯನ ಕೇಂದ್ರ, ಗೌರಿ ಮೀಡಿಯಾ ಟ್ರಸ್ಟ್ ಹಾಗೂ ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಸಹಯೋಗದೊಂದಿಗೆ ಮಂಗಳವಾರ ಆಯೋಜಿಸಿದ್ದ 'ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್. ದೊರೆಸ್ವಾಮಿ' ಅವರಿಗೆ ಕರ್ನಾಟಕದ ಗೌರವಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

2023ರ ಕರ್ನಾಟಕ ಸಾರ್ವತ್ರಿಕ ಚುನಾವಣೆ ಸಂದರ್ಭದಲ್ಲಿ ಮತಾಂತರ ನಿಷೇಧ ಕಾಯ್ದೆ ಹಾಗೂ ಜಾನುವಾರು ಹತ್ಯೆ ಪ್ರತಿಬಂಧಕ ಕಾಯ್ದೆಗಳನ್ನು ಹಿಂಪಡೆಯಲಾಗುವುದು ಎಂದು ಕಾಂಗ್ರೆಸ್ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿತ್ತು. ಆದರೆ, ಅಧಿಕಾರಕ್ಕೆ ಬಂದು ಮೂರು ವರ್ಷಗಳು ಕಳೆದರೂ ಈ ಎರಡು ವಿವಾದಿತ ಕಾಯ್ದೆಗಳನ್ನು ಹಿಂಪಡೆಯುವಲ್ಲಿ ವಿಫಲವಾಗಿದೆ. ಇನ್ನೊಂದೆಡೆ, ಪ್ಯಾಲೆಸ್ತೀನ್ ಪರ ಪ್ರತಿಭಟನೆ, ಸಮಾವೇಶ ಮಾಡಲು ಅವಕಾಶ ನೀಡುತ್ತಿಲ್ಲ. ಆದರೆ, ದ್ವೇಷ



ಭಾಷಣ ಮುಂದುವರಿಸುವ ಕಾರ್ಯಕ್ರಮಗಳಿಗೆ ಅವಕಾಶ ನೀಡುತ್ತಿರುವುದು ಕಾಂಗ್ರೆಸ್ಸಿನ ಆಳ್ವಿಕೆಗಳ ಬಗ್ಗೆ ಅಚ್ಚರಿಯಾಗುತ್ತಿದೆ ಎಂದರು.

ರಾಜ್ಯದಲ್ಲಿ ಪ್ರಗತಿಪರ ಸಂಘಟನೆಗಳು ಅನೇಕ ಹೋರಾಟಗಳ ಮೂಲಕ ಜನರಿಗೆ ನ್ಯಾಯ ಒದಗಿಸುವಲ್ಲಿ ಯಶಸ್ವಿಯಾಗಿವೆ. ಭೂಮಿ ಹೋರಾಟ ಸಮಿತಿಗಳು ಜನರ ಬದುಕು ಕಟ್ಟಿಕೊಳ್ಳುವಂತೆ ಮಾಡಿದೆ. ಇಂತಹ ಪ್ರಗತಿಗೆ ಎಚ್.ಎಸ್.ದೊರೆಸ್ವಾಮಿ ಅವರ ಶ್ರಮ, ಮಾರ್ಗದರ್ಶನ ಇದೆ. ಅವರು ನಮ್ಮೊಂದಿಗೆ ದೈಹಿಕವಾಗಿ ಇಲ್ಲ. ಆದರೆ, ಅವರ ಸಲಹೆ, ಮಾತುಗಳು ಸದಾ ಜೀವಂತವಾಗಿ ಇರಲಿದೆ ಎಂದು ತೀಸ್ತಾ ನುಡಿದರು.



ಬೆಂಗಳೂರು ನಗರ ಪೊಲೀಸರು ವಶಪಡಿಸಿಕೊಂಡ ಕಳವು ಚಿನ್ನಾಭರಣಗಳನ್ನು ನಗರ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ವೀಕ್ಷಿಸಿದರು.

# ಸಿದ್ದರಾಮಯ್ಯ ಮುಸ್ಲಿಂ ತುಷ್ಟೀಕರಣ ಅತಿರೇಕಕ್ಕೆ: ಕೇಸ್ ಹಿಂಪಡೆದ ಸರ್ಕಾರದ ವಿರುದ್ಧ ಯತ್ನಾಳ್ ವಾಗ್ದಾಳಿ

**ವಿಜಯಪುರ, ಮೇ. 26:** ಯಾಕೋ ಈ ಸಿದ್ದರಾಮಯ್ಯಂದು ಮುಸ್ಲಿಂ ಪ್ರೀತಿ ಅತಿಯಾಯ್ತು. ಅಧಿಕಾರಿಗಳ ಮತ್ತು ಕೇಂದ್ರ ಸಚಿವರ ಮೇಲೆ ಹಲ್ಲೆ ನಡೆಸಿದ ಕಲಬುರಗಿ ಜಿಲ್ಲೆಯ ಆಳಂದ ಮುಸ್ಲಿಮರ ಮೇಲಿನ ಕೇಸ್‌ಗಳನ್ನು ವಾಪಸ್ ತೆಗೆದುಕೊಂಡಂತೆ, ಹಿಂದೂಗಳ ಮೇಲಿನ ಕೇಸ್‌ಗಳನ್ನು ವಾಪಸ್ ತೆಗೆದುಕೊಳ್ಳಲಿ. ಈ ಮೂಲಕ ಜಾತ್ಯತೀತ ಎಂದು ಎಲ್ಲರನ್ನೂ ನೋಡಬೇಕು ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು.

ಕಲಬುರಗಿ ಜಿಲ್ಲೆ ಆಳಂದದ ಲಾಡ್ಲೆ ಮಷಾಕ ದರ್ಗಾ ಗಲಾಟೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ಕೇ ವರ್ಷಕ್ಕೆ ಪ್ರಕರಣವನ್ನು ಹಿಂಪಡೆದ ಸರ್ಕಾರದ ಕುರಿತು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 8 ಪ್ರಕರಣಗಳನ್ನು ಸಂಪುಟದಲ್ಲಿ ಸರ್ಕಾರ ಹಿಂಪಡೆದಿದ್ದು, ಇದು ಸಿದ್ದರಾಮಯ್ಯ ಅವರ ಅತಿರೇತಕದ ಪರಮಾವಧಿ ಎಂದು ವಾಗ್ದಾಳಿ ನಡೆಸಿದರು.2022ರ ಮಹಾಶಿವರಾತ್ರಿಯ ದಿನಂದು ರಾಘವಚೈತನ್ಯ ಶಿವಲಿಂಗ ಪೂಜೆಗೆ ತೆರಳಿದ್ದ ಕೇಂದ್ರ ಸಚಿವರ ಜೊತೆಗೆ ಹೋಗಿದ್ದ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ಅಧಿಕಾರಿ ಸೇರಿದಂತೆ ಕೇಂದ್ರ ಸಚಿವರ ಮೇಲೆ ಕಲ್ಲು ತೂರಾಟ ನಡೆಸಿ ಹಲ್ಲೆ ನಡೆಸಿದ್ದಲ್ಲದೇ, ಅಧಿಕಾರಿಗಳ ಕಾರುಗಳನ್ನೂ ಕೂಡ ಜಖಂಗೊಳಿಸಿದ ದಂಗೆಖೋರ ಮುಸ್ಲಿಮರು ಸಿದ್ದರಾಮಯ್ಯಗೆ ಅಮಾಯಕರಂತೆ ಕಂಡು ಬಂದಿದ್ದಾರೆ. ಅವರ ವಿರುದ್ಧ ಪ್ರಕರಣ ಹಿಂತೆಗೆದುಕೊಳ್ಳುವಂತೆ ಸ್ಪೀಕರ ಯುಟಿ ಖಾದರ ಸಿಎಂಗೆ ಪತ್ರ ಬರೆದು ಶಿಫಾರಸು ಮಾಡಿದ್ದಾರೆ. ಅವರ ಶಿಫಾರಸಿನಂತೆ ಸಿಎಂ ಪ್ರಕರಣ ಹಿಂತೆಗೆದುಕೊಂಡಿದ್ದಾರೆ. ಇಂದು ದಂಗೆಕೋರರ ವಿರುದ್ಧ ಪ್ರಕಣ ಹಿಂತೆಗೆದುಕೊಂಡಿದ್ದಾರೆ. ಮುಂದೆ ಭಯೋತ್ಪಾದಕರ ಮೇಲಿನ ಪ್ರಕರಣಗಳನ್ನೂ ಹಿಂತೆಗೆದುಕೊಳ್ಳುತ್ತಾರೆ. ದೇಶ ಹಾಳಾಗಿ ಹೋಗಲಿ ತಮ್ಮ ಅಧಿಕಾರ ಉಳಿಯಲು ಮುಸ್ಲಿಮರ ಓಟು ಮಾತ್ರ ಬೇಕೆನ್ನುತ್ತಾರೆ ಸಿದ್ದರಾಮಯ್ಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇಟಲಿ ಪ್ರಧಾನಿ ಮೆಲೋನಿಗೆ ಪ್ರಧಾನಿ ಮೋದಿ ಮೆಲೋಡಿ ಚಾಕೊಲೇಟ್ ನೀಡಿದ ವಿಚಾರವಾಗಿ ಕಾಂಗ್ರೆಸ್ ನಾಯಕರಿಂದ ವಿರೋಧ ಹಾಗೂ ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಯತ್ನಾಳ ಟೀಕಿಸಿದರು. ರಾಹುಲ್ ಗಾಂಧಿ ಒಬ್ಬ ಜೋಕರ್, ತಲೆನೂ ಇಲ್ಲಾ ಗೌರವವೂ ಇಲ್ಲ. ಮೋದಿ ಅವರು ಪಾರ್ಲೆ ಕಂಪನಿ ಚಾಕೊಲೇಟ್ ಕೊಟ್ಟಿದ್ದು ತಪ್ಪಲ್ಲ. ರಾಜೀವ್ ಗಾಂಧಿಯಂತೆ ಭಾರತೀಯ ನೌಕಾಪಡೆ ಹಡಗಿನಲ್ಲಿ ದೇಶದ್ರೋಹಿಗಳ ಜೊತೆ ಪಾರ್ಟಿ ಮಾಡಿಲ್ಲ. ಗಾಂಧಿ ಹತ್ಯೆಯಾದಾಗ ನೆಹರು ನಮ್ಮ ಮನೆಯಲ್ಲಿ ನನ್ನ ತಾಯಿ ಜೊತೆಗಿದ್ದ ಎಂದು ಮೌಂಟ್ ಬ್ಯಾಟನ್ ಮಗಳು ತನ್ನ ಪುಸ್ತಕದಲ್ಲಿ ಬರೆದಿದ್ದಾಳೆ. ಇದಕ್ಕಿಂತ ದುರಂತ ಬೇಕೇ ಎಂದು ಟೀಕಿಸಿದರು.



ಸಂಸತ್ತಿಗೆ ಹೇಗೆ ಬರಬೇಕೆಂದು ರಾಹುಲ್ ಗಾಂಧಿಗೆ ಗೊತ್ತಿಲ್ಲ. ಎಂತೆಂಥ ಮಹಾನ್ ವ್ಯಕ್ತಿಗಳು ಆಗಿಹೋಗಿದ್ದಾರೆ. ಪಟೇಲ್, ಲಾಲ್ ಬಹಾದ್ದೂರ ಶಾಸ್ತ್ರಿಯವರಂತಹ ಮಹಾನ್ ವ್ಯಕ್ತಿಗಳು ಆಗಿ ಹೋಗಿದ್ದಾರೆ. ದೇಶದ ಉತ್ಪನ್ನ ಆಗಿರುವ ಪಾರ್ಲೆಯನ್ನು ಇಟಲಿ ಪ್ರಧಾನಿಗೆ ಕೊಟ್ಟಿದ್ದಾರೆ. ಇಟಲಿ ಪ್ರಧಾನಿಯೇ ಮೋದಿ ಪರಿಶ್ರಮಿ ಎಂದಿದ್ದಾರೆ. ಶರದ್ ಪವಾರ ಸಹ ಮೋದಿ ಪರ ಮಾತನಾಡಿದ್ದಾರೆ. ಪ್ರಧಾನಿ ಮೋದಿ ವಿದೇಶ ಪ್ರವಾಸ ಅಪಮಾನ ಮಾಡಬಾರದು ಎಂದಿದ್ದಾರೆ. ದೇಶಕ್ಕೆ ಅನಕೂಲ ವಾಗಲೆಂದು ವಿದೇಶ ಪ್ರವಾಸ ಮಾಡುತ್ತಿದ್ದಾರೆ. ಚೋಳರ ಕಾಲದ ಕುರುಹು ಇಟಲಿಯಲ್ಲಿ ಪತ್ತೆ ಆಗಿದೆ, ಮೋದಿಗೆ ಚೋಳರಾಜನ ಇತಿಹಾಸ ಕುರಿತು ಮಾಹಿತಿ ನೀಡಿದ್ದಾರೆ. ಇಟಲಿಯಲ್ಲಿ ಚೋಳರಾಜ ಕಟ್ಟಿದ ದೇವಾಲಯವಿದೆ ಎಂದು ಹೇಳಿದರು.

**ದೇಶದ್ರೋಹದ ಪಕ್ಷ**

ದೇಶದಲ್ಲಿ ಕಾಕ್ರೋಚ್ ಜನತಾ ಪಾರ್ಟಿ ಸಂಚಲನ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ತಾಂತ್ರಿಕವಾಗಿ ಏನನ್ನಾದರೂ ಮಾಡಬಹುದು. ಕಾಕ್ರೋಚ್ ಪಾರ್ಟಿ ವ್ಯವಸ್ಥಿತವಾಗಿ ದೇಶವನ್ನು ಅತಂತ್ರ ಮಾಡಬೇಕೆಂಬುದಿದೆ. ಪ್ರಧಾನಿ ಮೋದಿಯವರನ್ನು ಕೆಳಗಿಳಿಸೋದೇ ಇವರ ಮುಖ್ಯ ಉದ್ದೇಶವಾಗಿದೆ. ಇದರಲ್ಲಿ ವಿದೇಶಿ ಕೈವಾಡವಿದೆ. ಅವರು ಕಾಂಗ್ರೆಸ್ಸನ್ನು ಬಳಸಿಕೊಂಡಿದ್ದಾರೆ. ಭಾರತ ಜಗತ್ತಿನ ಶಕ್ತಿಶಾಲಿ ರಾಷ್ಟ್ರವಾಗೋದನ್ನು ತಡೆಯಬೇಕೆಂಬ ಉದ್ದೇಶವಿದೆ. ರಾಹುಲ್‌ಗಾಂಧಿ ಚೀನಾದ ಏಜೆಂಟ್‌ಆಗಿ ವರ್ತಿಸುತ್ತಿದ್ದನೆ. ಅವರ ಭಷೆ ಪಾಕಿಸ್ತಾನ ಪರವಾಗಿರುತ್ತದೆ. ಕಾಂಗ್ರೆಸ್ ದೇಶ ದ್ರೋಹದ ಪಕ್ಷವಾಗಿದೆ. ಎಡಪಂಥೀಯರು ಕಮ್ಯುನಿಷ್ಟರಿಗೆ ದೇಶದ ಬೆಳವಣಿಗೆ ನೋಡಲು ಆಗುತ್ತಿಲ್ಲ. ಕಾಕ್ರೋಚ್ ಜನತಾ ಪಾರ್ಟಿಗೆ ಪಾಕಿಸ್ತಾನದವರು ಸದಸ್ಯರಾದರೆ, ಭಾರತಕ್ಕೇನು ಸಂಬಂಧ? ಪಾಕಿಸ್ತಾನದಲ್ಲೇ ತಿನ್ನೋಕೆ ಆಹಾರವಿಲ್ಲ. ಕೈಯಲ್ಲಿ ಭಿಕ್ಷಾ ಪಾತ್ರೆ ಹಿಡಿದು ಜಗತ್ತಿನ ಎದುರು ಬೆತ್ತಲಾಗಿ ನಿಂತಿದ್ದಾರೆ. ಪಾಕಿಸ್ತಾನದಲ್ಲಿನ ಪ್ರದೇಶಗಳಿಗೆ ಹಿಂದೂಗಳ ಹೆಸರು ಇಡುತ್ತಿದ್ದಾರೆ. ವರ್ಡ್ ಹೆರಿಟೇಜ್‌ನ ಹಣ ಹೊಡೆಯೋಕೆ ಪಾಕ್‌ನಲ್ಲಿ ಹಿಂದೂ ಹೆಸರು ಇಡುತ್ತಿದ್ದಾರೆ ಎಂದು ಯತ್ನಾಳ ಆರೋಪಿಸಿದರು. ರಾಜ್ಯ ಬಿಜೆಪಿ ಅಧ್ಯಕ್ಷ ಬದಲಾವಣೆ ವಿಚಾರವಾಗಿ ಮಾತನಾಡಿ, ರಾಜ್ಯ ಬಿಜೆಪಿ ಬೆಳವಣಿಗೆ ಕುರಿತು ಮಾಹಿತಿ ಕಲೆ ಹಾಕಲು ಕೇಂದ್ರ ಬಿಜೆಪಿ ಇಬ್ಬರು ವೀಕ್ಷಕರು ರಾಜ್ಯಕ್ಕೆ ಆಗಮನವಾಗಿದೆ. ರಾಜ್ಯಕ್ಕೆ ಆಗಮಿಸಿದ ವೀಕ್ಷಕರು 35 ಜನರ ಜೊತೆಗೆ ಮಾತನಾಡಿದ್ದಾರೆ, ಹಾಗೆ ಮಾಡಬಾರದು. ಹಾಲಿ ಶಾಸಕರು, ಸಂಸದರನ್ನು ಮಾತನಾಡಿಸಬೇಕು. ಎಲ್ಲರ ಅಭಿಪ್ರಾಯ ಪಡೆದು ಸರ್ವೇ ಮಾಡಬೇಕು ಎಂದರು.

# ಶಿವಾಜಿ ಮಹಾರಾಜರ ಜೀವನ ವಿಶ್ವಕ್ಕೆ ಮಾದರಿ: ಸಂಸದ ಸಾಗರ್ ಖಂಡ್ರೆ



**ಬೀದರ, ಮೇ. 26:** ಛತ್ರಪತಿ ಶಿವಾಜಿ ಮಹಾರಾಜರ ಜೀವನ ಮತ್ತು ಆದರ್ಶ ಕೇವಲ ಭಾರತಕ್ಕೆ ಮಾತ್ರವಲ್ಲದೆ ಇಡೀ ವಿಶ್ವಕ್ಕೆ ಮಾದರಿಯಾಗಿದೆ. ಅವರ ಹೋರಾಟ ಮತ್ತು ಜನಪರವಾದ ಆಡಳಿತ ವಿಶ್ವಮಾನ್ಯವಾಗಿದೆ ಎಂದು ಸಂಸದ ಸಾಗರ್ ಖಂಡ್ರೆ ಹೇಳಿದರು.

ಬಾಳೂರ ಗ್ರಾಮದಲ್ಲಿ ಗ್ರಾಮಸ್ಥರ ವತಿಯಿಂದ ಆಯೋಜಿಸಿದ್ದ ಛತ್ರಪತಿ ಶಿವಾಜಿ ಮಹಾರಾಜರ ಅಶ್ವಾರೂಢ ಪುತ್ಥಳಿ ಅನಾವರಣಗೊಳಿಸಿ ಮಾತನಾಡಿದ ಅವರು, ಶಿವಾಜಿಯವರ ಜೀವನ ಮತ್ತು ಆದರ್ಶಗಳನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು. ಈಗಾಗಲೇ ಜಿಲ್ಲೆಯಲ್ಲಿ 25 ಲಕ್ಷ ವೆಚ್ಚದಲ್ಲಿ ಮರಾಠಾ ಭವನ ಕಾಮಗಾರಿ ಆರಂಭಿಸಲಾಗಿದೆ. ಬೀದರ್–ನಾಂದೇಡ ರೈಲ್ವೆ ಕಾಮಗಾರಿಗೆ ರಾಜ್ಯ ಸರ್ಕಾರದ ಪಾಲಿನ ಅನುದಾನ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಮರಾಠಾ ಸಮುದಾಯದ ಸಮಸ್ಯೆಗಳ ಕುರಿತು ಸಂಸತ್ತಿನಲ್ಲಿ ಧ್ವನಿ ಎತ್ತುವೆ. ಬೆಂಗಳೂರಿನ ಮಂಜುನಾಥ ಭಾರತಿ ಸ್ವಾಮೀಜಿ ಮಾತನಾಡಿ, ಕೇವಲ ಮೂರ್ತಿ ಸ್ಥಾಪನೆ ಮಾಡಿದರೆ ಸಲ್ಲದು. ಅದರ ಜೊತೆಗೆ ಸಮಾಜದ ಏಳ್ಗೆಗೆ ಶ್ರಮಿಸಬೇಕು ಎಂದು ಸಮಾಜದ ಬಾಂಧವರಿಗೆ ಕರೆ ನೀಡಿದರು.

ಪುಣೆಯ ದಾದಾ ಮಹಾರಾಜ್ ನಗರಕರ್ ಮಾತನಾಡಿ, ಬೀದರ್ ಜಿಲ್ಲೆಯಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಸಂಶೋಧನಾ ಕೇಂದ್ರ ಸ್ಥಾಪನೆಯಾಗಬೇಕು. ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ವಿಧಾನಸಭೆಯಲ್ಲಿ ಧ್ವನಿ ಎತ್ತಲಿ ಎಂದು ತಿಳಿಸಿದರು.

# ಹಲ್ಲೆಕೋರರ ಪ್ರಕರಣ ರದ್ದು: ಸರ್ಕಾರದ ನಡೆ ವಿರೋಧಿಸಿ ಶಿವಸೇನೆ ಭಾರಿ ಪ್ರತಿಭಟನೆ



**ಕಲಬುರಗಿ, ಮೇ. 26:** 2022ರಲ್ಲಿ ಜಿಲ್ಲೆಯ ಆಳಂದದ ಲಾಡ್ಲೆ ಮಶಾಕ್ ದರ್ಗಾದ ಆವರಣದಲ್ಲಿ ಮಹಾಶಿವರಾತ್ರಿಯ ದಿನದಂದು ಶ್ರೀ ರಾಘವ ಚೈತನ್ಯ ಶಿವಲಿಂಗದ ಶುದ್ಧೀಕರಣದ ವೇಳೆ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ಅಧಿಕಾರಿ ಮತ್ತು ಕೇಂದ್ರ ಸಚಿವರ ಮೇಲೆ ಹಲ್ಲೆ ನಡೆಸಿ, ಅವರ ಕಾರುಗಳನ್ನು ಜಖಂ ಗೊಳಿಸಿದ ಘಟನೆಗೆ ಸಂಬಂಧಿಸಿದಂತೆ ಮುಸ್ಲಿಮರ ಮೇಲಿನ ಪ್ರಕರಣಗಳನ್ನು ವಾಪಸ್ ಪಡೆದ ರಾಜ್ಯ ಕಾಂಗ್ರೆಸ್ ಸರ್ಕಾರದ ತುಷ್ಟೀಕರಣದ ನೀತಿ ಖಂಡಿಸಿ ಶಿವಸೇನಾ ಪಕ್ಷ ಹಾಗೂ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ನಗರದ ಜಿಲ್ಲಾಧಿಕಾರಿಗಳ ಕಚೇರಿಮುಂದೆ ಪ್ರತಿಭಟನೆ ನಡೆಸಿದರು.

ಹೋರಾಟದ ನೇತೃತ್ವ ವಹಿಸಿದ್ದ ಶಿವಸೇನೆ ರಾಜ್ಯಾಧ್ಯಕ್ಷ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರ್ಕಾರವು ಮುಸ್ಲಿಂ ತುಷ್ಟೀಕರಣ ಮಾಡುತ್ತಿದೆ. ದಂಗೆಕೋರರು ಸರ್ಕಾರಿ ಅಧಿಕಾರಿಗಳು ಮತ್ತು ಕೇಂದ್ರ ಸಚಿವರ ಮೇಲೆ ಹಲ್ಲೆ ನಡೆಸಿದವರ ವಿರುದ್ಧದ ಪ್ರಕರಣಗಳನ್ನು ಹಿಂಪಡೆದುಕೊಂಡಿದೆ. ಹೀಗೆಯೇ ಮುಂದುವರೆದರೆ ಅವರು ಮುಖ್ಯಮಂತ್ರಿಗಳ ಮೇಲೂ ಹಲ್ಲೆ ಮಾಡಬಹುದಾಗಿದೆ ಎಂದು ಎಚ್ಚರಿಕೆ ನೀಡಿದರು.

ಕಳೆದ 2022ರಂದಿನ ಪ್ರಕರಣವನ್ನು ಯಾರೂ ಮರೆಯುವಂತಿಲ್ಲ. ಜಿಲ್ಲಾಧಿಕಾರಿಗಳಿಗೆ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಿಗೆ, ಕೇಂದ್ರ ಸಚಿವರಿಗೆ, ಶಾಸಕರ ಮೇಲೆ ಕಲ್ಲು ತೂರಾಟ ಮಾಡಲಾಯಿತು. ಮಾರಕಾಸ್ತ್ರಗಳನ್ನು ಹಿಡಿದು ಬೆದರಿಕೆ ಹಾಕಿದರು. ಈ ಕುರಿತು ಪ್ರಕರಣ ವಿಚಾರಣೆಯಲ್ಲಿದ್ದರೂ ಸಹ ರಾಜ್ಯ ಸರ್ಕಾರವು ಅಲ್ಪಸಂಖ್ಯಾತರ ಮುಸ್ಲಿಮರ ಓಲೈಕೆಗೆ ಗಂಭೀರ ಪ್ರಕರಣಗಳನ್ನು ಹಿಂಪಡೆದಿದೆ ಎಂದು ಅವರು ಆರೋಪಿಸಿದರು. ನಾವು ಇಂತಹ ಪ್ರಕರಣವನ್ನು ಸುಮ್ಮನೆ ಬಿಡುವುದಿಲ್ಲ. ಕೂಡಲೇ ರಾಜ್ಯ ಸರ್ಕಾರವು ಮುಸ್ಲಿಂರ ಮೇಲೆ ಇದ್ದ ಪ್ರಕರಣಗಳನ್ನು ಹಿಂಪಡೆದಿರುವ ಅದೇಶವನ್ನು ರದ್ದುಪಡಿಸಬೇಕು. ಇಲ್ಲವಾದಲ್ಲಿ ಕಾನೂನಿನ ಮೂಲಕ ಹೋರಾಟ ಮಾಡಲಾಗುವುದು ಎಂದು ಅವರು ಎಚ್ಚರಿಸಿದರು.

# ಗ್ರಾಮಗಳಲ್ಲಿ ತಪ್ಪದ ಕುಡಿಯುವ ನೀರಿನ ಗೋಳು



**ರಾಯಚೂರು, ಮೇ. 26:** ಕುಡಿಯುವ ನೀರಿನ ಉದ್ದೇಶಕ್ಕಾಗಿಯೇ 10 ವರ್ಷಗಳ ಹಿಂದೆ ಅನುಷ್ಠಾನ ಗೊಳಿಸಿದ ಹಲವು ಯೋಜನೆಗಳು ಇಂದಿಗೂ ಪೂರ್ಣಗೊಂಡಿಲ್ಲ. ಜಲಜೀವನ ಮಿಷನ್ ಯೋಜನೆ ನೆಲಕಚ್ಚಿದೆ. ಕಳಪೆ ಕಾಮಗಾರಿಯಿಂದಾಗಿ ಓವರ್‌ಹೆಡ್ ಟ್ಯಾಂಕ್‌ಗಳು ಉದ್ಘಾಟನೆಗೆ ಮುನ್ನವೇ ಹಾಳಾಗಿವೆ. ನದಿ ಪಕ್ಕದಲ್ಲಿ ಕೆರೆ ನಿರ್ಮಿಸಿದರೂ ಅದನ್ನು ತುಂಬಿಸಿಲ್ಲ. ಶುದ್ಧ ನೀರಿನ ಘಟಕಗಳು ಕೆಟ್ಟು ನಿಂತು ಹಲವು ವರ್ಷಗಳಾಗಿವೆ.

ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮೂಲಕ ರೂ.381.64 ಕೋಟಿ ವೆಚ್ಚದಲ್ಲಿ 1,210 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇದರಲ್ಲಿ 1,087 ಕಾಮಗಾರಿಗಳು ಪೂರ್ಣಗೊಂಡಿವೆ. 122 ಕಾಮಗಾರಿಗಳು ಇನ್ನೂ ಪೂರ್ಣಗೊಂಡಿಲ್ಲ.

ಜಲಜೀವನ ಮಿಷನ್ ಯೋಜನೆ ಅಡಿ ಜಿಲ್ಲೆಯ ಎಲ್ಲ ಗ್ರಾಮೀಣ ವಸತಿ ಪ್ರದೇಶಗಳು ಹಾಗೂ 7 ನಗರ ಸ್ಥಳೀಯ ಸಂಸ್ಥೆಗಳಾದ ಮಾನ್ವಿ, ಮಸ್ಕಿ, ಕವಿತಾಳ, ತುರ್ವಿಹಾಳ, ಬಳಗಾನೂರು, ಸಿರವಾರ ಹಾಗೂ ಹಟ್ಟಿ ಒಳಗೊಂಡು ಬಹು ಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಡಿ ಕಾಮಗಾರಿ ನಡೆಯುತ್ತಿದೆ.

ಶಂಕರ ನಾರಾಯಣ ಕನ್‌ಸ್ಟ್ರಕ್ಷನ್, ವೈಟಲ್ ಎನ್ವಿರಾನ್ಮೆಂಟ್ ಇಂಡಿಯಾ ಸಂಸ್ಥೆ, ಎಸ್‌ಪಿಎಂಎಲ್ ಕಂಪನಿ ಕಾಮಗಾರಿಯ ಗುತ್ತಿಗೆ ಪಡೆದುಕೊಂಡಿದೆ. 2022ರ ಜೂನ್ 4ರಂದು ಕರಾರು ಮಾಡಿಕೊಳ್ಳಲಾಗಿದೆ. ಕರಾರಿನ ಪ್ರಕಾರ 2024ರ ಡಿಸೆಂಬರ್ ಮೊದಲ ವಾರದಲ್ಲೇ ಕಾಮಗಾರಿ ಮುಗಿಸಬೇಕಿತ್ತು.

ಅವಧಿ ಮುಗಿದು ಎರಡು ವರ್ಷ ಕಳೆದರೂ ಕಾಮಗಾರಿ ತೆವಳುತ್ತ ಸಾಗಿದೆ. ಇದೀಗ ಯೋಜನಾ ವೆಚ್ಚ ರೂ.2,978 ಕೋಟಿ ದಾಟಿದೆ.

ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು 2025ರ ಜುಲೈ 18ರಂದು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆಸಿದ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಶೇ 48.87ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಮಾಹಿತಿ ಒದಗಿಸಿದ್ದರು.

2026ರ ಫೆಬ್ರವರಿ 21ರಂದು ಸಂಸದ ಜಿ.ಕುಮಾರ ನಾಯಕ ನಡೆಸಿದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ ಮಂಡಿಸಿದ ವರದಿಯಲ್ಲಿ ಶೇ 53.35ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಲಿಖಿತ ಮಾಹಿತಿ ಒದಗಿಸಿದ್ದರು. ಆರು ತಿಂಗಳ ಅವಧಿಯಲ್ಲಿ ಶೇ 4.48 ರಷ್ಟು ಮಾತ್ರ ಪ್ರಗತಿ ಸಾಧಿಸಿರುವುದು ಅಂಕಿ–ಅಂಶಗಳೇ ಹೇಳುತ್ತಿವೆ.

# ರಸ್ತೆ ಅಗಲೀಕರಣ ಸಂತ್ರಸ್ತರ ಧರಣಿಗೆ ಮಾಜಿ ಶಾಸಕ ಸೋಮಶೇಖರರೆಡ್ಡಿ ಬೆಂಬಲ



**ಬಳ್ಳಾರಿ, ಮೇ 26:** ನಗರದ ಬಾಪೂಜಿ ನಗರ ಪ್ರದೇಶದಲ್ಲಿ ರಸ್ತೆ ಅಗಲೀಕರಣ ಕಾಮಗಾರಿಯಿಂದ ಮನೆ ಕಳೆದುಕೊಂಡ ಸಂತ್ರಸ್ತ ಕುಟುಂಬಗಳ ಹೋರಾಟಕ್ಕೆ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಬೆಂಬಲ ಸೂಚಿಸಿದರು.

ವಾರ್ಡ್ ನಂ. 7 ಮತ್ತು 8ಕ್ಕೆ ಸಂಪರ್ಕ ಹೊಂದಿರುವ ರಸ್ತೆ ಅಗಲೀಕರಣ ಕಾಮಗಾರಿಯ ವೇಳೆ ಕಳೆದ ವರ್ಷ ಇಪ್ಪತ್ತಕ್ಕೂ ಹೆಚ್ಚು ಕುಟುಂಬಗಳ ಮನೆಗಳನ್ನು ತೆರವುಗೊಳಿಸಲಾಗಿತ್ತು. ಆಗ ಸಂತ್ರಸ್ತರಿಗೆ ಪರ್ಯಾಯ ನಿವೇಶನ ಹಾಗೂ ವಸತಿ ವ್ಯವಸ್ಥೆ ಕಲ್ಪಿಸುವ ಭರವಸೆ ನೀಡಲಾಗಿತ್ತು ಎಂದು ಕುಟುಂಬಗಳು ಆರೋಪಿಸಿವೆ. ಆದರೆ ವರ್ಷ ಕಳೆದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಸಂತ್ರಸ್ತರು ಧರಣಿ ಸತ್ಯಾಗ್ರಹ ಆರಂಭಿಸಿದ್ದಾರೆ.

ಇಂದು ಧರಣಿ ಸ್ಥಳಕ್ಕೆ ಭೇಟಿ ನೀಡಿದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ, ಸಂತ್ರಸ್ತ ಕುಟುಂಬಗಳ ಅಹವಾಲು ಆಲಿಸಿ ಅವರಿಗೆ ಬೆಂಬಲ ವ್ಯಕ್ತಪಡಿಸಿದರು. ರಸ್ತೆ ಅಗಲೀಕರಣದ ವೇಳೆ ಮನೆ ಕಳೆದುಕೊಂಡವರಿಗೆ ಪರ್ಯಾಯವಾಗಿ ಮನೆ ಹಾಗೂ ನಿವೇಶನ ನೀಡುವುದು ನ್ಯಾಯಸಮ್ಮತವಾದ ಬೇಡಿಕೆಯಾಗಿದೆ ಎಂದು ಹೇಳಿದರು.

ಕಟ್ಟಡ ಧ್ವಂಸದ ವೇಳೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ನೀಡಿದ ಭರವಸೆಗಳನ್ನು ಈಗ ಆಡಳಿತ ನಡೆಸುತ್ತಿರುವವರು ಈಡೇರಿಸಬೇಕು. ಇಲ್ಲವಾದರೆ ಜನರಿಗೆ ಮೋಸ ಮಾಡಿದಂತಾಗುತ್ತದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಈ ನಡುವೆ, ರಸ್ತೆ ಕಾಮಗಾರಿ ಆರಂಭಿಸುವ ಮೊದಲು ಸುರಕ್ಷಿತ ಮತ್ತು ಕಾನೂನುಬದ್ಧ ನಿವೇಶನ ಒದಗಿಸಬೇಕು. ಇಲ್ಲದಿದ್ದರೆ ಕಾಮಗಾರಿ ನಡೆಸಲು ಅವಕಾಶ ನೀಡುವುದಿಲ್ಲ ಎಂದು ಸಂತ್ರಸ್ತ ಕುಟುಂಬಗಳು ಮತ್ತೊಮ್ಮೆ ಎಚ್ಚರಿಕೆ ನೀಡಿವೆ.

# ಜನತಾದರ್ಶನದಲ್ಲಿ ಸಾರ್ವಜನಿಕರ ಅಹವಾಲು ಆಲಿಸಿದ ಸಂಸದೆ ಪ್ರಭಾ ಮಲ್ಲಿಕಾರ್ಜುನ್



**ದಾವಣಗೆರೆ, ಮೇ 26:** ನಗರದ ಜಿಲ್ಲಾಡಳಿತ ಭವನದಲ್ಲಿರುವ ಸಂಸದರ ಕಚೇರಿಯಲ್ಲಿ ಮಂಗಳವಾರ ಆಯೋಜಿಸಿದ್ದ ಜನತಾದರ್ಶನ ಕಾರ್ಯಕ್ರಮದಲ್ಲಿ ದಾವಣಗೆರೆ ಲೋಕಸಭಾ ಕ್ಷೇತ್ರದ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾರ್ವಜನಿಕರು ಹಾಗೂ ಮಹಿಳೆಯರ ಅಹವಾಲುಗಳನ್ನು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಆಲಿಸಿ, ಮನವಿ ಸ್ವೀಕರಿಸಿದರು.

ಜಗಳೂರು, ಅಸಗೋಡು, ಹರಿಹರ, ಕೊಂಡಜ್ಜಿ, ಕುರುಬರಹಳ್ಳಿ, ಹೆಬ್ಬಾಳು, ಐಗೂರು, ಚನ್ನಗಿರಿ ಹಾಗೂ ದಾವಣಗೆರೆ ಸೇರಿದಂತೆ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾರ್ವಜನಿಕರು ನಿವೇಶನ ಸಮಸ್ಯೆ, ಚರಂಡಿ ವ್ಯವಸ್ಥೆ, ಬಸ್ ನಿಲ್ದಾಣ ಅಭಿವೃದ್ಧಿ, ದೇವಸ್ಥಾನಗಳಿಗೆ ಅನುದಾನ ಸೇರಿದಂತೆ ಹಲವು ಸಾರ್ವಜನಿಕ ಸಮಸ್ಯೆಗಳು ಮತ್ತು ಬೇಡಿಕೆಗಳ ಕುರಿತು ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಸಂಸದೆ ಪ್ರಭಾ ಮಲ್ಲಿಕಾರ್ಜುನ್, ಜನರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡುವುದು ಜನಪ್ರತಿನಿಧಿಗಳ ಜವಾಬ್ದಾರಿಯಾಗಿದೆ. ಪ್ರತಿ ಮಂಗಳವಾರ ನಡೆಯುವ ಜನತಾ ದರ್ಶನ ಕಾರ್ಯಕ್ರಮದ ಮೂಲಕ ಸಾರ್ವಜನಿಕರ ಸಮಸ್ಯೆಗಳು, ಬೇಡಿಕೆಗಳು ಹಾಗೂ ಸಲಹೆಗಳನ್ನು ನೇರವಾಗಿ ಆಲಿಸಿ, ಸಂಬಂಧಪಟ್ಟ ಅಧಿಕಾರಿಗಳ ಮೂಲಕ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಜನರ ಸಮಸ್ಯೆಗಳ ಪರಿಹಾರಕ್ಕೆ ಪ್ರಾಮುಖ್ಯತೆ ನೀಡಲಾಗುತ್ತಿದ್ದು, ಸಾರ್ವಜನಿಕ ರೊಂದಿಗೆ ನೇರ ಸಂಪರ್ಕವಿದ್ದಾಗ ಮಾತ್ರ ಅಭಿವೃದ್ಧಿ ಸಾಧ್ಯ ಎಂದು ಅವರು ಹೇಳಿದರು.

# ಹರಗಿನದೋಣಿಯಲ್ಲಿ ನೀರಿನ ಕೆರೆ ನಿರ್ಮಾಣಕ್ಕೆ ನಾಗೇಂದ್ರ ಸೂಚನೆ

## ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲಿಸಿದ ವೆಂಕಟೇಶ್ ಪ್ರಸಾದ್



**ಬಳ್ಳಾರಿ, ಮೇ 26:** ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಹರಗಿನದೋಣಿ ಗ್ರಾಮದಲ್ಲಿ ಕಳೆದ ಎರಡು ದಶಕಗಳಿಂದ ತೀವ್ರವಾಗಿ ಕಾಡುತ್ತಿದ್ದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಡಲಾಗಿದೆ.

ಶಾಸಕ ಬಿ.ನಾಗೇಂದ್ರ ಅವರ ಸಹೋದರ ಬಿ.ವೆಂಕಟೇಶ್ ಪ್ರಸಾದ್ ಅವರು ಅಧಿಕಾರಿಗಳೊಂದಿಗೆ ಗ್ರಾಮಕ್ಕೆ ಭೇಟಿ ನೀಡಿ, ಕುಡಿಯುವ ನೀರಿನ ಕೆರೆ ನಿರ್ಮಾಣಕ್ಕೆ ಗುರುತಿಸಲಾದ ಸ್ಥಳವನ್ನು ಪರಿಶೀಲಿಸಿದರು. ಗ್ರಾಮಸ್ಥರ ಸಂಕಷ್ಟವನ್ನು ಆಲಿಸಿದ ಅವರು, ನೀರಿನ ಸಮಸ್ಯೆ ನಿವಾರಣೆಗೆ ತ್ವರಿತ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಾಸಕ ಅಭಿ ನಾಗೇಂದ್ರ ಅವರ ಮಾರ್ಗದರ್ಶನದ ಮೇರೆಗೆ ಗ್ರಾಮಕ್ಕೆ ಭೇಟಿ ನೀಡಿದ ವೆಂಕಟೇಶ್ ಪ್ರಸಾದ್, ಗ್ರಾಮದ ಜನರು ಹಲವು ವರ್ಷಗಳಿಂದ ನೀರಿಗಾಗಿ ಪರದಾಡುತ್ತಿದ್ದಾರೆ. ಜನರ ಬಹುದಿನಗಳ ಬೇಡಿಕೆಯನ್ನು ಈಡೇರಿಸಿ ಶಾಶ್ವತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಕೆರೆ ನಿರ್ಮಾಣ ಕಾರ್ಯವನ್ನು ಶೀಘ್ರ ಆರಂಭಿಸಲಾಗುವುದು ಎಂದು ಭರವಸೆ ನೀಡಿದರು. ಸ್ಥಳ ಪರಿಶೀಲನೆ ವೇಳೆ ಗ್ರಾಮಸ್ಥರು ತಮ್ಮ ಸಮಸ್ಯೆಗಳನ್ನು ವಿವರಿಸಿದರೆ, ಅಧಿಕಾರಿಗಳು ಕೆರೆ ನಿರ್ಮಾಣಕ್ಕೆ ಅಗತ್ಯ ಕ್ರಮಗಳ ಕುರಿತು ಮಾಹಿತಿ ನೀಡಿದರು. ಈ ಯೋಜನೆ ಕಾರ್ಯರೂಪಕ್ಕೆ ಬಂದರೆ ಹರಗಿನದೋಣಿ ಗ್ರಾಮಕ್ಕೆ ಕುಡಿಯುವ ನೀರಿನ ಸಮಸ್ಯೆಯಿಂದ ಬಹುಮಟ್ಟಿಗೆ ಮುಕ್ತಿ ಸಿಗಲಿದೆ.

# ಪೊಲೀಸ್-ಸಾರ್ವಜನಿಕರ ಸಮನ್ವಯ ಸಭೆ: ಸುರಕ್ಷಿತ ಸಂಚಾರಕ್ಕೆ ಜಾಗೃತಿ

**ಬಳ್ಳಾರಿ, ಮೇ 26:** ನಗರದ ಗಾಂಧಿನಗರ ಪೊಲೀಸ್ ಠಾಣೆ ವತಿಯಿಂದ ಪೊಲೀಸ್‌ಸಾರ್ವಜನಿಕರ ಸಮನ್ವಯ ಸಭೆಯನ್ನು ಆಯೋಜಿಸಿ ಸಾರ್ವಜನಿಕರ ಸಮಸ್ಯೆಗಳು ಹಾಗೂ ಸ್ಥಳೀಯ ಕುಂದುಕೊರತೆಗಳ ಕುರಿತು ಚರ್ಚಿಸಲಾಯಿತು.

ಸಿದ್ಧಾರ್ಥ ಕಾಲೋನಿಯ ಎಸ್‌ಸಿ/ಎಸ್‌ಟಿ ಮುಖಂಡರನ್ನು ಆಹ್ವಾನಿಸಿ ನಡೆದ ಸಭೆಯಲ್ಲಿ ಪ್ರದೇಶದ ಮೂಲಭೂತ ಸೌಲಭ್ಯಗಳು, ಸಾರ್ವಜನಿಕ ಸುರಕ್ಷತೆ ಹಾಗೂ ಕಾನೂನು ಸುವ್ಯವಸ್ಥೆ ಸಂಬಂಧಿಸಿದ ವಿಷಯಗಳ ಬಗ್ಗೆ ಅಭಿಪ್ರಾಯ ವಿನಿಮಯ ನಡೆಯಿತು. ಸಾರ್ವಜನಿಕರು ತಮ್ಮ ಸಮಸ್ಯೆಗಳು ಹಾಗೂ ಬೇಡಿಕೆಗಳನ್ನು ಪೊಲೀಸ್ ಅಧಿಕಾರಿಗಳ ಗಮನಕ್ಕೆ ತಂದರು.

ಸಭೆಯಲ್ಲಿ ಮಾತನಾಡಿದ ಗಾಂಧಿನಗರ ಪೊಲೀಸ್ ಠಾಣೆಯ ಸರ್ಕಲ್ ಇನ್ಸ್ಪೆಕ್ಟರ್ ರವಿಚಂದ್ರ, ರಸ್ತೆ ಅಪಘಾತಗಳನ್ನು ತಡೆಗಟ್ಟಲು ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ತಿಳಿಸಿದರು. ಸುರಕ್ಷಿತ ವಾಹನ ಚಾಲನೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಸಂಚಾರ ನಿಯಮಗಳನ್ನು ಪಾಲಿಸುವ ಮೂಲಕ ಅಮೂಲ್ಯ ಜೀವಗಳನ್ನು ರಕ್ಷಿಸಬಹುದು ಎಂದು ಹೇಳಿದರು.

ಪೊಲೀಸ್ ಇಲಾಖೆ ಮತ್ತು ಸಾರ್ವಜನಿಕರ ನಡುವೆ ಉತ್ತಮ ಬಾಂಧವ್ಯ ಬೆಳೆಸುವ ಉದ್ದೇಶದಿಂದ ಇಂತಹ ಸಮನ್ವಯ ಸಭೆಗಳು ಅಗತ್ಯವಾಗಿದ್ದು, ಜನರು ಯಾವುದೇ ಸಮಸ್ಯೆಗಳಿದ್ದರೂ ನಿರ್ಭಯವಾಗಿ ಪೊಲೀಸ್ ಠಾಣೆಯನ್ನು ಸಂಪರ್ಕಿಸಬೇಕು ಎಂದು ಅವರು ಮನವಿ ಮಾಡಿದರು.

# ಬಿಡಿಸಿಸಿಐ ಸೇವೆ ಶ್ಲಾಘನೀಯ: ಬಳ್ಳಾರಿ ಮೇಯರ್ ಗಾದೆಪ್ಪ



**ಬಳ್ಳಾರಿ, ಮೇ. 26:** ರಾಜ್ಯ ಸರ್ಕಾರ ಆಯೋಜಿಸಬೇಕಾಗಿರುವ ಕೃಷಿ ಮೇಳವನ್ನು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಆಯೋಜಿಸಿರುವುದು ಅಭಿನಂದನೀಯ ಎಂದು ಮೇಯರ್ ಪಿ. ಗಾದೆಪ್ಪ ಹೇಳಿದ್ದಾರೆ.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನೇತೃತ್ವದಲ್ಲಿ ಜಿಲ್ಲಾಡಳಿತ, ವಿವಿಧ ಇಲಾಖೆಗಳು, ಬಳ್ಳಾರಿ ಎಪಿಎಂಸಿ ದಲ್ಲಾಲಿ ವರ್ತಕರ ಸಂಘ, ಬಳ್ಳಾರಿ ಎಪಿಎಂಸಿ ವರ್ತಕರ ಸಂಘ, ಹತ್ತಿ ಬೆಳೆಗಾರರು ಮತ್ತು ರೈತ ಸಮೂಹಗಳ ಸಹಕಾರದೊಂದಿಗೆ ನಡೆದ 'ಗುಣಮಟ್ಟದ ಬೀಜ ಮತ್ತು ವೈಜ್ಞಾನಿಕ ಬಿತ್ತನೆ' ವಿಷಯದ ಕೃಷಿ ಮೇಳವನ್ನು ಇಂದು ಉದ್ಘಾಟಿಸಿ ಅವರು ಮಾತನಾಡಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಹಕಾರದಲ್ಲಿ 'ರಾಸಾಯನಿಕ ಮುಕ್ತ' ಹಣ್ಣುಗಳು ಮತ್ತು ತರಕಾರಿ ಮಾರಾಟಕ್ಕೆ ಮಹಾನಗರ ಪಾಲಿಕೆಯು 'ರೈತ ಸಂತೆ'ಗಳನ್ನು ಏರ್ಪಡಿಸಲು ಉತ್ಸುಕವಾಗಿದೆ. ಈ ಕುರಿತು ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದರು.

ಬಳ್ಳಾರಿ ಶಾಸಕ ನಾರಾ ಭರತ ರೆಡ್ಡಿ ಅವರು, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಜನಪರ ಕಾಳಜಿ – ಕಳಕಳಿಯು ಗಮನಾರ್ಹ. ಈ ಸಂಸ್ಥೆಯು ಎಲ್ಲಾ ಕ್ಷೇತ್ರಗಳಲ್ಲಿ ಗಮನಾರ್ಹವಾಗಿ ಸೇವೆ ಸಲ್ಲಿಸುತ್ತಿದೆ ಎಂದರು.

ಲಿಡ್ಕರ್ ಅಧ್ಯಕ್ಷರಾದ ಮುಂಡ್ರಗಿ ನಾಗರಾಜ್ ಅವರು, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಜನಪರವಾಗಿರುವ ಸಂಸ್ಥೆಯಾಗಿದೆ. ಈ ಸಂಸ್ಥೆಯು ಹಮ್ಮಿಕೊಂಡಿರುವ ರೈತಣ್ಣ ಊಟ, ರೈತರ ವಸತಿ, ಕೌಶಲ್ಯಾಭಿವೃದ್ಧಿ ಸೆಂಟರ್ ಇನ್ನಿತರೆಗಳು ಎಲ್ಲವೂ ಅನೇಕರಿಗೆ ಅನುಕೂಲಗಳಾಗಿದ್ದು, ಶ್ಲಾಘನೀಯ. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾಗಿರುವ ಕೆ.ಇ. ಚಿದಾನಂದಪ್ಪ ಅವರು, ರೈತರು ಮತ್ತು ಕೃಷಿ ಮುಂದಿನ ಪೀಳಿಗೆ ಗಾಗಿ ಉಳಿಯಲು ಸರ್ಕಾರ ಸ್ವಾಮಿನಾಥನ್ ವರದಿಯನ್ನು ಅನುಷ್ಠಾನ ಮಾಡಬೇಕು ಎಂದು ಹೇಳಿದರು.

ತುಂಗಭದ್ರಾ ರೈತಸಂಘದ ಅಧ್ಯಕ್ಷ ಡಾ. ಪುರುಷೋತ್ತಮ ಗೌಡ, ಶೀಘ್ರದಲ್ಲೇ ಪ್ರಾರಂಭ ವಾಗುವ ತುಂಗಭದ್ರಾ ಹೂಳಿನ ಜಾತ್ರೆ–2026ರಲ್ಲಿ ಎಲ್ಲರೂ ಸಕ್ರಿಯವಾಗಿ ಪಾಲ್ಗೊಂಡು ಮುಂದಿನ ಪೀಳಿಗೆಗಾಗಿ ಜಲಾಶಯವನ್ನು ಸಂರಕ್ಷಣೆ ಮಾಡೋಣ ಮನವಿ ಮಾಡಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾಗಿರುವ ಕೆ.ಎಂ. ಸೋಮಸುಂದರ್ ಅವರು,ರೈತರು ಎಂಎಸ್‌ಪಿ (ಕನಿಷ್ಠ ಬೆಂಬಲ ಬೆಲೆ) ಯ ವ್ಯವಸ್ಥೆಯಲ್ಲಿ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಲು ಆದ್ಯತೆ ನೀಡಬೇಕು. ಆಧುನಿಕ ಮತ್ತು ವೈಜ್ಞಾನಿಕ – ತಂತ್ರಜ್ಞಾನವನ್ನು ಬಳಕೆ ಮಾಡಿಕೊಂಡು ದೃಢೀಕೃತ ಬೀಜಗಳನ್ನು ಖರೀದಿಸಿ, ಬಿತ್ತನೆ ಮಾಡಬೇಕು ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ಸ್ವಾಗತಿಸಿ, ಕೃಷಿ ಮೇಳವು ವರ್ಷದಿಂದ ವರ್ಷ ದೊಡ್ಡ ಪ್ರಮಾಣದಲ್ಲಿ ಬೆಳೆಯಲಿದೆ. ಮುಂದಿನ ದಿನಗಳಲ್ಲಿ ಮೂರು ದಿನಗಳ ಮೇಳವನ್ನು ಏರ್ಪಡಿಸುವ ಚಿಂತನೆ ಇದೆ ಎಂದರು.

ಡಾ. ಶ್ರೀನಿವಾಸ ರೆಡ್ಡಿ ಕಾರ್ಯಕ್ರಮ ನಿರೂಪಿಸಿದರು. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿ ಕೆ.ಸಿ. ಸುರೇಶಬಾಬು ಅವರು ವಂದನಾರ್ಪಣೆ ಸಲ್ಲಿಸಿದರು.

# ಪಿಡಿಎ ಇಂಜಿನಿಯರಿಂಗ್ ಕಾಲೇಜಿನಲ್ಲಿ ಆವಿಷ್ಕಾರ ಉತ್ಸವ; ವಿಜ್ಞಾನದ ಮೂಲಜ್ಞಾನ ಅರಿಯಲು ಡಾ.ಪ್ರಕಾಶ ಬಾಲಸುಬ್ರಮಣಿಯನ್ ಕರೆ

**ಕಲಬುರಗಿ, ಮೇ. 26:** ಜಗತ್ತಿನಲ್ಲಿ ಹಲವು ಆವಿಷ್ಕಾರ, ಸಂಶೋಧನೆಗಳು ನಿತ್ಯ ನಡೆಯುತ್ತಲೇ ಇರುತ್ತವೆ. ಎಲ್ಲವಕ್ಕೂ ಮೂಲಜ್ಞಾನವನ್ನು ಅರಿತು ಕಾರ್ಯಪ್ರವೃತ್ತರಾದಾಗ ಖಂಡಿತವಾಗಿಯೂ ಅದರಲ್ಲಿ ಯಶಸ್ಸು ಸಾಧ್ಯವಾಗಲಿದೆ ಎಂದು ಪಿಡಿಎ ಕಾಲೇಜಿನ ಹಳೇ ವಿದ್ಯಾರ್ಥಿ, ಇನ್‌ಫಿನಿಯೋನ್ ಟೆಕ್ನಾಲಜಿಯ ನಿರ್ದೇಶಕ ಡಾ.ಪ್ರಕಾಶ ಬಾಲಸುಬ್ರಮಣಿಯನ್ ಹೇಳಿದರು.

ನಗರದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಪಿಡಿಎ ಇಂಜಿನಿಯರಿಂಗ್ ಕಾಲೇಜಿನ ಸ್ಯಾಕ್ ಸಭಾಂಗಣದಲ್ಲಿ ಏರ್ಪಡಿಸಿದ್ದ ನಿರ್ಮಾಣ ತಾಂತ್ರಿಕ, ಸಾಂಸ್ಕೃತಿಕ ಉತ್ಸವದಲ್ಲಿ ಗೌರವ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, 1958ರಲ್ಲಿ ಪ್ರಥಮ ಬಾರಿಗೆ ಸರ್ಕ್ಯೂಟ್ ಸಂಶೋಧಿಸಲಾಯಿತು. ಅದಕ್ಕೆ ಕಾಲಕ್ಕೆ ತಕ್ಕಂತೆ ಮರುಪರಿಷ್ಕರಿಸಿ, ಹೊಸ ರೂಪ ನೀಡಲಾಯಿತು. ಇಂತಹ ಮಹತ್ವದ ಘಟನೆಗಳನ್ನು ಅರಿತಾಗ ಆವಿಷ್ಕಾರದ ಯೋಜನೆಗಳು ಬರಲಿವೆ ಎಂದರು.

ನಗರದ ಕಾನೂನು ಮತ್ತು ಸುವ್ಯವಸ್ಥೆ ಡಿಸಿಪಿ ಶಾಲೂ ಮಾತನಾಡಿ, ವಿದ್ಯಾರ್ಥಿಗಳು ಕಾಲಕ್ಕೆ ತಕ್ಕಂತೆ ಪ್ರಾಯೋಗಿಕ ಜ್ಞಾನ ಅರಿತು, ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಬೋಧನೆಯ ಜತೆಗೆ ನಿತ್ಯ ಜೀವನಕ್ಕೆ ಬೇಕಾದ ಅಗತ್ಯತೆಗಳನ್ನು ಅರಿತಾಗ ಅನುಕೂಲವಾಗಲಿದೆ. ಡ್ರೋನ್, ಎಐ, ಸೈಬರ್, ಮಶೀನ್ ಲರ್ನಿಂಗ್ ಸೇರಿದಂತೆ ನಿತ್ಯ ಜೀವನದ ಪ್ರಮುಖ ವಿಷಯ ಅರಿತು, ಕೆಲಸ ಮಾಡಬೇಕು ಎಂದರು.

ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆ ಅಧ್ಯಕ್ಷರೂ ಆದ ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಮಾತನಾಡಿ, ಪಿಡಿಎ ಕಾಲೇಜಿನಲ್ಲಿ ಭವಿಷ್ಯ ನಿರ್ಮಾಣಕ್ಕೆ ಕ್ರಿಯಾಶೀಲ ವಿದ್ಯಾರ್ಥಿಗಳನ್ನು ಸೃಷ್ಟಿಸುವ ಕಾರ್ಯ ನಡೆಯುತ್ತಿದೆ. ನಾಯಕತ್ವಕ್ಕೆ ಉತ್ಸವಗಳಿಂದ ಬಲ ಬರಲಿದೆ. ಪ್ರತಿಭೆ ಹೊರ ಹೊಮ್ಮಲು ಉತ್ಸವ ಒಂದು ಅತ್ಯುತ್ತಮ ವೇದಿಕೆಯಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದಂತೆ ಜಾಗತಿಕ ಮಟ್ಟದಲ್ಲಿ ಪ್ರಸಕ್ತ ದಶಕವೂ ಭಾರತದ್ದಾಗಿದೆ. ತಂತ್ರಜ್ಞಾನ ಬದಲಾವಣೆಗೆ ಎಐ, ಬಾಹ್ಯಾಕಾಶ, ಡಿಜಿಟಲ್, ಗ್ರೀನ್ ಎನರ್ಜಿ ಸೇರಿ ಮಹತ್ವದ ಕ್ಷೇತ್ರಗಳಲ್ಲಿ ತಂತ್ರಜ್ಞಾನ ನಿರ್ಣಾಯಕ ಪಾತ್ರ ವಹಿಸುತ್ತಿದೆ. ಇಂಜಿನಿಯರಿಂಗ್ ಕೇವಲ ಉದ್ಯೋಗವಲ್ಲ, ಪರಿಹಾರ ಹುಡುಕುವ, ಆವಿಷ್ಕಾರಗಳ ಮೂಲವಿದ್ದಂತೆ ಎಂದರು.

ಎಚ್‌ಕೆಇ ಸಂಸ್ಥೆಯ ಉಪಾಧ್ಯಕ್ಷ ರಾಜಾ ಭೀಮಳ್ಳಿ, ಆಡಳಿತ ಮಂಡಳಿ ಸದಸ್ಯರಾದ ಡಾ.ಶರಣಬಸಪ್ಪ ಆರ್. ಹರವಾಳ, ಡಾ.ಅನೀಲಕುಮಾರ ಬಿ. ಪಟ್ಟಣ, ಡಾ.ಮಹಾದೇವಪ್ಪ ರಾಂಪೂರೆ, ಸಾಯಿನಾಥ ಪಾಟೀಲ್, ಡಾ.ಅನಿಲ ಕುಮಾರ್ ಪಟ್ಟಣ, ಡಾ.ಕಿರಣ ದೇಶಕುಂ, ನಾಗಣ್ಣ ಲೆಂಗಟಿ, ನಿಶಾಂತ ಜಿ ಯೇಲಿ, ಡಾ.ಎಸ್.ಆರ್.ಹೊಟ್ಟಿ, ಉಪಪ್ರಾಂಶುಪಾಲ ಡಾ.ಭಾರತಿ ಹರಸೂರ ಇತರರಿದ್ದರು. ಪ್ರಾಂಶುಪಾಲ ಡಾ.ಎಸ್.ಆರ್.ಪಾಟೀಲ್ ಸ್ವಾಗತಿಸಿದರು. ಸಂಯೋಜಕ ಜಯಪ್ರಕಾಶ ಎ.ಕೆ. ಪ್ರಾಸ್ತಾವಿಕ ಮಾತನಾಡಿದರು.



2027ಕ್ಕೆ ಐಟಿ ಪಾರ್ಕ್ ಲೋಕಾರ್ಪಣೆ ಕಲ್ಯಾಣ ಕರ್ನಾಟಕ ಭಾಗದಲ್ಲೇ ಪ್ರಪ್ರಥಮ ಐಟಿ ಪಾರ್ಕ್ ಪಿಡಿಎ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಿರ್ಮಾಣಕ್ಕೆ ನಿರ್ಧರಿಸಿದ್ದು, 2027ಕ್ಕೆ ಲೋಕಾರ್ಪಣೆ ಮಾಡಲಾಗುವುದು. ಪಾರ್ಕ್‌ನಲ್ಲಿ ಸ್ಟಾರ್ಟ್‌ಪ್, ಕಂಪನಿಗಳಿಗೆ ಸ್ಥಳ, ಸಂದರ್ಶನ ಕೋಣೆ, ಚರ್ಚಾ ಕೋಣೆ ಸೇರಿ 35 ಸಾವಿರ ಚದರ ಅಡಿಯ ಅತ್ಯಾಧುನಿಕ ಕಟ್ಟಡ ನಿರ್ಮಿಸುತ್ತಿದ್ದು, ವಿದ್ಯಾರ್ಥಿಗಳಿಗೆ ಉದ್ಯೋಗ, ಕೌಶಲ, ಆವಿಷ್ಕಾರ, ಸಂಹವನ ವೃದ್ಧಿಗೆ ಬಲ ಬರಲಿದೆ. –ಶಶೀಲ ನಮೋಶಿ, ಎಂಎಲ್‌ಸಿ.

**ಸಾಂಸ್ಕೃತಿಕ ಕಲರವ:** ನಿರ್ಮಾಣ ಉತ್ಸವದ ನಿಮಿತ್ತ ಪಿಡಿಎ ಇಂಜಿನಿಯರಿಂಗ್ ಕಾಲೇಜಿನಲ್ಲಿ ಶುಕ್ರವಾರ ಬೆಳಗ್ಗೆಯಿಂದಲೇ ಇಡೀ ದಿನ ಸಾಂಸತಿಕ ಕಲರವ ನಡೆಯಿತು. ಬೆಳಗ್ಗೆ ವಿದ್ಯಾರ್ಥಿಗಳಿಂದ ಬೃಹತ್ ಮ್ಯಾರಾಥಾನ್ ಓಟ ನಡೆಯಿತು. ಮಾರ್ಗ ಮಧ್ಯೆ ಪ್ಲಾ$ಷ್ ಮಾಬ್ ರೂಪಿಸಿ, ನೃತ್ಯ ಮಾಡಿ, ಸಂಭ್ರಮಿಸಲಾಯಿತು.

ಪ್ರಸ್ತುತ ಅಟೋಮೆಟೆಡ್ ಕಾರ್‌ಗಳು ಬಂದಿವೆ. ಒಂದು ಕಾರ್ ಸಿದ್ಧಪಡಿಸಲು ಇಂಜಿನಿಯರಿಂಗ್‌ನ ಭಾಗಶಃ ಎಲ್ಲ ವಿಭಾಗಗಳ ತಂತ್ರಜ್ಞರ ಅವಶ್ಯಕತೆ ಇದೆ. ಆದ್ದರಿಂದ ಜಗತ್ತಿನಲ್ಲಿ ಪ್ರಸ್ತುತ ಏನು ನಡೆಯುತ್ತಿದೆ ಎಂಬುದನ್ನು ಅರಿತು, ಅದಕ್ಕೆ ತಕ್ಕಂತೆ ಆವಿಷ್ಕಾರದಲ್ಲಿ ತೊಡಗಿಸಿಕೊಳ್ಳಬೇಕು. – ಡಾ.ಪ್ರಕಾಶ ಬಾಲಸುಬ್ರಮಣಿಯನ್

ನಂತರ ಟೆಕ್ನೋ ವಿಷನ್ ಹ್ಯಾಕಾಥಾನ್ ಸೇರಿ ವಿವಿಧ ತಾಂತ್ರಿಕ ಸ್ಪರ್ಧೆಗಳು ನಡೆದವು. ಮಧ್ಯಾಹ್ನ ಡಿಜೆ ಸದ್ದಿನೊಂದಿಗೆ ಸಂಭ್ರಮ ನಡೆದರೆ. ರಾತ್ರಿ ವಿದ್ಯಾರ್ಥಿಗಳು, ಕಲಾವಿದರಿಂದ ಸಾಂಸತಿಕ ಕಲರವದ ಕಾರ್ಯಕ್ರಮಗಳು ಉತ್ಸವದ ಮೆರಗು ಹೆಚ್ಚಿಸಿದ್ದು, ವಿದ್ಯಾರ್ಥಿಗಳು ಕುಣಿದು ಕುಪ್ಪಳಿಸಿ, ಸಂಭ್ರಮಿಸಿದರು.

### ಚಾಮುಂಡೇಶ್ವರಿ ಸನ್ನಿಧಿಯಲ್ಲಿ ಕ್ಷಮೆಯಾಚಿಸಿದ ರಣವೀರ್‌ಸಿಂಗ್

# ತಮ್ಮ ಹೇಳಿಕೆಗೆ ಪಶ್ಚಾತ್ತಾಪ, ಕೋರ್ಟ್ ನೀಡಿದ್ದ ಭರವಸೆ ಈಡೇರಿಸಿದ ನಟ

**ಮೈಸೂರು, ಮೇ 26:** ಬಾಲಿವುಡ್‌ನ ಖ್ಯಾತ ನಟ ರಣವೀರ್ ಸಿಂಗ್ ಮೈಸೂರಿನ ಐತಿಹಾಸಿಕ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ, ನಾಡದೇವತೆ ತಾಯಿ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿದರು. ಈ ಭೇಟಿಯು ಕೇವಲ ಧಾರ್ಮಿಕ ಪ್ರವಾಸವಾಗಿರಲಿಲ್ಲ. ಅವರ ವಿರುದ್ಧ ಎದ್ದಿದ್ದ ಹಳೆಯ ವಿವಾದವೊಂದರ ಹಿನ್ನೆಲೆಯಲ್ಲಿ ಕೋರ್ಟ್‌ಗೆ ನೀಡಿದ್ದ ಭರವಸೆಯ ಈಡೇರಿಕೆಯಾಗಿದೆ ಎಂಬುದು ವಿಶೇಷ.

ಈ ಹಿಂದೆ ಕಾರ್ಯಕ್ರಮವೊಂದರಲ್ಲಿ ನಟ ರಣವೀರ್ ಸಿಂಗ್ ಅವರು ಚಾಮುಂಡೇಶ್ವರಿ ಸೇರಿ ಕೆಲವು ದೇವತೆಗಳ ಕುರಿತು ಆಕ್ಷೇಪಾರ್ಹವಾಗಿ ಮಾತನಾಡಿದ್ದರು ಎಂಬ ಆರೋಪ ಹೊತ್ತಿದ್ದರು. ಅವರ ಹೇಳಿಕೆಯು ಸಾರ್ವಜನಿಕವಾಗಿ ಭಾರಿ ಆಕ್ರೋಶಕ್ಕೆ ಕಾರಣವಾಗಿತ್ತು. ನಂತರ ಪ್ರಕರಣವು ನ್ಯಾಯಾಲಯದ ಮೆಟ್ಟಿಲೇರಿತ್ತು. ಈ ಕಾನೂನು ಹೋರಾಟದ ವೇಳೆ, ರಣವೀರ್ ಸಿಂಗ್ ಪರ ವಕೀಲರು ನ್ಯಾಯಾಲಯಕ್ಕೆ ಮಹತ್ವದ ಹೇಳಿಕೆಯೊಂದನ್ನು ನೀಡಿದ್ದರು. ತಮ್ಮ ಕಕ್ಷಿದಾರರು ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಖುದ್ದಾಗಿ ಭೇಟಿ ನೀಡಿ, ದೇವಿಯ ಸನ್ನಿಧಿಯಲ್ಲಿ ಕ್ಷಮೆ ಕೋರಲಿದ್ದಾರೆ ಎಂದು ವಕೀಲರು ಕೋರ್ಟ್‌ಗೆ ತಿಳಿಸಿದ್ದರು.

ನ್ಯಾಯಾಲಯಕ್ಕೆ ನೀಡಿದ್ದ ಭರವಸೆಯಂತೆಯೇ ಮಂಗಳವಾರ ಚಾಮುಂಡಿ ಬೆಟ್ಟಕ್ಕೆ ಆಗಮಿಸಿದ ರಣವೀರ್ ಸಿಂಗ್, ಯಾವುದೇ ಸೆಲೆಬ್ರಿಟಿ ಹಮ್ಮಿಲ್ಲದೆ ತೀರಾ ಸಾಮಾನ್ಯರಂತೆ ಬೆಟ್ಟಕ್ಕೆ ಭೇಟಿ ನೀಡಿದರು. ದೇವಸ್ಥಾನದಲ್ಲಿ ದೇವಿಯ ಉತ್ಸವ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಿದ ಅವರು, ಗರ್ಭಗುಡಿಯ ಬಳಿ ಅತ್ಯಂತ ಭಕ್ತಿಭಾವದಿಂದ ಕುಳಿತು ಪ್ರಾರ್ಥನೆ ಸಲ್ಲಿಸಿದರು. ಈ ಮೂಲಕ ತಮ್ಮ ಹಳೆಯ ಹೇಳಿಕೆಗೆ ದೇವಿಯ ಸನ್ನಿಧಿಯಲ್ಲಿ ಪಶ್ಚಾತ್ತಾಪ ವ್ಯಕ್ತಪಡಿಸಿ, ಕ್ಷಮೆಯಾಚಿಸಿದ್ದಾರೆ.

ಯಾವುದೇ ಮುನ್ಸೂಚನೆ ಇಲ್ಲದೆ ಹಠಾತ್ತನೆ ಬಾಲಿವುಡ್ ತಾರೆ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿದ್ದು, ಅಲ್ಲಿ ನೆರೆದಿದ್ದ ಭಕ್ತರಲ್ಲಿ ಮತ್ತು ಅವರ ಅಭಿಮಾನಿಗಳಲ್ಲಿ ಆಶ್ಚರ್ಯ ಮೂಡಿಸಿತ್ತು. ನಟ ರಣವೀರ್ ಸಿಂಗ್ ವಿರುದ್ಧ ಫೆಡರೇಶನ್ ಆಫ್ ವೆಸ್ಟರ್ನ್ ಇಂಡಿಯಾ ಸಿನಿ ಎಂಪ್ಲಾಯೀಸ್ ಮಹತ್ವದ ನಿರ್ಧಾರ ಕೈಗೊಂಡಿದೆ. ಅವರ ಸಿನಿಮಾಗಳಲ್ಲಿ ಕೆಲಸ ಮಾಡದಂತೆ ತನ್ನ ಸದಸ್ಯರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದೆ. ನಿರ್ದೇಶಕ ಫರ್ಹಾನ್ ಅಖ್ತರ್ ನೀಡಿದ ದೂರಿನ ಹಿನ್ನೆಲೆಯಲ್ಲಿ ಸಿನಿಮಾ ನೌಕರರ ಒಕ್ಕೂಟವು ಈ ಕಠಿಣ ಕ್ರಮಕ್ಕೆ ಮುಂದಾಗಿದೆ. ಫರ್ಹಾನ್ ಅಖ್ತರ್ ನಿರ್ದೇಶನದ ಬಹುನಿರೀಕ್ಷಿತ 'ಡಾನ್ 3' ಚಿತ್ರದಲ್ಲಿ ರಣವೀರ್ ಸಿಂಗ್ ನಾಯಕನಾಗಿ ನಟಿಸಬೇಕಿತ್ತು. ಆದರೆ, ಚಿತ್ರದ ಶೂಟಿಂಗ್ ಆರಂಭವಾಗಲು ಕೆಲವೇ ದಿನಗಳು ಬಾಕಿ ಇರುವಾಗ ರಣವೀರ್ ಸಿಂಗ್ ಕೊನೆಯ ಕ್ಷಣದಲ್ಲಿ ಚಿತ್ರದಿಂದ ಹಿಂದೆ ಸರಿದಿದ್ದರು ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಫರ್ಹಾನ್ ಅಖ್ತರ್ ಅವರು ಏಪ್ರಿಲ್ 11, 2026 ರಂದು ಭಾರತೀಯ ಚಲನಚಿತ್ರ ಮತ್ತು ದೂರದರ್ಶನ ನಿರ್ದೇಶಕರ ಸಂಘದ ಮುಂದೆ ದೂರು ದಾಖಲಿಸಿದ್ದರು. ಬಳಿಕ ಮುಂದಿನ ಕ್ರಮಕ್ಕಾಗಿ ಈ ಪ್ರಕರಣವನ್ನು ಈಫಾಖಅಇ ಗೆ ವರ್ಗಾಯಿಸಲಾಗಿತ್ತು. ರಣವೀರ್ ಸಿಂಗ್ ಅವರ ಈ ಬೇಜವಾಬ್ದಾರಿ ಮತ್ತು ಉಡಾಫೆಯ ಪ್ರತಿಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಿರುವ ಅವರ ವಿರುದ್ಧ 'ಅಸಹಕಾರ' ನಿರ್ದೇಶನವನ್ನು ಹೊರಡಿಸಿದೆ. ಇದರನ್ವಯ ಒಕ್ಕೂಟದ ಸದಸ್ಯರಾಗಿರುವ ಯಾವುದೇ ಚಲನಚಿತ್ರ ಕಾರ್ಮಿಕರು, ತಾಂತ್ರಿಕ ಸಿಬ್ಬಂದಿ ಅಥವಾ ನೌಕರರು ರಣವೀರ್ ಸಿಂಗ್ ಅವರ ಮುಂಬರುವ ಯಾವುದೇ ಸಿನಿಮಾಗಳಲ್ಲಿ ಕೆಲಸ ಮಾಡುವುದಿಲ್ಲ ಎಂದು ಅಧಿಕೃತವಾಗಿ ಪ್ರಕಟಿಸಿದೆ.



### ಬೀದರ್ ಪಶುವೈದ್ಯಕೀಯ ವಿಶ್ವವಿದ್ಯಾಲಯ

# 45 ಕೋಟಿ ಹಗರಣ: ಮಾಜಿ ಕುಲಪತಿ ಸೇರಿ 6 ಮಂದಿ ಬಂಧನ

**ಬೀದರ್, ಮೇ. 26:** ಇಲ್ಲಿನ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಕಲಿ ಬಿಲ್ ಸೃಷ್ಟಿಸಿ 45 ಕೋಟಿ ಹಗರಣ ಮಾಡಿ, ಅಕ್ರಮ ಎಸಗಿರುವ ಆರೋಪದ ಮೇರೆಗೆ ಲೋಕಾಯುಕ್ತ ಪೊಲೀಸರು ವಿವಿ ವಿಶ್ರಾಂತ ಕುಲಪತಿ, ನಿವೃತ್ತ ಕಂಟ್ರೋಲರ್ ಸೇರಿದಂತೆ ಆರು ಜನರನ್ನು ಬಂಧಿಸಿದ್ದಾರೆ.

ವಿಶ್ರಾಂತ ಕುಲಪತಿ ಪ್ರೊ.ಎಚ್.ಡಿ. ನಾರಾಯಣಸ್ವಾಮಿ, ನಿವೃತ್ತ ಪ್ರಭಾರ ಹಣಕಾಸು ನಿಯಂತ್ರಣಾಧಿಕಾರಿ ಪ್ರೊ. ಕೆ.ಎಲ್. ಸುರೇಶ್, ಎಫ್.ಡಿ.ಎ. ಮೃತ್ಯುಂಜಯ ಹಿರೇಮಠ, ಬೆಂಗಳೂರು ಎಂಟರ್‌ಪ್ರೈಸೆಸ್ ಮಾಲೀಕರಾದ ಬೊಪ್ಪಣ್ಣ, ಮಂಜುನಾಥ ಹಾಗೂ ರಾಮಗೊಂಡ ಅವರು ಲೋಕಾಯುಕ್ತರಿಂದ ಬಂಧಿತರಾಗಿದ್ದಾರೆ. ಇವರುಗಳ ವಿರುದ್ಧ 2017–18ರಲ್ಲಿ 45 ಕೋಟಿಗೂ ಅಧಿಕ ಹಣ ನಕಲಿ ಬಿಲ್ ಸೃಷ್ಟಿಸಿ ಅಕ್ರಮ ಎಸಗಿರುವ ಆರೋಪವಿದೆ. ಈ ಅವಧಿಯಲ್ಲಿ ನಾರಾಯಣಸ್ವಾಮಿ ಕುಲಪತಿ, ಕೆ.ಎಲ್.ಸುರೇಶ್ ಕಂಟ್ರೋಲರ್ ಆಗಿದ್ದರು. ವಿವಿ ಎಫ್.ಡಿ.ಎ. ಮೃತ್ಯುಂಜಯ ಹಿರೇಮಠ ಅವರು ಬೆಂಗಳೂರಿನ ಖಾಸಗಿ ಎಂಟರ್ ಪ್ರೈಸೆಸ್ ಜೊತೆಯಲ್ಲಿ ಸೇರಿಕೊಂಡು ಅಕ್ರಮ ಎಸಗಿರುವ ಆರೋಪವಿದೆ ಎಂದು ಲೋಕಾಯುಕ್ತ ಪೊಲೀಸ್ ಮೂಲಗಳು ತಿಳಿಸಿವೆ. ಪ್ರಕರಣ ಸಂಬಂಧ ನ್ಯಾಯಾಲಯ ವಾರಂಟ್ ಜಾರಿಗೊಳಿಸಿತ್ತು. ಇದರ ಬೆನ್ನಲ್ಲೇ ಸಕ್ರಿಯವಾದ ಲೋಕಾಯುಕ್ತ ಪೊಲೀಸರು ಕೆಲವರನ್ನು ಬೀದರ್ ಹಾಗೂ ಕೆಲ ಆರೋಪಿಗಳನ್ನು ಬೆಂಗಳೂರಿನಲ್ಲಿ ಬಂಧಿಸಿ ಬೀದರ್ ನ್ಯಾಯಾಲಯಕ್ಕೆ ಕರೆತಂದಿದ್ದಾರೆ.



### ಗಡಿಭಾಗದಲ್ಲಿ ಕನ್ನಡ ಭಾಷೆ ಇನ್ನೂ ಉಳಿದಿದ್ದರೆ ಇದಕ್ಕೆ ಕನ್ನಡಪರ ಹೋರಾಟಗಾರರೇ ಕಾರಣ

# ಬೆಳಗಾವಿಯ ಇಂದಿನ ಸ್ಥಿತಿಗೆ ರಾಜಕಾರಣಿಗಳೇ ಕಾರಣ: ವಾಟಾಳ್ ನಾಗರಾಜ್

**ಬೆಳಗಾವಿ, ಮೇ 26:** ಬೆಳಗಾವಿಯ ಇಂದಿನ ಪರಿಸ್ಥಿತಿಗೆ ಇಲ್ಲಿನ ನೀಚ ರಾಜಕಾರಣಿಗಳೇ ಕಾರಣ ಎಂದು ಕಿಡಿಕಾರಿದ ವಾಟಾಳ್ ನಾಗರಾಜ್, ಇವತ್ತು ಗಡಿಭಾಗದಲ್ಲಿ ಕನ್ನಡ ಭಾಷೆ ಇನ್ನೂ ಉಳಿದುಕೊಂಡಿದೆ ಎಂದರೆ ಅದಕ್ಕೆ ಇಲ್ಲಿನ ರಾಜಕಾರಣಿಗಳಲ್ಲ, ಬದಲಿಗೆ ಕನ್ನಡ ಚಳವಳಿಗಾರರು ಮತ್ತು ಹೋರಾಟಗಾರರೇ ಕಾರಣ ಎಂದರು.

ಬೆಳಗಾವಿಯಲ್ಲಿ ಮಾತನಾಡಿದ ಅವರು, ಬೆಳಗಾವಿಯಲ್ಲಿ 29ಕ್ಕೂ ಹೆಚ್ಚು ಕನ್ನಡಪರ ಸಂಘಟನೆಗಳು ಒಟ್ಟಾಗಿ ಹೋರಾಟಕ್ಕೆ ಕೈಜೋಡಿಸಿದ್ದು, ಇನ್ಮುಂದೆ ಈ ನೆಲದಿಂದಲೇ ಹೊಸ ಕನ್ನಡ ಕ್ರಾಂತಿ ಆರಂಭವಾಗಲಿದೆ ಎಂದು ಘೋಷಿಸಿದರು.ಪ್ರಸ್ತುತ ರಾಜಕಾರಣಿಗಳ ಅಧಿಕಾರದ ಆಟವನ್ನು ಪರೋಕ್ಷವಾಗಿ ಟೀಕಿಸಿದ ಅವರು, ದೇಶದಲ್ಲಿ ಕನ್ನಡದ ಹೆಸರಿನಲ್ಲಿಯೇ ಸರ್ಕಾರ ಅಧಿಕಾರಕ್ಕೆ ಬರಬೇಕು. ವಿಧಾನಸೌಧದಲ್ಲಿ ಕನ್ನಡಪರ ಸಂಘಟನೆಗಳಿಗೆ ಪ್ರತ್ಯೇಕವಾದ ವಿಶೇಷ ಕೊಠಡಿ ಕೊಡಬೇಕು. ಕನ್ನಡದ ಕೆಲಸಗಳಿಗಾಗಿ ವರ್ಷಕ್ಕೆ ಒಂದು ಕೋಟಿ ರೂಪಾಯಿ ಅನುದಾನ ನೀಡಬೇಕು ಹಾಗೂ ಪ್ರೆಸ್ ಕ್ಲಬ್‌ಗೆ ಐದು ಕೋಟಿ ರೂಪಾಯಿ ಧನಸಹಾಯ ಕೊಡಬೇಕು. ಇವೆಲ್ಲವೂ ಸಾಕಾರಗೊಳ್ಳಬೇಕಾದರೆ ನಾನು ಮುಖ್ಯಮಂತ್ರಿ ಆಗಬೇಕು, ಮುಂದಿನ ಬಾರಿ ನಾನೇ ಸಿಎಂ ಆಗುತ್ತೇನೆ ಎಂದು ಹೇಳಿದರು.

ಬೆಳಗಾವಿ ಮಹಾನಗರ ಪಾಲಿಕೆಯ ವಿರುದ್ಧ ಹರಿಹಾಯ್ದ ವಾಟಾಳ್ ನಾಗರಾಜ್, "ಬೆಳಗಾವಿ ಎನ್ನುವುದು ಕರ್ನಾಟಕದ ಅವಿಭಾಜ್ಯ ಅಂಗ" ಎಂಬ ಅಧಿಕೃತ ನಿರ್ಣಯವನ್ನು ಪಾಲಿಕೆಯು ಜೂನ್ 2ರೊಳಗಾಗಿ ಕಡ್ಡಾಯವಾಗಿ ಅಂಗೀಕರಿಸಬೇಕು ಎಂದು ಗಡುವು ನೀಡಿದ್ದಾರೆ.

ಒಂದು ವೇಳೆ ನಿಗದಿತ ಸಮಯದೊಳಗೆ ಈ ನಿರ್ಣಯವನ್ನು ಕೈಗೊಳ್ಳದಿದ್ದರೆ, ಬೆಳಗಾವಿ ನಗರ ಹಿಂದೆಂದೂ ಕಂಡರಿಯದಂತಹ ಭೀಕರ ಕ್ರಾಂತಿಗೆ ಸಾಕ್ಷಿಯಾಗಬೇಕಾಗುತ್ತದೆ ಎಂದು ಅವರು ಸರ್ಕಾರಕ್ಕೆ ಮತ್ತು ಪಾಲಿಕೆಗೆ ಕಠಿಣ ಎಚ್ಚರಿಕೆ ನೀಡಿದರು. ಇದರ ಮುಂದುವರಿದ ಭಾಗವಾಗಿ ಜೂನ್ 4ರಂದು ಬೆಂಗಳೂರಿನಲ್ಲಿ ರಾಜ್ಯಮಟ್ಟದ ಎಲ್ಲಾ ಪ್ರಮುಖ ಕನ್ನಡಪರ ಸಂಘಟನೆಗಳ ಮಹತ್ವದ ಸಭೆ ಕರೆಯಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಜೂನ್ 4ರಂದು ಬೆಂಗಳೂರಿನಲ್ಲಿ ನಡೆಯಲಿರುವ ಸಭೆಯ ಬಳಿಕ ಅಖಂಡ ಕರ್ನಾಟಕ ಬಂದ್‌ಗೆ ಅಧಿಕೃತವಾಗಿ ಕರೆ ನೀಡುವುದಾಗಿ ವಾಟಾಳ್ ನಾಗರಾಜ್ ಸುಳಿವು ನೀಡಿದ್ದಾರೆ. ಈ ಬಾರಿ ಕರ್ನಾಟಕ ಬಂದ್ ಕರೆಯನ್ನು ಬೆಳಗಾವಿ ನೆಲದಿಂದಲೇ ಆರಂಭಿಸಲಾಗುವುದು. ರಾಜ್ಯದ ಇತಿಹಾಸದಲ್ಲಿಯೇ ನಡೆದಿರದಂತಹ ಬೃಹತ್ ಮಟ್ಟದ ಹೋರಾಟ ರೂಪಿಸಲು ಎಲ್ಲಾ ಸಂಘಟನೆಗಳನ್ನು ಒಂದೇ ಸೂರಿನಡಿ ತರಲಾಗುತ್ತಿದೆ. ಬಂದ್ ದಿನದಂದು ತಾವೇ ಖುದ್ದಾಗಿ ಬೆಳಗಾವಿಗೆ ಬಂದು ಇಲ್ಲಿನ ಬೀದಿ ಬೀದಿಗಳಲ್ಲಿ ಬೃಹತ್ ಮೆರವಣಿಗೆ ನಡೆಸಿ ಸರ್ಕಾರದ ಮೇಲೆ ತೀವ್ರ ಒತ್ತಡ ತರುವುದಾಗಿ ಹೇಳಿದರು. ಇಷ್ಟೆಲ್ಲಾ ಮಾಡಿದ ಮೇಲೂ ಸರ್ಕಾರ ಎಚ್ಚೆತ್ತುಕೊಳ್ಳದಿದ್ದರೆ, ಪಾಲಿಕೆಯ ಎಲ್ಲಾ ಸದಸ್ಯರನ್ನು ಮನೆಗೆ ಕಳುಹಿಸುವ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ವಾಟಾಳ್ ನಾಗರಾಜ್ ಎಚ್ಚರಿಸಿದ್ದಾರೆ.

**ರಾಜ್ಯದ ಸಮಸ್ಯೆ ಬಗೆಹರಿಸಲು ನಾನೇ ಸಿಎಂ ಆಗ್ತೇನೆ**

ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಸಿಎಂ ಬದಲಾವಣೆ ಮತ್ತು 2.5 ವರ್ಷಗಳ ಅಧಿಕಾರ ಹಂಚಿಕೆಯ ಸೂತ್ರದ ಕುರಿತು ದಿನನಿತ್ಯ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಬಣಗಳ ನಡುವೆ ಒಳಜಗಳ, ಬಹಿರಂಗ ಹೇಳಿಕೆಗಳು ಜೋರಾಗಿಯೇ ಕೇಳಿಬರುತ್ತಿವೆ. ಹೈಕಮಾಂಡ್ ಮಟ್ಟದಲ್ಲೂ ಸಿಎಂ ಕುರ್ಚಿ ಬದಲಾವಣೆಯ ಕೂಗು ಜೋರಾಗಿರುವ ಬೆನ್ನಲ್ಲೇ, ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಗಡಿಜಿಲ್ಲೆ ಬೆಳಗಾವಿಯಲ್ಲಿ ನಿಂತು ಹೇಳಿರುವ ಮಾತು ಗಮನಸೆಳೆದಿದೆ. ಈ ಬಗ್ಗೆ ರಾಜ್ಯದಲ್ಲಿ ಸಾಕಷ್ಟು ಕೆಲಸ, ಕಾಮಗಾರಿಗಳು ಆಗಬೇಕಿದೆ. ಹೀಗಾಗಿ ಇವೆಲ್ಲ ಆಗಬೇಕಾದರೆ ಮುಂದಿನ ಬಾರಿ ನಾನೇ ಮುಖ್ಯಮಂತ್ರಿ ಆಗ್ತೇನೆ ಎಂದು ವಾಟಾಳ್ ನಾಗರಾಜ್ ಹೇಳಿದ್ದಾರೆ.






ಬೀದರ್ ಜಿಲ್ಲೆಯಲ್ಲಿ ನಡೆದ ಕಬಡ್ಡಿ ಆಟಗಾರ್ತಿ ಶೋಭಾ ಅವರ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ನ್ಯಾಯ ಒದಗಿಸುವಂತೆ ಒತ್ತಾಯಿಸಿ ದಲಿತ ಸಂಘಟನೆಗಳ ಒಕ್ಕೂಟದ ಸದಸ್ಯರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ ನಡೆಸಿದರು.

# ಅಭಿವೃದ್ಧಿಗೆ ಕಾರ್ಯನಿರ್ವಹಿಸಿದ ತೃಪ್ತಿ: ಜಿಪಂ ಸಿಇಓ ಮೀನಾ



ಕಲಬುರಗಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವರ್ಗಾವಣೆಯಗಿ ಹೋಗುತ್ತಿರುವ ಸಿಇಓ ಭಂವರ್ ಸಿಂಗ್ ಮೀನಾ ಅವರಿಗೆ ಸನ್ಮಾನಿಸಿ ಬೀಳ್ಕೊಡಲಾಯಿತು. ಜಿಲ್ಲಾಧಿಕಾರಿ ಇಕ್ರಮ ಷರೀಫ್, ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ, ಎಸ್‌ಪಿ ಅಡ್ಡೂರು ಶ್ರೀನಿವಾಸಲು ಮುಂತಾದವರಿದ್ದರು

**ಕಲಬುರಗಿ, ಮೇ. 26:** ಜಿಲ್ಲೆಯ ಅಭಿವೃದ್ಧಿಗೆ ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆ ಸಹಯೋಗದೊಂದಿಗೆ ತಂಡದ ರೂಪದಲ್ಲಿ ಕಾರ್ಯನಿರ್ವಹಿಸಿದ ತೃಪ್ತಿ ನನಗಿದೆ ಎಂದು ಜಿಪಂ ನಿರ್ಗಮಿತ ಸಿಇಓ ಭಂವರ್ ಸಿಂಗ್ ಮೀನಾ ಹೇಳಿದರು.

ಜಿಲ್ಲಾಧಿಕಾರಿಯಾಗಿ ಮುಂಬಡ್ತಿ ಪಡೆದು ವರ್ಗಾವಣೆಗೊಂಡ ಹಿನ್ನೆಲೆ ಯಲ್ಲಿ ಆಯೋಜಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿ, ಕಲಬುರಗಿ ದೊಡ್ಡ ಜಿಲ್ಲೆ. ಇಲ್ಲಿ ಕಾರ್ಯನಿರ್ವಹಿಸಿದರೆ ಬೇರೆಡೆ ಸರಳವಾಗಿ ಕಾರ್ಯನಿರ್ವಹಿಸಬಹುದೆಂಬ ಮಾತಿದೆ. ಅಂತಹ ಒಂದು ಅತ್ಮವಿಶ್ವಾಸ ಇಲ್ಲಿ ನಮಗೆ ಸಿಕ್ಕಿದ್ದು, ಮುಂದಿನ ಸೇವೆಗೆ ನೆರವಾಗಲಿದೆ ಎಂದರು.

ಜಿಲ್ಲೆಯಲ್ಲಿ ಎಲ್ಲ ಅಧಿಕಾರಿಗಳು ತಂಡದ ರೂಪದಲ್ಲಿ ಕಾರ್ಯನಿರ್ವಸಿ, ಪ್ರತಿ ಕಾರ್ಯಕ್ರಮ, ಯೋಜನೆ ಯಶಸ್ವಿಯಾಗಿ ನಿರ್ವಹಿಸುತ್ತಿದ್ದರು. ಅದು ನಮಗೆ ಸಂತಸ ತಂದಿದೆ. ಇಂತಹ ಸಂಘಟಿತ ಪ್ರಯತ್ನ ನಡೆಯಬೇಕು. ಪಂಚಾಯಿತಿಯ ಎಲ್ಲ ಅಧಿಕಾರಿಗಳು ಜನರ ಸಮಸ್ಯೆ ಆಲಿಸಿದ್ರೆ ಅರ್ಧ ಕೆಲಸ ಆದಂತೆ ಎಂಬುದನ್ನು ಮರೆಯದಿರಿ. ಉತ್ತಮ ಕಾರ್ಯನಿರ್ವಹಿಸದ ಕೆಲ ಪಿಡಿಓಗಳ ವಾರ್ಷಿಕ ವೇತನ ಬಡ್ತಿ ತಡೆ ಹಿಡಿದಿದ್ದೆ. ತದನಂತರ ಅವರುಗಳು ತಮ್ಮ ಕೆಲಸದಲ್ಲಿ ಸುಧಾರಣೆ ಕಂಡುಕೊಂಡಿದ್ದರಿಂದ ವರ್ಗಾವಣೆ ಮುಂಚೆ ಅವರ ವೇತನ ಬಡ್ತಿ ಕಡತಕ್ಕೆ ಸಹಿ ಹಾಕಿರುವೆ ಎಂದರು.

ಈ ಮಣ್ಣಿನ ವಿಶೇಷ ಅಂದ್ರೆ ಜಿಲ್ಲೆಗೆ ಬಂದ ಅಧಿಕಾರಿಗಳಿಗೆ ಒಳ್ಳೆಯ ಕೆಲಸ ಮಾಡಲಿಕ್ಕೆ ಅವಕಾಶ ಗಳನ್ನು ಕೊಡುತ್ತೆ. ಅವಕಾಶಗಳನ್ನು ಬಳಸಿ ಕೆಲಸ ಮಾಡ್ತಾರೋ ಅವ್ರು ಜನರ ನೆನಪಲ್ಲಿ ಉಳಿಯುತ್ತಾರೆ. ಅಂತಹ ಅಧಿಕಾರಿಗಳ ಪೈಕಿ ಭಂವರ್ ಸಿಂಗ್ ಮೀನಾ ಅವರು ಎಂದರೆ ತಪ್ಪಾಗಲಿಕ್ಕಿಲ್ಲ. –ಡಾ.ಶರಣಪ್ಪ ಎಸ್.ಡಿ. ಆಯುಕ್ತ, ನಗರ ಪೊಲೀಸ್.

ಜಿಪಂ ವ್ಯಾಪ್ತಿಯ ಎಲ್ಲ ಇಲಾಖೆಗಳಲ್ಲಿ ಕೆಲಸಗಳನ್ನು ಕಠಿಣ ಪರಿಶ್ರಮ, ಶ್ರದ್ಧೆಯಿಂದ ಮಾಡಿದ್ದಾರೆ. ಆದ್ದರಿಂದ ಭಂವರ್ ಸಿಂಗ್ ಮೀನಾ ಜನಮೆಚ್ಚುಗೆ ಪಡೆದಿದ್ದಾರೆ. ವೈಯಕ್ತಿಕ ವಾಗಿ ಆತ್ಮೀಯರು. ಚಿಕ್ಕಮಗಳೂರು ಜಿಲ್ಲಾಧಿಕಾರಿಯಾಗಿ ಹೋಗ್ತಿದ್ದಾರೆ. ಅವರ ಜನಪರ ಸೇವೆ ಮುಂದುವರಿಯಲಿ. –ಇಕ್ರಮ್ ಶರೀಫ್, ಜಿಲ್ಲಾಧಿಕಾರಿ.

# ಇನ್ನೇನು ಜೂನ್ ಮಳೆಗಾಲ ಬಂತು ಪ್ರವಾಹ ಎದುರಿಸಲು ಸಿದ್ಧತೆ ಮಾಡಿಕೊಳ್ಳಿ; ಜಿಲ್ಲಾಧಿಕಾರಿ ಪೂವಿತಾ



**ರಾಯಚೂರು, ಮೇ. 26:** ಇನ್ನೊಂದು ವಾರದಲ್ಲಿ ಮುಂಗಾರು ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಸಂಭವಿಸಬಹುದಾದ ಪ್ರಕೃತಿ ವಿಕೋಪ ಹಾಗೂ ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ನಗರದ ಜಿಲ್ಲಾಡಳಿತ ಕಚೇರಿಯಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಸಭೆಯ ಅಧ್ಯಕ್ಷತೆ ವಹಿಸಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ವಿಡಿಯೊ ಸಂವಾದ ನಡೆಸಿ ಮಾತನಾಡಿದ ಅವರು, ಕೃಷ್ಣಾ ಮತ್ತು ತುಂಗಭದ್ರಾ ಎರಡು ನದಿಗಳು ಜಿಲ್ಲೆಯ ಎರಡೂ ಬದಿಗೆ ಇರುವುದ ರಿಂದ ಪ್ರತಿವರ್ಷವೂ ಪ್ರವಾಹ ನಿರಂತರ ಎದುರಿಸುವಂತಾಗಿದೆ. ಬಹುತೇಕ ಎರಡೂ ನದಿಗಳಲ್ಲೂ ಪ್ರವಾಹ ಬರುವುದು ಸಾಮಾನ್ಯ ಎಂಬುದು ಹಿಂದಿನ ದಾಖಲೆಗಳನ್ನು ಗಮನಿಸಿದಗ ತಿಳಿದು ಬರುತ್ತದೆ. ಆದ್ದರಿಂದ ಹಿಂದಿನಂತೆ ಹಾನಿಯಾಗ ಕೂಡದು. ಅದಕ್ಕೆ ಅವಕಾಶವಿಲ್ಲದಂತೆ ಸಾಕಷ್ಟು ಮುಂಜಾಗ್ರತೆ ಕ್ರಮಗಳನ್ನು ಕೈಕೊಳ್ಳಬೇಕು. ಪ್ರಕೃತಿ ವಿಕೋಪದಿಂದ ಉಂಟಾ ಗುವ ಹಾನಿಗಳಿಗೆ ನಿಯಮಾನುಸಾರ ತಕ್ಷಣವೇ ಪರಿಹಾರ ವಿತರಿಸಲು ಕ್ರಮ ವಹಿಸ ಬೇಕು. ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ರೈತರ ಬೇಡಿಕೆಗೆ ಅನುಗುಣವಾಗಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಪೂರೈಕೆಯಾಗಬೇಕು. ರೈತರಿಗೆ ಯಾವುದೇ ರೀತಿಯ ತೊಂದರೆಯಾಗ ದಂತೆ ನೋಡಿ ಕೊಳ್ಳಬೇಕು ಎಂದು ಅವರು ಹೇಳಿದರು.

# ಬಸವಾದಿ ಶರಣರ ಅಧ್ಯಯನ ಶರಣಲೋಕ ಗ್ರಂಥ ಸಾಕಾರ



**ಬೀದರ, ಮೇ. 26:** ಬಸವಾದಿ ಶರಣರ ಕುರಿತ ಅಧ್ಯಯನ ಶರಣಲೋಕ ಗ್ರಂಥದ ಮೂಲಕ ಸಕಾರಗೊಂಡಿದೆ ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ನಗರದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಶುಕ್ರವಾರ ಆಯೋಜಿದ್ದ 332ನೆಯ ಮಾಸಿಕ ಶರಣ ಸಂಗಮ ಮತ್ತು ಶರಣಲೋಕ ಗ್ರಂಥ ಲೋಕಾರ್ಪಣೆ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಶರಣಲೋಕ ಗ್ರಂಥದಲ್ಲಿ ಎಲ್ಲ ಸಮುದಾಯದ ಶರಣರ ಕುರಿತು ಇದು ವರೆಗೂ 150 ಲೇಖನಗಳು ಪ್ರಕಟಗೊಂಡಿವೆ. ಪ್ರತಿಯೊಬ್ಬರು ಈ ಗ್ರಂಥ ಕೊಂಡುಕೊಂಡು ಶರಣರ ಇತಿಹಾಸ ಅರಿಯುವ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

ಗ್ರಂಥ ಲೋಕಾರ್ಪಣೆಗೊಳಿಸಿದ ಹಿರಿಯ ಪತ್ರಕರ್ತ ದೇವಯ್ಯ ಗುತ್ತೇದಾರ್ ಮಾತ ನಾಡಿದರು. ಹಿರಿಯ ಸಾಹಿತಿ ಬಂಡೆಪ್ಪ ಎಂ. ಶರಣರು ಅಧ್ಯಕ್ಷತೆ ವಹಿಸಿದರು. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಅಧ್ಯಕ್ಷ ಶಶಿಧರ ಕೋಸಂಬೆ ಬಸವ ಗುರುಪೂಜೆ ನೆರವೇರಿಸಿದರು. ಸಾಹಿತಿ ರಾಜು ಜುಬರೆ ಗ್ರಂಥ ಪರಿಚಯ ಮಾಡಿದರು. ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು. ಸಂಗಮೇಶ ಬಿ. ಬಿರಾದಾರ ಇತರರು ಇದ್ದರು.

**ಸನ್ಮಾನ:** ಇದೇವೇಳೆ ಫೋಟೋ ಗ್ರಾಫರ್ ಶರಣು ಬೆಣ್ಣೂರು ಅವರನ್ನು ಶ್ರೀಮಠದ ಪರವಾಗಿ ಸನ್ಮಾನಿಸ ಲಾಯಿತು. ಸವಿತಾ ಭೂರೆ ವಚನ ಗಾಯನ ಮಾಡಿದರು. ದೀಪಕ ಠಮಕೆ ನಿರೂಪಿಸಿದರು. ಶ್ರೀಮಠದ ವಿದ್ಯಾರ್ಥಿ ಗಳಿಂದ ಪ್ರಾರ್ಥನೆ ನೆರವೇರಿತು.


27.5.2026
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ
ಶಾಂತಿನಗರ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ
ಎನ್.ಎ.ಹ್ಯಾರಿಸ್
ಅವರಿಗೆ...
ಜನುಮದಿನದ
ಶುಭಾಶಯಗಳು
ಮೊಹಮದ್ ನಲಪಾಡ್
ಮಾಜಿ ಅಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿ
ಕರ್ನಾಟಕ ಯುವ ಕಾಂಗ್ರೆಸ್
ಶುಭ ಕೋರುವವರು:
ಅಭಿಮಾನಿಗಳು ಹಾಗೂ ಹಿತೈಷಿಗಳು,
ಶಾಂತಿನಗರ ವಿಧಾನಸಭಾ ಕ್ಷೇತ್ರ, ಬೆಂಗಳೂರು-ಕರ್ನಾಟಕ